ಸಂಪುಟ: 21, ಸಂಚಿಕೆ: 170, ಪುಟಗಳು: 8, ಶುಕ್ರವಾರ, 29 ಮಾರ್ಚ್ 2024 RNI NO. KARKAN/2002/08054
epaper: www.sanjemugilu.com


ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ವೇಣು ಸಾರಥ್ಯದಲ್ಲಿ...
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

## 10 ಸಾವಿರ ಕೆಜಿ ಗೋಮಾಂಸ ವಶ
### ಬಾಗೂರು ರಸ್ತೆ ಬಳಿ ದುರಂತ
# 60 ಗೋವುಗಳ ಕ್ಕೂ ಹೆಚ್ಚು ಮಾರಣ ಹೋಮ



**ಹಾಸನ:** ಅಕ್ರಮ ಗೋಮಾಂಸ ಮಾರಾಟಕ್ಕಾಗಿ ಜಾನುವಾರುಗಳ ಮಾರಣಹೋಮ ನಡೆಸಿದ ಘಟನೆ ಹಾಸನ ಜಿಲ್ಲೆಯ ಚನ್ನರಾಯಪಟ್ಟಣದ ಬಾಗೂರು ರಸ್ತೆ ಬಳಿ ನಡೆದಿದೆ. ಖಚಿತ ಮಾಹಿತಿ ಮೇರೆಗೆ ಪೊಲೀಸರು ದಾಳಿ ನಡೆಸಿದಾಗ 60 ಕ್ಕೂ ಹೆಚ್ಚು ಗೋವುಗಳನ್ನು ಹತ್ಯೆ ಮಾಡಿರುವುದು ಪತ್ತೆಯಾಗಿದೆ. ಗೋವುಗಳ ಹತ್ಯೆ ವಿಚಾರ ತಿಳಿದ ಕೂಡಲೇ ಮಧ್ಯರಾತ್ರಿ ಸುಮಾರು 12.30ರ ವೇಳೆಗೆ ಪೊಲೀಸರು ದಾಳಿ ನಡೆಸಿದ್ದಾರೆ. ಅಷ್ಟರಲ್ಲೇ ಕರುಗಳು ಸೇರಿದಂತೆ 60ಕ್ಕೂ ಹೆಚ್ಚು ಜಾನುವಾರಗಳನ್ನು ಹತ್ಯೆ ಮಾಡಿ ರುಂಡಗಳನ್ನು ಬೇರ್ಪಡಿಸಿ, ಕೈಕಾಲುಗಳನ್ನು ಕತ್ತರಿಸಿ, ಚರ್ಮ ಸುಲಿದು ನೇತು ಹಾಕಲಾಗಿತ್ತು. ಸದ್ಯ, ಐದು ಗೋವುಗಳನ್ನು ಪೊಲೀಸರು ರಕ್ಷಣೆ ಮಾಡಿದ್ದು, 10 ಸಾವಿರ ಕೆಜಿಗೂ ಅಧಿಕ ಗೋಮಾಂಸವನ್ನು ವಶಕ್ಕೆ ಪಡೆದಿದ್ದಾರೆ.

### ಕೆರೆಗೆ ಹರಿದ ಗೋವುಗಳ ರಕ್ತ

ಚನ್ನರಾಯಪಟ್ಟಣ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಗೋವುಗಳ ಮಾರಣಹೋಮ ನಡೆದಿದೆ. ಗೋವುಗಳನ್ನು ಹತ್ಯೆ ಮಾಡಿದ ನಂತರ ಗೋಹಂತಕರು ಗೋವುಗಳ ರಕ್ತವನ್ನು ಪಕ್ಕದ ಕೆರೆಗೆ ಹರಿಸಿದ್ದಾರೆ. ಪೊಲೀಸರು ದಾಳಿ ನಡೆಸುತ್ತಿದ್ದಂತೆ ಗೋಹಂತಕರು ಸ್ಥಳದಿಂದ ಪರಾರಿಯಾಗಿದ್ದಾರೆ.

ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆನೇಕಾ

**ಪಂಚಾಂಗ**
(ಶುಕ್ರವಾರ 29, ಮಾರ್ಚ್ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ಉತ್ತರಾಯಣ, ಶಿಶಿರ ಋತು,
- ಪಾಲ್ಗುಣ ಮಾಸ, ಕೃಷ್ಣಪಕ್ಷ,
- ಚತುರ್ಥಿ, ಶುಕ್ರವಾರ,
- ವಿಶಾಖ ನಕ್ಷತ್ರ.
- ರಾಹುಕಾಲ: 10:57 ರಿಂದ 12:29
- ಗುಳಿಕಕಾಲ: 07:53 ರಿಂದ 09:25
- ಯಮಗಂಡಕಾಲ: 03:32 ರಿಂದ 05:04

## ಸಂಕ್ಷಿಪ್ತ ಸುದ್ದಿ

### ಹೃದಯಾಘಾತ ಬಸ್‌ನಲ್ಲೇ ವ್ಯಕ್ತಿ ಸಾವು



**ಬೆಂಗಳೂರು:** ಬಿಎಂಟಿಸಿ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದ 60ರ ವೃದ್ಧರೊಬ್ಬರು ಹೃದಯಾಘಾತದಿಂದ ಸಾವನ್ನಪ್ಪಿರುವ ಘಟನೆ ಬಸವೇಶ್ವರ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಮೃತ ವ್ಯಕ್ತಿಯನ್ನು ಕೃಷ್ಣ (60) ಎಂದು ಗುರುತಿಸಲಾಗಿದೆ. ವ್ಯಕ್ತಿ ಬಸ್‌ನಲ್ಲಿ ಟಿಕೆಟ್ ಪಡೆದು ಕುಳಿತಿದ್ದ 15 ನಿಮಿಷಗಳಲ್ಲೇ ಹೃದಯಾಘಾತ ಸಂಭವಿಸಿ ವ್ಯಕ್ತಿ ಸಾವನ್ನಪ್ಪಿದ್ದಾರೆ. ಘಟನೆಯನ್ನು ಕಣ್ಣಾರೆ ಕಂಡ ಇತರೇ ಪ್ರಯಾಣಿಕರು ಬಸ್ಸಿನಲ್ಲೇ ಕಿರುಚಾಡಿದ್ದಾರೆ. ಮಜೆಸ್ಟಿಕ್‌ನಲ್ಲಿ ಬಸ್ ಹತ್ತಿದ್ದ ಮೃತ ವ್ಯಕ್ತಿ, ರಾಜಾಜೀನಗರದ ನವರಂಗ್ ವೃತ್ತದ ಬಳಿ ಬರುತ್ತಿದ್ದ ವೇಳೆ ಸಾವು ಸಂಭವಿಸಿದೆ. ಕೂಡಲೇ ಆತನನ್ನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಆದ್ರೆ ಚಿಕಿತ್ಸೆ ಕೊಡಿಸುವಷ್ಟರಲ್ಲಿ ವ್ಯಕ್ತಿ ಆಸ್ಪತ್ರೆಯಲ್ಲೇ ಮೃತಪಟ್ಟಿದ್ದಾನೆ ಎಂದು ಮೂಲಗಳು ತಿಳಿಸಿವೆ.

### ರಮೇಶ್ ಜಾರಕಿಹೊಳಿ ಅಲರ್ಟ್



ಬೆಳಗಾವಿ: ಗೋಕಾಕ್‌ಗೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಎಂಟ್ರಿಯಾದ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ಮಾಜಿ ಸಚಿವ, ಬಿಜೆಪಿ ನಾಯಕ ರಮೇಶ್ ಜಾರಕಿಹೊಳಿ ಬೆಳಗಾವಿಯಲ್ಲಿ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಭೇಟಿಯಾಗಿ ಸಮಾಲೋಚನೆ ನಡೆಸಿದ್ದಾರೆ. ಬೆಳಗಾವಿ ಹಾಲಿ ಸಂಸದೆ ಮಂಗಳಾ ಅಂಗಡಿ ಅವರ ವಿಶ್ವೇಶ್ವರಯ್ಯ ನಗರದಲ್ಲಿರುವ ನಿವಾಸದಲ್ಲಿ ಉಭಯ ನಾಯಕರ ಸಭೆ ನಡೆದಿದೆ. ಚುನಾವಣೆ ತಂತ್ರದ ಕುರಿತು ಸುದೀರ್ಘ ಚರ್ಚೆ ನಡೆದಿದ್ದು, ಬೆಳಗಾವಿಯಲ್ಲಿ ಬಿಜೆಪಿ ಗೆಲ್ಲಿಸಲು ರಮೇಶ್ ಜಾರಕಿಹೊಳಿ ಪಣ ತೊಟ್ಟಿದ್ದಾರೆ. ಒಂದೂವರೆ ಗಂಟೆಗಳ ಕಾಲ ಶೆಟ್ಟರ್ ಹಾಗೂ ರಮೇಶ್ ಜಾರಕಿಹೊಳಿ ಚುನಾವಣೆ ತಂತ್ರಗಾರಿಕೆ ಬಗ್ಗೆ ಸುದೀರ್ಘ ಚರ್ಚೆ ನಡೆಸಿದ್ದಾರೆ. ಇದೇ ವೇಳೆ, ಸೋಮವಾರದಿಂದ ಚುನಾವಣೆ ಪ್ರಚಾರಕ್ಕೆ ಬರುವುದಾಗಿ ರಮೇಶ್ ಭರವಸೆ ನೀಡಿದ್ದಾರೆ ಎ

ಪುಟ 2

#### ವೀಣಾ ಕಾಶಪ್ಪನವರ್ ಅಸಮಾಧಾನ!
## ಸಿಎಂ ಸಂಧಾನಸಭೆ ವಿಫಲ

**ಬಾಗಲಕೋಟೆ:** ಕಾಂಗ್ರೆಸ್ ಟಿಕೆಟ್ ವಂಚಿತರನ್ನು ಸಮಾಧಾನ ಮಾಡಲು ಸಿಎಂ ಸಿದ್ದರಾಮಯ್ಯ ಮಾಡಿದ್ದ ಸಂಧಾನ ಸಭೆ ವಿಫಲವಾಗಿದೆ. ಬಾಗಲಕೋಟೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಈ ಬಾರಿ ಸಚಿವ ಶಿವಾನಂದ ಪಾಟೀಲ್ ಪುತ್ರಿ ಸಂಯುಕ್ತಾ ಪಾಟೀಲ್ ಪಾಲಾಗಿದೆ. ಇದರಿಂದ ಟಿಕೆಟ್ ಆಕಾಂಕ್ಷಿಯಾಗಿದ್ದ ವೀಣಾ ಕಾಶಪ್ಪನವರ್ ಸಮಾಧಾನಗೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು ವೀಣಾ ಕಾಶಪ್ಪನವರ್ ಹಾಗೂ ಪತಿ ವಿಜಯಾನಂದ ಕಾಶಪ್ಪನವರ್ ಅನ್ನು ಮನವೊಲಿಸೋ ಪ್ರಯತ್ನ ಮಾಡಿದ್ರು. ಆದ್ರೆ ಸಂಧಾನ ಸಭೆ ವಿಫಲವಾಗಿದ್ದು, ಸಭೆಯಿಂದ ಅಸಮಾಧಾನದಿಂದಲೇ ವಿಜಯಾನಂದ ಕಾಶಪ್ಪನವರ್ ಹೊರಟರು ಎನ್ನಲಾಗಿದೆ.

ಸಿಎಂ ಸಿದ್ದರಾಮಯ್ಯ ಸಂಧಾನ ಸಭೆ ವಿಫಲ: ಬಾಗಲಕೋಟೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ ವೀಣಾ ಕಾಶಪ್ಪನವರ್ ಹಾಗೂ ಅವರ ಪತಿ ವಿಜಯಾನಂದ ಕಾಶಪ್ಪನವರ್ ಅವರನ್ನು ಸಮಾಧಾನ ಪಡಿಸಲು ಸಿಎಂ ಸಿದ್ದರಾಮಯ್ಯ ಅವರು ಮಾಡಿರುವ ಸಂಧಾನ ಸಭೆ ವಿಫಲವಾಗಿದೆ. ಸಿಎಂ ಗೃಹಕಚೇರಿ ಕೃಷ್ಣಾದಲ್ಲಿ ಸಿದ್ದರಾಮಯ್ಯ ನೇತೃತ್ವದಲ್ಲಿ ಸಭೆ ನಡೆದಿದ್ದು,



ಸಭೆಯಿಂದ ಅಸಮಾಧಾದಿಂದಲೇ ವಿಜಯಾನಂದ ಕಾಶಪ್ಪನವರ್ ಹೊರಗೆ ಬಂದಿದ್ದಾರೆ ಎನ್ನಲಾಗಿದೆ. ಟಿಕೆಟ್ ಸಿಗದೇ ಅಸಮಾಧಾನಗೊಂಡಿರೋ ವೀಣಾ ಕಾಶಪ್ಪನವರ್ ಹಾಗೂ ಪತಿ ವಿಜಯಾನಂದ ಕಾಶಪ್ಪನವರ್ ಜೊತೆ ಸಿಎಂ ಮಾತುಕತೆ ನಡೆಸಿದ್ರು. ಈಗಾಗಲೇ ಘೋಷಿಸಿರುವ ಬಾಗಲಕೋಟೆ ಟಿಕೆಟ್ ಬದಲಾಯಿಸೋದಕ್ಕೆ ಸಾಧ್ಯವಿಲ್ಲ.

#### ಐಟಿ ಕಂಪನಿಗಳಿಗೆ ಜಲ ಮಂಡಳಿ ಭರವಸೆ
## ನೀರಿನ ಸಮಸ್ಯೆ ಸರಿಪಡಿಸುತ್ತೇವೆ

**ಬೆಂಗಳೂರು:** ಬೆಂಗಳೂರು ನಗರದಲ್ಲಿರುವ ಎಲ್ಲ ಐಟಿ ಕಂಪನಿಗಳಿಗೆ ಸಾಕಷ್ಟು ನೀರು ಪೂರೈಸಲಾಗುವುದು. ಈ ವಿಚಾರದಲ್ಲಿ ಯಾವುದೇ ರೀತಿಯ ಭಯಪಡುವ ಅಗತ್ಯವಿಲ್ಲ ಎಂದು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಭರವಸೆ ನೀಡಿದೆ. ಮನೆಯಿಂದಲೇ ಕೆಲಸದ ಬೇಡಿಕೆ ಮತ್ತು ನೀರಿನ ಬಿಕ್ಕಟ್ಟಿನಿಂದಾಗಿ ಅನೇಕ ಐಟಿ ಕಂಪನಿಗಳು ನೆಲೆಯನ್ನು ಬದಲಾಯಿಸಲು ನೆರೆಯ ರಾಜ್ಯಗಳಿಂದ ಆಹ್ವಾನ ಸ್ವೀಕರಿಸುತ್ತಿವೆ ಎಂಬ ವದಂತಿಗಳ ಬೆನ್ನಲ್ಲೇ, ಮಂಡಳಿ ಅಧ್ಯಕ್ಷ ರಾಮಪ್ರಸಾತ್ ಮನೋಹರ್ ವಿ ಗುರುವಾರ ಹೊರ ವರ್ತುಲ ರಸ್ತೆ ಕಂಪನಿಗಳ ಸಂಘದೊಂದಿಗೆ ಸಭೆ ನಡೆಸಿದರು. ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದರು. ಐಟಿ ಕಂಪನಿಗಳಿಗೆ ಸಾಕಷ್ಟು ನೀರು ದೊರೆಯುವಂತೆ




ಮಾಡಲಿದ್ದೇವೆ. ನಗರದಾದ್ಯಂತ ನೀರು ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ನಾವು ಕ್ರಮಗಳನ್ನು ಕೈಗೊಂಡಿದ್ದೇವೆ ಮತ್ತು ಕಂಪನಿಗಳಿಗೆ ಕೂಡ ಇದೇ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಅವರು ಹೇಳಿದರು. ಕಂಪನಿಗಳು ನೀರನ್ನು ಎಚ್ಚರಿಕೆಯಿಂದ ಬಳಸುವುದನ್ನು ಖಚಿತಪಡಿಸಿಕೊಳ್ಳಬೇಕು ಮತ್ತು ಅನಗತ್ಯ ಉದ್ದೇಶಗಳಿಗಾಗಿ ನೀರಿನ ದುರ್ಬಳಕೆಯಾಗದಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಪುಟ 2

#### ಕಾಂಗ್ರೆಸ್‌ಗೆ ಶ್ರೀನಿವಾಸ್ ಪ್ರಸಾದ್ ಬೆಂಬಲ?
## ಬಿಜೆಪಿ ನಡೆಗೆ ಬೇಸರ

**ಮೈಸೂರು:** ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಬಿಜೆಪಿ ಸಂಸದ ವಿ. ಶ್ರೀನಿವಾಸ್ ಪ್ರಸಾದ್ ಅವರನ್ನು ತನ್ನತ್ತ ಸೆಳೆಯುವ ಕಾಂಗ್ರೆಸ್ ತಂತ್ರ ಫಲಿಸಿದೆ ಎನ್ನಲಾಗುತ್ತಿದೆ.



ಅಳಿಯನಿಗೆ ಲೋಕಸಭಾ ಚುನಾವಣೆಗೆ ಟಿಕೆಟ್ ಕೊಡಿಸುವ ಶ್ರೀನಿವಾಸ್ ಪ್ರಸಾದ್ ಪ್ರಯತ್ನ ವಿಫಲವಾಗಿದೆ. ಹೀಗಾಗಿ ಪಕ್ಷದ ನಡೆಗೆ ಪ್ರಸಾದ್ ಬೇಸರಗೊಂಡಿದ್ದಾರೆ. ಮೈಸೂರು, ಚಾಮರಾಜನಗರ ಕ್ಷೇತ್ರ ಗೆಲ್ಲಲು ಪ್ರಯತ್ನಿಸುತ್ತಿರುವ ಕಾಂಗ್ರೆಸ್, ಇದನ್ನೇ ಬಂಡವಾಳ ಮಾಡಿಕೊಳ್ಳಲು ಮುಂದಾಗಿದೆ.

ಪುಟ 2

#### ಬಿಜೆಪಿ–ಜೆಡಿಎಸ್ ಸಮನ್ವಯ ಸಮಿತಿ ಸಭೆಗೆ ಸುಮಲತಾ ಗೈರು
## ನಾಳೆ ಬೆಂಬಲಿಗರ ಜತೆ ಸಮಾಲೋಚನೆ

**ಬೆಂಗಳೂರು:** ಲೋಕಸಭಾ ಚುನಾವಣೆಗೆ ರಾಜ್ಯದಲ್ಲಿ ಮೈತ್ರಿ ಮಾಡಿಕೊಂಡಿರುವ ಬಿಜೆಪಿ ಮತ್ತು ಜೆಡಿಎಸ್ ಸಮನ್ವಯ ಸಮಿತಿ ಸಭೆ ನಡೆದಿದೆ. ಈ ಸಭೆಗೆ ಸಂಸದೆ ಸುಮಲತಾ ಅಂಬರೀಷ್ ಗೈರಾಗಿರುವುದು ಭಾರೀ ಕುತೂಹಲ ಮೂಡಿಸಿದೆ.

ಮಂಡ್ಯ ಲೋಕಸಭಾ ಕ್ಷೇತ್ರ ಜೆಡಿಎಸ್ ಪಾಲಾಗಿದ್ದರಿಂದ ತೀವ್ರ ಅಸಮಾಧಾನಗೊಂಡಿರುವ ಸಂಸದೆ ಸುಮಲತಾ ಮೌನಕ್ಕೆ ಶರಣಾಗಿದ್ದಾರೆ. ಸುಮಲತಾ ಮೌನ ನಡೆಗೆ ಮೈತ್ರಿ ನಾಯಕರು ಮುನಿಸು ಪ್ರದರ್ಶಿಸುತ್ತಿರುವಂತೆ ಕಂಡು ಬರುತ್ತಿದೆ. ಹೀಗಾಗಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಚಿವರಾದ ಡಾ.ಸಿ.ಎನ್.ಅಶ್ವತ್ಥನಾರಾಯಣ, ಕೆ.ಸಿ.ನಾರಾಯಣಗೌಡ ಅವರೂ ಸಹ ಸುಮಲತಾ ಹೆಸರನ್ನು ಸ್ಮರಿಸುವ ಗೋಜಿಗೂ ಹೋಗಲಿಲ್ಲ.

ಇನ್ನೂ ಮಂಡ್ಯ ಕ್ಷೇತ್ರದ ಬಿಜೆಪಿ ಟಿಕೆಟ್



ಕೈತಪ್ಪಿರುವ ಹಿನ್ನೆಲೆಯಲ್ಲಿ ಸಂಸದೆ ಸುಮಲತಾ ಅವರು ಶನಿವಾರ (ಮಾ.30) ಬೆಂಗಳೂರಿನ ತಮ್ಮ ನಿವಾಸದಲ್ಲಿ ಬೆಂಬಲಿಗರು, ಆಪ್ತರ ಸಭೆ ಕರೆದಿದ್ದು ತಮ್ಮ ಮುಂದಿನ ರಾಜಕೀಯ ನಡೆಯನ್ನು ನಿರ್ಧರಿಸಲಿದ್ದಾರೆ.

ಮಾರ್ಚ್ 30 ರಂದು ಮಧ್ಯಾಹ್ನ 2.30ಕ್ಕೆ ಸಭೆ ನಿಗದಿಪಡಿಸಿದ್ದು, ಮುಂದಿನ ರಾಜಕೀಯ ನಡೆ ಹೇಗಿರಬೇಕೆಂಬ ಬಗ್ಗೆ ಅಭಿಪ್ರಾಯ ಸಂಗ್ರಹಿಸಲಿದ್ದಾರೆ. ಬಿಜೆಪಿಗೆ ಅಧಿಕೃತವಾಗಿ ಸೇರ್ಪಡೆಯಾಗುವ ಮೂಲಕ ಜೆಡಿಎಸ್–ಬಿಜೆಪಿ ಮೈತ್ರಿ ಒಪ್ಪಿ ಮೈತ್ರಿ ಧರ್ಮ ಪಾಲಿಸುವುದೋ ಅಥವಾ ಬಿಜೆಪಿ ಹೈಕಮಾಂಡ್‌ನಿಂದ ಸಿಗಬಹುದಾದ ಸ್ಥಾನ–ಮಾನಗಳನ್ನು ನಿರೀಕ್ಷಿಸುವುದೋ ಅಥವಾ ರಾಜಕೀಯವಾಗಿ ತಟಸ್ಥ ಧೋರಣೆ ಅನುಸರಿಸುವುದೋ ಎಂಬ ಬಗ್ಗೆ ನಿರ್ಧಾರ ಕೈಗೊಳ್ಳಲಿದ್ದಾರೆ.

#### ಬೆಂಗಳೂರು ಕೆಫೆ ಸ್ಫೋಟ ಕೇಸ್
## ಸಹ ಸಂಚುಕೋರನ ಬಂಧನ




ಬೆಂಗಳೂರು: ಎನ್‌ಐಎಗೆ ಸವಾಲಾಗಿದ್ದ ರಾಮೇಶ್ವರಂ ಕೆಫೆ ಸ್ಫೋಟ ಪ್ರಕರಣದಲ್ಲಿ ಕೊನೆಗೂ ಬೇಟೆ ಆರಂಭವಾಗಿದೆ. ದೇಶದ ಹಲವು ಕಡೆ ದಾಳಿ ನಡೆಸಿದ್ದ ಅಧಿಕಾರಿಗಳು ಸಾಕ್ಷಿಗಳನ್ನು ಸಂಗ್ರಹಿಸುವುದರ ಜೊತೆಗೆ ಸ್ಫೋಟಕ್ಕೆ ಸಂಚು ರೂಪಿಸಿದವರಿಗೆ ಸಹಾಯ ಮಾಡಿದ್ದ ಸಂಚುಕೋರನೊಬ್ಬನನ್ನು ಬಂಧಿಸಿದ್ದಾರೆ.

ಮಾ.1 ರಂದು ಐಟಿಪಿಎಲ್ ಬಳಿಯ ರಾಮೇಶ್ವರಂ ಕೆಫೆಯಲ್ಲಿ ನಡೆದ ಬಾಂಬ್ ಸ್ಫೋಟ ಉಗ್ರರ ಕೃತ್ಯ ಎನ್ನುವುದು ಬಯಲಾಗಿತ್ತು. ಆದರೆ ಕೃತ್ಯ ಎಸಗಿದವರು ಮಾತ್ರ ಪತ್ತೆ ಇರಲಿಲ್ಲ. ಸತತ ಹಲವು ದಿನಗಳ ಕಾರ್ಯಾಚರಣೆ ಬಳಿಕ ಉಗ್ರ ಗುಂಪಿನ ಸಂಚುಕೋರನನ್ನು ಬಂಧಿಸಿದ್ದಾರೆ.

ಪುಟ 2

#### ಇಂದು ಆರ್‌ಸಿಬಿ V/S ಕೆಕೆಆರ್
## ಹೈವೋಲ್ಟೇಜ್ ಕದನ






ತವರು ಮೈದಾನ ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಇಂದು ಕೋಲ್ಕತಾ ನೈಟ್ ರೈಡರ್ಸ್ ತಂಡವನ್ನು ಎದುರಿಸಲು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಸಜ್ಜಾಗಿದೆ.

ಪುಟ 8




**ಕೇಪ್‌ಟೌನ್:** ದಕ್ಷಿಣ ಆಫ್ರಿಕಾದ ಲಿಂಪೊಪೊ ಪ್ರಾಂತ್ಯದಲ್ಲಿ ಈಸ್ಟರ್ ಸಮ್ಮೇಳನಕ್ಕೆ ತೆರಳುತ್ತಿದ್ದ ಬಸ್ ಸೇತುವೆ ಮೇಲಿನಿಂದ ಬಿದ್ದ ಪರಿಣಾಮ ಕನಿಷ್ಠ 45 ಜನರು ಸಾವನ್ನಪ್ಪಿದ್ದಾರೆ. ಒಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೃತರೆಲ್ಲರೂ ನೆರೆಯ ರಾಷ್ಟ್ರವಾದ ಬೋಟ್ಸ್ವಾನಾದ ರಾಜಧಾನಿ ಗ್ಯಾಬೊರೊನ್‌ನಿಂದ ಈಸ್ಟರ್ ಸಮ್ಮೇಳನಕ್ಕಾಗಿ ಚರ್ಚ್‌ಗೆ ಪ್ರಯಾಣಿಸುತ್ತಿದ್ದ ಯಾತ್ರಾರ್ಥಿಗಳು ಎಂದು ದಕ್ಷಿಣ ಆಫ್ರಿಕಾ ಬ್ರಾಡ್‌ಕಾಸ್ಟಿಂಗ್ ಕಾರ್ಪೊರೇಷನ್ (ಎಸ್‌ಎಬಿಸಿ) ತಿಳಿಸಿದೆ. ಎಂಟು ವರ್ಷದ ಬಾಲಕಿ ಮಾತ್ರ ಬದುಕುಳಿದಿದ್ದಾಳೆ ಎಂದು ಎಸ್‌ಎಬಿಸಿ ಹೇಳಿದೆ. ಆಕೆಯನ್ನು ಆಸ್ಪತ್ರೆಗೆ ಏರ್‌ಲಿಫ್ಟ್ ಮಾಡಲಾಗಿದೆ. ಮೊಕೊಪಾನೆ ಮತ್ತು ಮಾರ್ಕೆನ್ ನಡುವಿನ ಮಮತ್ಲಕಲಾ ಪರ್ವತದ ಹಾದಿಯಲ್ಲಿ ಅಪಘಾತ ಸಂಭವಿಸಿದೆ. ಬಸ್ ಬಿದ್ದ ನಂತರ ಬೆಂಕಿ ಹೊತ್ತಿಕೊಂಡಿದೆ ಎಂದು ವರದಿಯಾಗಿದೆ.

# ಶಾಂತಿಯ ಮಾರ್ಗದಲ್ಲಿ ರಂಗಭೂಮಿ ಮತ್ತು ಸಿನಿಮಾ ಸಾಗಬೇಕು



**ಬೆಂಗಳೂರು:** ನಗರದ ಜೆ ಸಿ ರಸ್ತೆಯ ಕನ್ನಡ ಭವನದ ವರ್ಣ ಆರ್ಟ್ ಗ್ಯಾಲರಿಯಲ್ಲಿ ಕರ್ನಾಟಕ ಚಲನಚಿತ್ರ ಪೋಷಕ ಕಲಾವಿದರ ಸಂಘ (ರಿ) ವತಿಯಿಂದ ವಿಶ್ವ ರಂಗಭೂಮಿ ದಿನಾಚರಣೆಯನ್ನ ಆಯೋಜಿಸಲಾಗಿತ್ತು. ರಂಗ ಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ

ಸಂಘದ ಅಧ್ಯಕ್ಷರಾದ ಪದ್ಮಿನಿ ನಂದಾ ಸ್ವಾಗತಿಸಿದರು, ಪ್ರಧಾನ ಕಾರ್ಯದರ್ಶಿ ಹಿರಿಯ ನಟ ಮೂಗ್ ಸುರೇಶ್ ಪ್ರಸ್ತಾವಿಕವಾಗಿ ಮಾತನಾಡಿದರು, ಸಮಾರಂಭದ ಅಧ್ಯಕ್ಷತೆಯನ್ನ ಹಿರಿಯ ನಟ ದೊಡ್ಡಣ್ಣ ವಹಿಸಿದ್ದರು. ಗೌರವ ಅತಿಥಿಯಾಗಿ ಕರ್ನಾಟಕ ನಾಟಕ ಅಕಾಡಮಿ ಅಧ್ಯಕ್ಷರಾದ ಕೆ ವಿ ನಾಗರಾಜ್ ಮೂರ್ತಿ ವಹಿಸಿದ್ದರು. ಹಿರಿಯ ಕಲಾವಿದೆ ಎಂ ಎನ್ ಲಕ್ಷ್ಮಿ ದೇವಿ ಜ್ಯೋತಿ ಬೆಳಗಿಸುವ ಮುಖಾಂತರ ವಿಶ್ವ ರಂಗಭೂಮಿ ಸಮಾರಂಭಕ್ಕೆ ಚಾಲನೆ ನೀಡಿದರು

ರಂಗ ಭೂಮಿಯಿಂದ ಬೆಳ್ಳಿ ತೆರೆಗೆ ಬಂದಿರುವ ಹಿರಿಯ ಕಲಾವಿದರುಗಳಾದ ರಮೇಶ್ ಭಟ್, ಎಂ ಎಸ್ ಉಮೇಶಣ್ಣ, ಸುಂದರ್ ರಾಜ್, ಮಾಲಾತಿಶ್ರೀ ಮೈಸೂರ್, ಸುಂದರಶ್ರೀ, ಹಿರಿಯ ರಂಗಕರ್ಮಿ ಹಾಗೂ ರಂಗತಜ್ಞ ಜಿ. ಶ್ರೀನಿವಾಸ್ ಕಪ್ಪಣ್ಣ, ರಂಗಭೂಮಿಯ ನಿರ್ದೇಶಕ ಚಿಂದೊಡಿ ಬಂಗಾರೇಶ್, ಕಿರುತೆರೆ ಹಾಗೂ ಹಿರಿತೆರೆ ನಿರ್ದೇಶಕ ಬಿ ಸುರೇಶ್, ರಂಗಕಾರ್ಮಿಗಳು, ಖ್ಯಾತ ಸಂಗೀತ ನಿರ್ದೇಶಕ ನಾಧ ಬ್ರಹ್ಮ ಹಂಸಲೇಖರವರು, ಸಮಾರಂಭಕ್ಕೆ ಆಗಮಿಸಿ ಭಾಗವಹಿಸಿ ರಂಗಭೂಮಿಯಿಂದ ಸಿನಿಮಾದೆಡೆಗೆ ವಿಷಯ ಕುರಿತು ತುಂಬಾ ಅರ್ಥಪೂರ್ಣವಾಗಿ ವಿಷಯ ಮಂಡಿಸಿ ಮಾತನಾಡುತ್ತ ಅನೇಕ ಕಲಾವಿದರು ರಂಗಭೂಮಿಯಲ್ಲಿ ಪಳಗಿ ಸಿನಿಮಾ ರಂಗಕ್ಕೆ ಬಂದಿದ್ದಾರೆ ಆದರೆ ಅವರು ರಂಗ ಭೂಮಿಯನ್ನ ಬಿಡದೆ ಮುಖ ಮಾಡಿರಬೇಕು, ನಟನೆಯ ಗಟ್ಟಿ ನೆಲೆ ರಂಗಭೂಮಿ, ಡಾ. ರಾಜ್ ಕುಮಾರ್ ಜನಪ್ರಿಯ ನಟರಾದರೂ ರಂಗಭೂಮಿಯಿಂದ ದೂರಗಿರಲಿಲ್ಲ, ರಂಗ ಭೂಮಿಯಲ್ಲಿ ಶಾಂತಿಯಿದೆ. ಮಹಾತ್ಮ ಗಾಂಧೀಜಿಯಂತೆ ಶಾಂತಿ ಮಂತ್ರದಿಂದ ಎಲ್ಲವನ್ನು ಗೆಲ್ಲಬೇಕು, ಅಖಇಂಖ -ಓಗಅಖಇಂಖ ಘೋಷಣೆಯಲ್ಲಿ ರಂಗಭೂಮಿ ಮತ್ತು ಸಿನಿಮಾ ಸಾಗಬೇಕು. ಪೋಷಕ ಕಲಾವಿದರು ಕಷ್ಟದಲ್ಲಿದ್ದಾರೆ ಅವರಿಗೆ ಸರ್ಕಾರದಿಂದ ನೆರವು ದೊರೆಯಬೇಕು ಆದರೂ ಕಲಾವಿದರು ಎದೆಗುಂದದೆ ಮುನ್ನುಗ್ಗಬೇಕು ಎನ್ನುವ ಸಾರಾಂಶವನ್ನ ವ್ಯಕ್ತಪಡಿಸಿದರು, ಸುಮಾರು

ಎರಡೂವರೆ ಗಂಟೆಗಳ ಕಾಲ ನಡೆದ ಸಮಾರಂಭದಲ್ಲಿ 200 ಕ್ಕು ಹೆಚ್ಚು ಕಲಾವಿದರು, ಕಲಾಸಕ್ತರು ಕಿಕ್ಕಿರಿದು ಸೇರಿದ್ದರು. ರಂಗಭೂಮಿಯಿಂದ ಹಿರಿ -ಕಿರುತೆರೆಗೆ ಬಂದ ಕಲಾವಿದರಿಗೆ, ಸಂಗೀತ ನಿರ್ದೇಶಕ ಶ್ರೀ ಹಂಸಲೇಖ ಅವರಿಗೆ ಚಿತ್ರ ನಿರ್ದೇಶಕರಿಗೆ ಸಂಘದಿಂದ ಹೃದಯಸ್ಪರ್ಶ ಆತ್ಮೀಯವಾಗಿ ಸತ್ಕಾರಿಸಲಾಯಿತು. . ಈ ಸಂದರ್ಭದಲ್ಲಿ ಸಂಗೀತ ನಿರ್ದೇಶಕ ನಾಥ ಬ್ರಹ್ಮ ಹಂಸಲೇಖರವರು ಕರ್ನಾಟಕ ಚಲನಚಿತ್ರ ಪೋಷಕ ಕಲಾವಿದರ ಸಂಘಕ್ಕೆ 50025/- ರೊಪಾಯಿಗಳ ದೇಣಿಗೆ ನೀಡುವುದಾಗಿ ಘೋಷಿಸಿದರು. ಶಿವಮೊಗ್ಗ ಭಾಸ್ಕರ್ ಮತ್ತು ನಾಗರಾಜ್ ಕಾರ್ಯಕ್ರಮ ನಿರೋಪಿಸಿದರು. ಕಾರ್ಯಕ್ರಮವನ್ನ ಸಂಘದ ಪರವಾಗಿ ನಟ ಶ್ರೀ ಮೂಗ್ ಸುರೇಶ್ ಸಂಯೋಜಿಸಿದ್ದರು ನಟ ದೊಡ್ಡಣ್ಣನವರು ಮಾರ್ಗದರ್ಶನ ನೀಡಿದ್ದರು.

# ಕಾಂಗ್ರೆಸ್‌ನಲ್ಲಿ ನೀವು ಯಾರು ಅಲ್ಲಿ ನೀವು ವಲಸಿಗರು ಅಲ್ವಾ ಸಿಎಂ ಸಿದ್ದರಾಮಯ್ಯಗೆ ಟಾಂಗ್

**ಮೈಸೂರು:** ನನ್ನನ್ನು ವಲಸಿಗ ಎಂದು ಹೇಳಿದ್ದಾರೆ. ಆದರೆ, ಕಾಂಗ್ರೆಸ್‌ನಲ್ಲಿ ನೀವು ಯಾರು ಅಲ್ಲಿ ನೀವು ವಲಸಿಗರು ಅಲ್ವಾ ಮೂಲ ಕಾಂಗ್ರೆಸ್ಸಿಗರನ್ನು ಕಸದಬುಟ್ಟಿಗೆ ಹಾಕಿ ಅಧಿಕಾರ ಮಾಡುತ್ತಿಲ್ಲವಾ ಎಂದು ಸಿಎಂ ಸಿದ್ದರಾಮಯ್ಯಗೆ ಮಾಜಿ ಸಿಎಂ



ಕುಮಾರಸ್ವಾಮಿ ಟಾಂಗ್ ಕೊಟ್ಟರು. ಮಗನನ್ನ ಗೆಲ್ಲಿಸಿಕೊಳ್ಳಲು ಆಗಲಿಲ್ಲ. ಹೆಚ್.ಡಿಕೆ ಮಂಡ್ಯದಲ್ಲಿ ಸೋಲುತ್ತಾರೆ ಎಂಬ ಸಿಎಂ ಸಿದ್ದರಾಮಯ್ಯ ಹೇಳಿಕೆ ಕುರಿತು ಮಾತನಾಡಿದ ಹೆಚ್.ಡಿ ಕುಮಾರಸ್ವಾಮಿ, ಸಿಎಂ ಸ್ಥಾನದಲ್ಲಿದ್ದುಕೊಂಡು ಅಧಿಕಾರ ನಡೆಸೋದು ಬಿಟ್ಟು ನನ್ನ ಸೋಲಿನ ಬಗ್ಗೆ ಹೇಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಯಾವಾಗ ಜ್ಯೋತಿಷಿಯಾದರು ಎಂದು ಕಿಡಿಕಾರಿದರು. ಮಗನನ್ನು ಗೆಲ್ಲಿಸಿಕೊಳ್ಳಲು ಆಗಲಿಲ್ಲ ಎಂದು ಸಿದ್ದರಾಮಯ್ಯ ಅವರು ಟೀಕಿಸಿದ್ದಾರೆ. ಮಗನ ಸೋಲಿಗೆ ಈ ಮಹಾನುಭಾವರು ಎಷ್ಟು ಕಾರಣ ಎಂಬುದು ಗೊತ್ತಿದೆ. ಅದರ ಆಧಾರದ ಮೇಲೆ ಇವರು ಈಗ ಮಾತನಾಡುತ್ತಿದ್ದಾರೆ. ಎಲ್ಲದಕ್ಕೂ ಜನರು ಉತ್ತರ ಕೊಡುತ್ತಾರೆ ಎಂದು ವಾಗ್ದಾಳಿ ನಡೆಸಿದರು. ನಾನು ಕನ್ನಡಿಗ ಎಲ್ಲಿ ಬೇಕಾದರೂ ನಾನು ಸ್ಪರ್ಧೆ ಮಾಡಬಹುದು. ಈ ಬಾರಿ ಮಂಡ್ಯದಲ್ಲಿ ಹಳೆಯ ಸ್ನೇಹಿತರ ಜೊತೆ ಸ್ಪರ್ಧೆ ಎದುರಿಸಬೇಕು. ಸ್ನೇಹಿತರ ಎದುರು ಸ್ಪರ್ಧೆಗಿಳಿಯುತ್ತಿರುವುದು ನನ್ನ ಹಣೆಬರಹ ಎಂದರು.

# ನಾನು ಒಕ್ಕಲಿಗ: ಜಾತಿ ಪ್ರಮಾಣಪತ್ರ ಪ್ರದರ್ಶಿಸಿದ ಲಕ್ಷ್ಮಣ್



**ಮೈಸೂರು:** ನಾನು ಒಕ್ಕಲಿಗ ಸಮುದಾಯದ ಮತ ಸೆಳೆಯುತ್ತೇನೆ ಎಂಬ ಆತಂಕದಿಂದ ಬಿಜೆಪಿಯು ಜನರಲ್ಲಿ ಗೊಂದಲ ಸೃಷ್ಟಿಸುವ ಪ್ರಯತ್ನ ಮಾಡುತ್ತಿದೆ ಎಂದು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಎಂ. ಲಕ್ಷ್ಮಣ ದೂರಿದರು. ಚಾಮುಂಡಿಬೆಟ್ಟದಲ್ಲಿ ಗುರುವಾರ ಪೂಜೆ ಸಲ್ಲಿಸಿದ ಸಂದರ್ಭ ಮಾಧ್ಯಮದ ಎದುರು ತಮ್ಮ ಜಾತಿ ಪ್ರಮಾಣಪತ್ರ ಪ್ರದರ್ಶಿಸಿ ಅವರು ಮಾತನಾಡಿದರು. ನಾನು ನನ್ನ ಹೆಸರನ್ನು ಲಕ್ಷ್ಮಣ ಗೌಡ ಎಂದು ಇಟ್ಟುಕೊಂಡಿಲ್ಲ. ಹಾಗೆಂದು ಒಕ್ಕಲಿಗ ಜಾತಿ ಬಿಟ್ಟು ಬೇರೊಂದು ಜಾತಿ-ಮತಕ್ಕೆ ಮತಾಂತರ ಆಗಿಲ್ಲ. ಒಕ್ಕಲಿಗ ಎಂದು ಮೈಸೂರು ತಹಶೀಲ್ದಾರ್ ಜಾತಿ ಪ್ರಮಾಣಪತ್ರ ನೀಡಿದ್ದಾರೆ ಎಂದು ವಿವರಿಸಿದರು. ನೆಲಮಂಗಲದ ಹಳ್ಳಿಯೊಂದರಲ್ಲಿ ಹುಟ್ಟಿದ ನಾನು ಮೈಸೂರಿಗೆ ಬಂದು ಬದುಕು ಕಟ್ಟಿಕೊಂಡು 35 ವರ್ಷ ಆಯಿತು. ನನ್ನ ಮಡದಿ ನಗರದ ಕೆ.ಜಿ. ಕೊಪ್ಪಲಿನವರು. ನನ್ನ ಜಾತಿಯ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಅಪಪ್ರಚಾರ ಮಾಡುತ್ತ ಜನರಲ್ಲಿ ಗೊಂದಲ ಸೃಷ್ಟಿಸುವ ಕೀಳು ರಾಜಕಾರಣವನ್ನು ಬಿಜೆಪಿ ಹಾಗೂ ಅದರ ಸಂಸದರು ಬಿಡಬೇಕು ಎಂದರು. 2014ರಲ್ಲಿ ಪ್ರತಾಪ ಸಿಂಹ ಎಲ್ಲಿಂದಲೋ ಬಂದು ಇಲ್ಲಿ ಬಿಜೆಪಿ ಅಭ್ಯರ್ಥಿಯಾಗಿ ನಿಂತು ಒಕ್ಕಲಿಗರನ್ನು ಸೆಳೆಯಲು ತಮ್ಮ ಹೆಸರನ್ನು ಪ್ರತಾಪ ಸಿಂಹ ಗೌಡ ಎಂದು ಬದಲಿಸಿಕೊಂಡಿದ್ದರು. ಒಕ್ಕಲಿಗ ಸಮುದಾಯವು ಅವರನ್ನು ಎರಡು ಬಾರಿ ಬೆಂಬಲಿಸಿದೆ. ಈ ಬಾರಿ ನನ್ನನ್ನು ಬೆಂಬಲಿಸಿ ಎಂದು ಕೋರುತ್ತಿದ್ದೇನೆ. ಅದರಲ್ಲಿ ತಪ್ಪೇನಿದೆ ಎಂದು ಪ್ರಶ್ನಿಸಿದರು. ಬಳಿಕ ಅವರು ನಗರದ ಹೆಬ್ಬಾಳಿನಲ್ಲಿರುವ ಆದಿಚುಂಚನಗಿರಿ ಶಾಖಾ ಮಠಕ್ಕೆ ಭೇಟಿ ನೀಡಿ ಸೋಮೇಶ್ವರನಾಥ ಸ್ವಾಮೀಜಿ ಅವರ ಬೆಂಬಲ ಕೋರಿದರು. ಕಾಂಗ್ರೆಸ್ ಜಿಲ್ಲಾ ಗ್ರಾಮಾಂತರ ಘಟಕದ ಅಧ್ಯಕ್ಷ ಬಿ.ಜೆ. ವಿಜಯಕುಮಾರ್, ನಗರ ಘಟಕದ ಅಧ್ಯಕ್ಷ ಆರ್. ಮೂರ್ತಿ, ಪ್ರಧಾನ ಕಾರ್ಯದರ್ಶಿ ಶಿವಣ್ಣ, ಮುಖಂಡ ಎಂ.ಕೆ. ಸೋಮಶೇಖರ್ ಇದ್ದರು.

# ಅದ್ದೂರಿ ಕಲ್ಲುಗಾಲಿ ರಥೋತ್ಸವ ಸಮಾರಂಭ



**ವಿಜಯಪುರ:** ಸಾಮಾಜಿಕ ಹಾಗೂ ಆಧ್ಯಾತ್ಮಿಕತೆಯ ಮೂಲಕ ಉನ್ನತಿ ಸಾಧಿಸಿ, ದೇವರ ಕೃಪೆಗೆ ಪಾತ್ರರಾಗಲು ಜಾತ್ರೆ ರಥೋತ್ಸವಗಳನ್ನು ನಡೆಸಲಾಗುತ್ತಿದೆ ಎಂದು ಶಿರಾ ತಾಲ್ಲೂಕಿನ ಪಟ್ಟನಾಯಕನಹಳ್ಳಿಯ ಶ್ರೀ ಗುರುಗುಂಡಬ್ರಹ್ಮೇಶ್ವರಸ್ವಾಮಿ ಸಂಸ್ಥಾನ ಮಠಾಧ್ಯಕ್ಷ ಶ್ರೀ ನಂಜಾವಧೂತ ಸ್ವಾಮೀಜಿರವರು ತಿಳಿಸಿದರು.

ಅವರು ಇಲ್ಲಿನ ಗುರಪ್ಪನಮಠದಲ್ಲಿರುವ ಇತಿಹಾಸ ಪ್ರಸಿದ್ಧ ಶ್ರೀ ಓಂಕಾರೇಶ್ವರಸ್ವಾಮಿ ದೇವಾಲಯದಲ್ಲಿ, ಶ್ರೀ ೀ ಓಂಕಾರೇಶ್ವರಸ್ವಾಮಿ ವಕ್ಕಲಿಗರ ಟ್ರಸ್ಟ್ ಆಶ್ರಯದಲ್ಲಿ ಏರ್ಪಡಿಸಿದ್ದ 57 ನೇ ವರ್ಷದ ಶಿವಸಪ್ತಾಹ ಮತ್ತು ಪ್ರಸನ್ನ ಶ್ರೀ ಓಂಕಾರೇಶ್ವರಸ್ವಾಮಿ ಕಲ್ಲುಗಾಲಿ ಬ್ರಹ್ಮರಥೋತ್ಸವದ ಪ್ರಯುಕ್ತ ನಾನಾ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ರಥೋತ್ಸವಕ್ಕೆ ಚಾಲನೆ ನೀಡಿ, ಆಶೀರ್ವಚನ ನೀಡಿದರು.

ಸುಮಾರು 250 ವರ್ಷಗಳ ಹಿಂದೆ ಸ್ಥಾಪನೆಗೊಂಡ ಗುರಪ್ಪನ ಮಠ ಹಾಗೂ ಶಿರಾ ಪಟ್ಟನಾಯಕನಹಳ್ಳಿಯ ಗುರುಗುಂಡ ಬ್ರಹ್ಮೇಶ್ವರ ಸ್ವಾಮಿಗಳ ಮಠ, ಎರಡೂ ಕೂಡ ಅವಧೂತ ಪರಂಪರೆಯಲ್ಲಿ ಬಂದಿದ್ದು, ಎರಡೂ ಮಠಗಳು ಜನರಲ್ಲಿ ಸಾಮಾಜಿಕವಾಗಿ ಹಾಗೂ ಆಧ್ಯಾತ್ಮಿಕವಾಗಿ ಜ್ಞಾನವಂತರನ್ನು ಮಾಡುವತ್ತ ಶ್ರಮಿಸುತ್ತಿದೆ ಎಂದು ತಿಳಿಸಿದರು.

ವರ್ಷಪೂರ್ತಿ ಶ್ರಮಪಟ್ಟು ದುಡಿಯುವ ಜನತೆಗೆ ನೆಮ್ಮದಿ, ಸಂತಸಕ್ಕಾಗಿ ಜಾತ್ರೆ ಹಾಗೂ ರಥೋತ್ಸವ ಕಾರ್ಯಕ್ರಮಗಳನ್ನು ದೇವರುಗಳ ಹೆಸರಿನಲ್ಲಿ ನಡೆಸಿಕೊಂಡು ಬರುತ್ತಿದ್ದು, ಅದರಿಂದ ಜನತೆ ಸಂತಸ ನೆಮ್ಮದಿ ಪಡೆಯಲು ಪ್ರಯತ್ನಿಸುತ್ತಿರುವರೆಂದು ತಿಳಿಸಿದರು. ರಥೋತ್ಸವದ ಪ್ರಯುಕ್ತ ಸತ್ಯನಾರಾಯಣಪೂಜೆ, ಅಂಕುರಾರ್ಪಣೆ, ಧ್ವಜಾರೋಹಣ ಕಾರ್ಯಕ್ರಮ ಹಾಗೂ ಒಂದು ಸಪ್ತಾಹ ಹಗಲಿರುಳೂ ನಿರಂತರವಾಗಿ ಶಿವನಾಮ ಪಂಚಾಕ್ಷರೀ ಮಂತ್ರದ ಅಖಂಡಭಜನೆ ಏರ್ಪಡಿಸಲಾಗಿದ್ದು, ನಂಜಾವಧೂತ ಸ್ವಾಮೀಜಿರವರು ಇಂದು ಕೊನೆಗೊಂಡ ಭಜನಾ ಕಾರ್ಯಕ್ರಮಕ್ಕೆ ಪೂರ್ಣಾಹುತಿ ನೀಡಿದರು.

ಭಜನಾ ಕಾರ್ಯಕ್ರಮದಲ್ಲಿ ವೆಂಕಟಾಪುರ, ಬಳುವನಹಳ್ಳಿ, ಮಳ್ಳೂರು, ಹೊನ್ನಹಳ್ಳಿ, ರೆಡ್ಡಹಳ್ಳಿ, ಮಿತ್ತನಹಳ್ಳಿ, ಭಕ್ತರಹಳ್ಳಿ, ಪುರ, ಇಟ್ಟಪ್ಪನಹಳ್ಳಿ, ಯಲುವಹಳ್ಳಿ, ಮಾರಪ್ಪನಹಳ್ಳಿ, ಮುದ್ದೇನಹಳ್ಳಿ, ಐಬಸಾಪುರ, ಹೊಸಪೇಟೆ, ಕೊಮ್ಮಸಂದ್ರ, ವೆಂಕಟೇನಹಳ್ಳಿ ಮತ್ತು ವಿಜಯಪುರ ಪಟ್ಟಣದ ವಿವಿಧ ಭಜನಾಮಂಡಳಿಗಳು ಪಾಲ್ಗೊಂಡಿದ್ದರು. ಓಂಕಾರೇಶ್ವರ ವಕ್ಕಲಿಗರ ಟ್ರಸ್ಟ್ ವತಿಯಿಂದ ಗಿರಿಜಾಕಲ್ಯಾಣೋತ್ಸವ ನಡೆದಿದ್ದು, ಶಿವಸಪ್ತಾಹ ಅಖಂಡಭಜನೆಯ ಸಮಾರೋಪ, ಪೂರ್ಣಾಹುತಿ, ತೀರ್ಥಪ್ರಸಾದ ವಿನಿಯೋಗ, ಕಲ್ಲುಗಾಲಿ ರಥೋತ್ಸವವು ಅದ್ದೂರಿಯಾಗಿ ನೆರವೇರಿತು.

ಪುರಸಭಾ ಮಾಜಿ ಅಧ್ಯಕ್ಷರಾದ ರಾಜೇಶ್ವರಿ ಭಾಸ್ಕರ್, ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ಸಿ.ನಾರಾಯಣಸ್ವಾಮಿ, ಸದಸ್ಯರಾದ ನಂದಕುಮಾರ್, ಮಾಜಿ ವಿ.ಎಂ.ನಾಗರಾಜ್, ಮಾಜಿ ಸದಸ್ಯರಾದ ವೀರಣ್ಣ, ಮುನಿಕೃಷ್ಣ, ಆರ್.ಎಂ.ಸಿಟಿ ಮಂಜುನಾಥ್, ವಕ್ಕಲಿಗರ ಸಂಘದ ಅಧ್ಯಕ್ಷ ಹಾಗೂ ಪದಾಧಿಕಾರಿಗಳು, ಉಪಸ್ಥಿತರಿದ್ದರು.

29 ರಂದು ಬಲಜಿಗ ಗಡ್ಡದ ವಂಶಸ್ಥರಿಂದ ರುದ್ರಾಕ್ಷಿಮಂಟಪೋತ್ಸವ, 30 ರಂದು ಪೂರ್ಣಾಹುತಿ, ಧ್ವಜಾರೋಹಣ ಕಾರ್ಯಕ್ರಮಗಳು ನಡೆಯಲಿವೆ.

# ಮಾಜಿ ಶಾಸಕ ನಂಜುಂಡಸ್ವಾಮಿ ಮುನಿಸಿಗೆ ಮದ್ದು

**ಚಾಮರಾಜನಗರ:** ಲೋಕಸಭೆ ಚುನಾವಣೆಯಲ್ಲಿ ಚಾಮರಾಜನಗರ ಮೀಸಲು ಕ್ಷೇತ್ರದಿಂದ ಕಾಂಗ್ರೆಸ್ ಟಿಕೇಟ್ ದಕ್ಕಿಸಿಕೊಳ್ಳು ಕನಸು ಕಾಣುತ್ತಿದ್ದ ಮಾಜಿ ಶಾಸಕ ಜಿ.ಎನ್ ನಂಜುಂಡಸ್ವಾಮಿಗೆ ಟಿಕೇಟ್ ಕೈ ತಪ್ಪಿದ್ದರಿಂದ ಮುನಿಸಿಕೊಂಡಿದ್ದರು. ಇದನ್ನು ಅರಿತ ಸಮಾಜ ಕಲ್ಯಾಣ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಬುಧವಾರ ಸಂಜೆ ಮಗ ಹಾಗೂ ಅಭ್ಯರ್ಥಿ ಸುನೀಲ್ ಬೋಸ್ ರವರೊಂದಿಗೆ ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲಕ್ಕೆ ಆಗಮಿಸಿ ಮುನಿಸಿಕೊಂಡಿದ್ದ ಮಾಜಿ ಶಾಸಕ ಜಿ. ಎನ್.ನಂಜುಂಡಸ್ವಾಮಿ ಮುನಿಸಿಗೆ ಮದ್ದು ಹರೆಯಲು ಮುಂದಾದರು. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲದ ಮಾಜಿ ಶಾಸಕ ಜಿ. ಎನ್.ನಂಜುಂಡಸ್ವಾಮಿ ನಿವಾಸಕ್ಕೆ ಪುತ್ರ ಸುನೀಲ್ ಬೋಸ್ ಜೊತೆ ಆಗಮಿಸಿದ ಸಚಿವ ಡಾ. ಹೆಚ್.ಸಿ ಮಹದೇವಪ್ಪ , ಚಾಮರಾಜನಗರ ಲೋಕಸಭಾ ಕ್ಷೇತ್ರಕ್ಕೆ ಪ್ರಬಲ ಟಿಕೇಟ್ ಆಕಾಂಕ್ಷಿಯಾಗಿದ್ದ ಜಿ. ಎನ್ .ನಂಜುಂಡಸ್ವಾಮಿ ಸಮದಾನ ಮಾಡಿದ್ದಲ್ಲದೆ ಚುನಾವಣೆಯಲ್ಲಿ ಸಕ್ರೀಯವಾಗಿ ತೊಡಗಿಸಿಕೊಳ್ಳಲು ಮನವಿ ಮಾಡಿದರು. ಸಚಿವ ಡಾ. ಎಚ್.ಸಿ.ಮಹದೇವಪ್ಪ ಹಾಗೂ ಸುನೀಲ್ ಬೋಸ್ ಗೆ ಕೊಳ್ಳೇಗಾಲ ಶಾಸಕ ಎ.ಆರ್.ಕೃಷ್ಣಮೂರ್ತಿ ಸಾಥ್ ನೀಡಿದರು. ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಸಚಿವ ಡಾ. ಹೆಚ್.ಸಿ ಮಹದೇವಪ್ಪ, ಕಾಂಗ್ರೆಸ್ ನಲ್ಲಿ ಯಾರಿಗೂ ಅಸಮಧಾನವಿಲ್ಲ. ಜಿ. ಎನ್. ನಂಜುಂಡಸ್ವಾಮಿ ಹಿರಿಯರು ಟಿಕೇಟ್ ಪಡೆಯಲು ಪ್ರಯತ್ನ ಮಾಡಿದ್ರು ಆದ್ರೆ ಹೈಕಮಾಂಡ್ ತೀರ್ಮಾನ ಅಂತಿಮ ತಾನೇ. ಶಾಸಕರೆಲ್ಲ ನನ್ನ ಸ್ಪರ್ಧೆಗೆ ಒಲವು ತೋರಿದ್ರು ಆದ್ರೆ ನಾನು ಮಂತ್ರಿಯಾಗಿದ್ದೀನಿ. ನನಗೆ ನೀಡಿರುವ ಮಂತ್ರಿಸ್ಥಾನ ಬಿಟ್ಟು ಹೋಗುವುದು ತಪ್ಪು. ರಾಜ್ಯದ ಜನರು ನಾನು ರಾಜ್ಯದಲ್ಲಿಮಂತ್ರಿಯಾಗಿ ಇರುವುದನ್ನು ಬಯಸಿದ್ದಾರೆ. ಹಾಗಾಗಿ ಹೈಕಮಾಂಡ್ ತೀರ್ಮಾನದಂತೆ ನಾನು ಕಾಂಗ್ರೆಸ್ ಗೆಲುವಿಗೆ ಶ್ರಮಿಸುತ್ತೇನೆ ಎಂದು ಹೇಳಿ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆಯ್ಕೆ ವಿಚಾರದಲ್ಲಿ ಅಸಮದಾನ ಗೊಂದಲವಿಲ್ಲ ಎಂದರು.

# ಕರಾಮುವಿ ಪ್ರವೇಶಾತಿಗೆ ಮಾರ್ಚ್ 31 ಕೊನೆಯ ದಿನಾಂಕ

**ಮೈಸೂರು:** ಕರಾಮುವಿಯು ತುಮಕೂರು ಪ್ರಾದೇಶಿಕ ಕೇಂದ್ರದಲ್ಲಿ 2023-24ನೇ (ಜನವರಿ ಆವೃತ್ತಿ) ಶೈಕ್ಷಣಿಕ ಸಾಲಿನ ಪ್ರವೇಶಾತಿ ಅಂತಿಮ ಹಂತದಲ್ಲಿದ್ದು, ಯುಜಿಸಿ ಅನುಮೋದಿತ ಸ್ನಾತಕ/ಸ್ನಾತಕೋತ್ತರ ಕೋರ್ಸ್ ಗಳಾದ ಬಿ.ಎ/ಬಿ.ಕಾಂ/ಬಿ.ಬಿ.ಎ/ಬಿ.ಸಿ.ಎ/ಬಿ.ಎಲ್.ಐ.ಎಸ್ಸಿ ಹಾಗೂ ಬಿ.ಎಸ್ಸಿ, ಎಂ.ಎ/ಎಂ.ಸಿ.ಜೆ., ಎಂ.ಕಾಂ, ಎಂ.ಎಲ್.ಐ.ಎಸ್ಸಿ., ಎಂ.ಎಸ್ಸಿ., ಎಂ.ಬಿ.ಎ, ಪಿ.ಜಿ. ಸರ್ಟಿಫಿಕೇಟ್., ಡಿಪ್ಲೋಮಾ., ಸರ್ಟಿಫಿಕೇಟ್ ಪ್ರೋಗ್ರಾಮ್ ಗಳಿಗೆ ಪ್ರವೇಶಾತಿ ಮಾಡಿಕೊಳ್ಳಲಾಗುತ್ತಿದೆ. ಪ್ರಥಮ ವರ್ಷದ ಪ್ರವೇಶಾತಿಗೆ 2024ರ ಮಾರ್ಚ್ 31 ಕೊನೆಯ ದಿನಾಂಕವಾಗಿದ್ದು, ಈ ಹಿನ್ನೆಲೆಯಲ್ಲಿ ಆಸಕ್ತರು ಕರಾಮುವಿಯಲ್ಲಿ ಪ್ರವೇಶಾತಿ ಪಡೆಯಲು ಅನುಕೂಲ ಮಾಡಿಕೊಡುವ ಸಲುವಾಗಿ 2024ರ ಮಾರ್ಚ್ 31ರ ವರೆಗೆ ಸಾರ್ವತ್ರಿಕ ರಜಾ ದಿನ ಮತ್ತು ಭಾನುವಾರದಂದು ಬೆಳಗ್ಗೆ 10:00 ಗಂಟೆಯಿಂದ ಸಂಜೆ 5:00ರ ವರೆಗೆ ಕರಾಮುವಿ ಪ್ರಾದೇಶಿಕ ಕೇಂದ್ರ ತುಮಕೂರಿನ ಕಚೇರಿಯನ್ನು ತೆರೆಯುವ ಮೂಲಕ ಪ್ರವೇಶಾತಿಯನ್ನು ಮಾಡಿಕೊಳ್ಳಲಾಗುತ್ತದೆ. **ಹೆಚ್ಚಿನ ವಿವರಗಳಿಗಾಗಿ:** ಕರಾಮುವಿ ತುಮಕೂರು ಪ್ರಾದೇಶಿಕ ಕೇಂದ್ರ, ಟೂಡಾ ಲೇಔಟ್, ರಾಜೀವ್‌ಗಾಂಧಿ ನಗರ, ಗಂಗಸಂದ್ರ ಮುಖ್ಯರಸ್ತೆ, ಮೆಳೆಕೋಟೆ, ತುಮಕೂರು-572105 ದೂರವಾಣಿ ಸಂಖ್ಯೆ- 0816-2955580, 9844506629, 9886112434, 7349474339 ಅನ್ನು ಸಂಪರ್ಕಿಸಬಹುದು ಎಂದು ಪ್ರಾದೇಶಿಕ ನಿರ್ದೇಶಕರಾದ ಡಾ. ಲೋಕೇಶ ಆರ್ ತಿಳಿಸಿದ್ದಾರೆ.

# ಜಮೀನು ಕಬಳಿಕೆಗೆ ಸಂಚು

**ಚಾಮರಾಜನಗರ:** ಒಂಟಿ ವೃದ್ದೆಯ ಕೊಟ್ಯಾಂತರ ರೂ. ಬೆಲೆಬಾಳುವ ಜಮೀನು ಕಬಳಿಕೆಗೆ ಸಂಚು ಮಾಡಿರುವ ಘಟನೆ ಚಾಮರಾಜನಗರ ಜಿಲ್ಲೆಯಲ್ಲಿ ನಡೆದಿದೆ. ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಹೂಗ್ಯಂ ಗ್ರಾಮದ ಸುಶೀಲಮ್ಮರಿಗೆ ಸೇರಿದ ಜಮೀನನ್ನು ಅಕ್ರಮವಾಗಿ ಖಾತೆ ಮಾಡಿಸಿ ಮಾರಾಟ ಮಾಡಿರುವ ಘಟನೆ ಬೆಳಕಿಗೆ ಬಂದಿದೆ. ಚಾಮರಾಜನಗರ ಪಟ್ಟಣದ ನಿವಾಸಿ ನಾಗೇಂದ್ರ ರವರು ತಮಿಳುನಾಡಿನ ಕೊಳತ್ತೂರು ಮೂಲದ ರಾಜಾ ಸೆಲ್ವಂ ಎಂಬುವರಿಗೆ ಮಾರಾಟ ಮಾಡಿಸಿದ್ದಾರೆ ಎಂದು ಹೇಳಲಾಗಿದೆ. ಕಳೆದ 100 ವರ್ಷದಿಂದ ಸುಶೀಲಮ್ಮ ಕುಟುಂಬದವರ ಸ್ವಾಧೀನದಲ್ಲಿರುವ ಜಮೀನಾಗಿದ್ದು, 3 ವರ್ಷದ ಹಿಂದೆ ರಾಜಾಸೆಲ್ವಂ ಹೆಸರಿಗೆ ಅಕ್ರಮವಾಗಿ ಖಾತೆ ಬದಲಾವಣೆಯಾಗಿದೆ. ಚಾಮರಾಜನಗರ ಮೂಲದ ನಾಗೇಂದ್ರ ಎಂಬುವವರು ವೃದ್ದೆಗೆ ತಿಳಿಯದಂತೆ ಖಾತೆ ಮಾಡಿಸಿ ಮಾರಾಟ ಮಾಡಲಾಗಿದೆ. ಸರ್ವೆ ನಂ. 181 ರಲ್ಲಿ4.56 ಎಕರೆ ಜಮೀನನ್ನು ಅಕ್ರಮವಾಗಿ ಖರೀದಿಸಿ ಖಾತೆ ಮಾಡಿಸಿಕೊಂಡಿರುವ ಕೊಳತ್ತೂರು ರಾಜಾಸೆಲ್ವಂ ವೃದ್ಧೆಯನ್ನು ಒಕ್ಕಲೆಬ್ಬಿಸಲು ತಮಿಳುನಾಡಿನಿಂದ 50 ಜನರನ್ನು ಕರೆತಂದು ಮಾರಾಕಾಸ್ತ್ರ ಹಿಡಿದು ಗಲಾಟೆ ಮಾಡಲಾಗಿದೆ. ಹನೂರು ತಾಲ್ಲೂಕಿನ ಹೂಗ್ಯಂ ನ ಜಮೀನಿನಲ್ಲಿ ವಾಸಿಸುತ್ತಿದ್ದ ವೃದ್ದೆ ಮೇಲೆ ಗುಂಪುದಾಳಿ ನಡೆಸಿ, ರಾಜಸೆಲ್ವಂ ವೃದ್ದೆ ಸುಶೀಲಮ್ಮನ ವಾಸದ ಗುಡಿಸಲನ್ನು ಬುಲ್ಡೋಜರ್ ತಂದು ಕೆಡವಲಾಗಿದೆ. ಇದನ್ನು ತಡೆಯಲು ಬಂದ ಸುಶೀಲಮ್ಮ ಹಾಗೂ ಆಕೆಯ ಮಗಳ ಮೇಲೆ ಹಲ್ಲೆ ಮಾಡಿ ಕೊಲೆ ಬೆದರಿಕೆ ಹಾಕಲಾಗಿದೆ. ಹನೂರು ತಾಲ್ಲೂಕಿನ ರಾಮಾಪುರ ಪೋಲಿಸರ ಮೊರೆಹೋದ ವೃದ್ದೆ ಸುಶೀಲಮ್ಮ, ರಕ್ಷಣೆ ನೀಡುವಂತೆ ಮನವಿ ಮಾಡಿದ್ದು, ಚಾಮರಾಜನಗರದ ನಾಗೇಂದ್ರ ಹಾಗೂ ರಾಜಾಸೆಲ್ವಂ ವಿರುದ್ಧ ದೂರು ದಾಖಲಿಸಿದ್ದಾರೆ.

# ಪುಸ್ತಕಗಳ ಮಾರಾಟದಲ್ಲಿ ರಿಯಾಯಿತಿ

**ಬೆಂಗಳೂರು:** ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ಎಲ್ಲಾ ಪ್ರಕಟಣೆಗಳನ್ನು ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಪ್ರಯುಕ್ತ ಏಪ್ರಿಲ್ 1 ರಿಂದ ಏಪ್ರಿಲ್ 30 ರವರೆಗೆ ಶೇಕಡ 50% ರಿಯಾಯಿತಿಯ ದರದಲ್ಲಿ ಪುಸ್ತಕಗಳನ್ನು ಮಾರಾಟ ಮಾಡಲಾಗುತ್ತದೆ. ಆನ್‌ಲೈನ್ www.kuvempubhashabharathi.karnataka.gov.in ಮೂಲಕವೂ ಶೇ 50% ರಿಯಾಯಿತಿ ದರದಲ್ಲಿ ಪುಸ್ತಕಗಳನ್ನು ಖರೀದಿಸಬಹುದಾಗಿದ್ದು, ಓದುಗರು ಇದರ ಸದುಪಯೋಗ ಪಡೆದುಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಸ್ವೀಪ್ ಚಟುವಟಿಕೆ ವಿನೂತನವಾಗಿರಲಿ

**ಮೈಸೂರು:** ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲೂ ಸ್ವೀಪ್ ಚಟುವಟಿಕೆಗಳನ್ನು ವಿನೂತನವಾಗಿ ನಡೆಸಿ ಮತದಾರರಲ್ಲಿ ಜಾಗೃತಿ ಮೂಡಿಸಬೇಕು ಮತ್ತು ಮತದಾನ ಪ್ರಮಾಣ ಹೆಚ್ಚಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಕೆ.ಎಂ. ಗಾಯಿತ್ರಿ ತಿಳಿಸಿದರು.

ಸ್ವೀಪ್ (ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಚುನಾವಣೆಯಲ್ಲಿ ಪಾಲ್ಗೊಳ್ಳುವಿಕೆ) ಚಟುವಟಿಕೆಯಡಿ ತಾಲ್ಲೂಕು ಸಮಿತಿಯಿಂದ ಇಲ್ಲಿನ ಮಿನಿ ವಿಧಾನಸೌಧದ ಆವರಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಹಸ್ತಾಕ್ಷರ ಸಂಗ್ರಹ ಅಭಿಯಾನಕ್ಕೆ ಸಹಿ ಹಾಕುವ ಮೂಲಕ ಚಾಲನೆ ನೀಡಿದ ಬಳಿಕ ಅವರು ಮಾತನಾಡಿದರು.

ಗ್ರಾಮೀಣ ಭಾಗದ ಅರ್ಹರೆಲ್ಲರೂ ಏ.26ರಂದು ಮತದಾನ ಮಾಡುವಂತೆ ಪ್ರೇರೇಪಿಸಬೇಕು ಎಂದರು. ಚುನಾವಣೆ ಸಿದ್ಧತೆಯ ಜೊತೆಗೆ ಕುಡಿಯುವ ನೀರು ಸಮರ್ಪಕ ಪೂರೈಕೆಗೆ ಆದ್ಯತೆ ನೀಡಬೇಕು. ಬರಗಾಲ ಇರುವುದರಿಂದಾಗಿ, ನರೇಗಾ ಯೋಜನೆಯಡಿ ಹೆಚ್ಚಿನ ಜನರಿಗೆ ಉದ್ಯೋಗ ಕಲ್ಪಿಸಿ ಗುಳೇ ಹೋಗುವುದನ್ನು ತಡೆಗಟ್ಟಬೇಕು ಎಂದು ಸೂಚಿಸಿದರು. ಸಹಾಯಕ ಸ್ವೀಪ್ ನೋಡಲ್ ಅಧಿಕಾರಿ ಶಾಂತಾ ಎಂ., ತಾಲ್ಲೂಕು ಪಂಚಾಯತ್ ಇಒ ಎಸ್.ಪಿ.ಧರಣೇಶ್, ಅನುಷ್ಠಾನ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು, ತಾ.ಪಂ. ಸಹಾಯಕ ನಿರ್ದೇಶಕಿ ಭವ್ಯಾ, ಗಂಗಾಧರ ಪಾಲ್ಗೊಂಡಿದ್ದರು.




# ವರ್ತಮಾನದ ತಲ್ಲಣಕ್ಕೆ ವಚನಗಳಲ್ಲಿ ಪರಿಹಾರ



**ಮೈಸೂರು:** ಭ್ರಷ್ಟಾಚಾರ, ಅಸಮಾನತೆ, ಜಾತೀಯತೆ, ಕೋಮುದ್ವೇಷ ಸೇರಿದಂತೆ ವರ್ತಮಾನದ ಎಲ್ಲ ತಲ್ಲಣಗಳಿಗೆ ಶರಣರ ವಚನಗಳಲ್ಲಿ ಪರಿಹಾರವಿದೆ ಎಂದು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸಿ.ಸೋಮಶೇಖರ್ ಹೇಳಿದರು.

ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ವಚನ ಸಾಹಿತ್ಯ ವರ್ತಮಾನದ ತಲ್ಲಣಗಳು ಕುರಿತು ಬುಧವಾರ ನಡೆದ ರಾಜ್ಯಮಟ್ಟದ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.

ಅಹಂಕಾರ, ಸ್ವಜನ ಪಕ್ಷಪಾತ, ಶೋಷಣೆಗೆ ಕೊನೆಯಿಲ್ಲವಾಗಿದೆ. ದೇಶ? ದೇಶಗಳ ನಡುವೆ ಯುದ್ಧ ಭೀತಿ ಮನೆ ಮಾಡಿದೆ. ಜಾತಿ ಪದ್ಧತಿ ತೊಲಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸಾಮಾಜಿಕ ಅಸಮಾನತೆಯನ್ನು ಹೋಗಲಾಡಿಸಲು ಶರಣರು ಪ್ರಾಮಾಣಿಕ ಪ್ರಯತ್ನ ಮಾಡಿದ್ದರು. ಆರ್ಥಿಕ ಅಸಮಾನತೆ ಇರುವ ಕಡೆ ಶಾಂತಿ ಇರುವುದಿಲ್ಲ. ಹಾಗಾಗಿ, ಸಂಪತ್ತು ಸಂಗ್ರಹ ಮಾಡಬೇಡಿ. ಕಾಯಕದ ಮೂಲಕ ದುಡಿಯುವುದನ್ನೂ ದಾಸೋಹದ ಮೂಲಕ ಸಮಾಜಕ್ಕೆ ನೀಡಿರೆಂದರು ಎಂದು ಸ್ಮರಿಸಿದರು. ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಸಾಹಿತಿ ಪ್ರೊ.ಸಿ.ಪಿ.ಕೃಷ್ಣಕುಮಾರ್, ವಿಶ್ರಾಂತ ಕುಲಪತಿ ಡಾ.ಪದ್ಮಾ ಶೇಖರ್, ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಸಿ.ಜಿ.ಬೆಟಸೂರಮಠ, ದತ್ತಿ ದಾಸೋಹಿ ಪ್ರೊ.ಡಿ.ಎಸ್. ಸದಾಶಿವಮೂರ್ತಿ, ಅಧ್ಯಕ್ಷ ಮ.ಗು.ಸದಾನಂದಯ್ಯ, ಪ್ರಾಂಶುಪಾಲೆ ಎಂ.ಪೂರ್ಣಿಮಾ ಹಾಜರಿದ್ದರು.

# ಬೂತ್ ಮಟ್ಟದಿಂದಲೇ ಶ್ರಮಿಸಬೇಕು: ಕೆಪಿಸಿಸಿ ಕಾರ್ಯದರ್ಶಿ



**ವಿಜಯಪುರ:** ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಯಾರಿಗಾದರೂ ಟಿಕೆಟ್ ಕೊಡಲಿ, ಕಳೆದ ವಿಧಾನಸಭಾ ಚುನಾವಣೆಗಿಂತಲೂ ಹೆಚ್ಚಿನ ಮತಗಳನ್ನು ಪಕ್ಷಕ್ಕೆ ತಂದುಕೊಡುವ ಮೂಲಕ ಪಕ್ಷದ ಅಭ್ಯರ್ಥಿಯ ಗೆಲುವಿಗೆ ಪ್ರತಿಯೊಬ್ಬ ಕಾರ್ಯಕರ್ತರು ಬೂತ್ ಮಟ್ಟದಿಂದಲೇ ಶ್ರಮಿಸಬೇಕು ಎಂದು ಕೆಪಿಸಿಸಿ ಕಾರ್ಯದರ್ಶಿ ವಿ.ಮಂಜುನಾಥ್ ಕರೆ ನೀಡಿದರು.

ಪಟ್ಟಣದಲ್ಲಿ ಬುಧವಾರ ಪಕ್ಷದ ಕಾರ್ಯಕರ್ತರೊಟ್ಟಿಗೆ ಚುನಾವಣೆ ಸಿದ್ಧತೆ ಸಭೆಯಲ್ಲಿ ಅವರು ಮಾತನಾಡಿದರು.

ಬಿಜೆಪಿ-ಜೆಡಿಎಸ್ ಮೈತ್ರಿಯಿಂದ ಕಾಂಗ್ರೆಸ್ ಪಕ್ಷಕ್ಕೆ ಯಾವುದೇ ರೀತಿಯಾದ ಸಮಸ್ಯೆಯಾಗುವುದಿಲ್ಲ. ಜೆಡಿಎಸ್-ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿದ್ದರೂ ಅದು ಕೇವಲ ಹೊರಗಿನ ತೋರಿಕೆಯೆ ಹೊರತು, ಬಿಜೆಪಿಯ ಸಿದ್ಧಾಂತಗಳನ್ನು ಜೆಡಿಎಸ್ ನಾಯಕರು ಒಪ್ಪುವುದಿಲ್ಲ. ಕುಟುಂಬದ ಉಳಿವಿಗಾಗಿ ಬಿಜೆಪಿ ಜೊತೆ ಹೋಗಿರುವ ಅವರಿಗೆ ಕೊಟ್ಟಿರುವ 3 ಕ್ಷೇತ್ರಗಳ ಪೈಕಿ ಎರಡು ಕ್ಷೇತ್ರಗಳನ್ನು ಒಂದೇ ಕುಟುಂಬದವರು ಪಡೆದುಕೊಂಡಿದ್ದಾರೆ. ಒಂದು ಕುಟುಂಬ ಉಳಿಸುವುದಕ್ಕಾಗಿ ರಾಜ್ಯದಲ್ಲಿನ ಜೆಡಿಎಸ್ ಕಾರ್ಯಕರ್ತರು, ಬೂತ್ ಮಟ್ಟದಲ್ಲಿ ಬಿಜೆಪಿಯೊಂದಿಗೆ ಹೊಂದಾಣಿಕೆ ಮಾಡಿಕೊಂಡು ಮತ ಚಲಾಯಿಸುತ್ತಾರೆ ಎನ್ನುವುದು ಶುದ್ಧಸುಳ್ಳು. ಎರಡೂ ಪಕ್ಷಗಳ ನಡವಳಿಕೆಯಿಂದ ಬೇಸತ್ತು ಕಾಂಗ್ರೆಸ್ ಅಭ್ಯರ್ಥಿಗೆ ಮತ ಚಲಾಯಿಸುವ ಕಾರ್ಯಕರ್ತರು ಇದ್ದಾರೆ ಎಂದರು.

ವಿಜಯಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿ.ರಾಮಚಂದ್ರಪ್ಪ ಮಾತನಾಡಿ, ಕಳೆದ 10 ವರ್ಷಗಳಲ್ಲಿ ಕೇಂದ್ರದಲ್ಲಿ ಬಿಜೆಪಿ ದುರಾಡಳಿತ ನಡೆಸಿದೆ. ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿದ್ದಾರೆ. ಯುವಕರಿಗೆ ಉದ್ಯೋಗ ಕೊಡಲಿಲ್ಲ. ರೈತರ ಆದಾಯ ದ್ವಿಗುಣಗೊಳಿಸುವುದಾಗಿ ಹೇಳಿದವರು, ರಸಗೊಬ್ಬರಗಳ ಬೆಲೆ ಜಾಸ್ತಿ ಮಾಡಿದರು. ಕಪ್ಪು ಹಣ ವಾಪಸ್ ತರಲಿಲ್ಲ. ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಉದ್ಯೋಗ ಅವಕಾಶಗಳನ್ನು ನೀಡಲು ಸ್ಥಾಪನೆ ಮಾಡಿದ್ದ ಎಲ್ಲಾ ಸಂಸ್ಥೆಗಳನ್ನು ಖಾಸಗಿಯವರಿಗೆ ಮಾರಾಟ ಮಾಡಿದರು. ವಿಶ್ವವಿದ್ಯಾಲಯಗಳನ್ನು ಖಾಸಗೀಕರಣ ಮಾಡಿದರು, ರಾಜ್ಯದಲ್ಲಿ ಅತಿವೃಷ್ಟಿಯಾಗಿ ರೈತರು ಕೋಟ್ಯಾಂತರ ರೂಪಾಯಿಗಳಷ್ಟು ಬೆಳೆ ನಷ್ಟವಾದರೂ ಒಂದು ದಿನವೂ ಪ್ರಧಾನಿ ನರೇಂದ್ರಮೋದಿ ಬರಲಿಲ್ಲ. ಪರಿಹಾರವನ್ನೂ ಕೊಡಲಿಲ್ಲ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ನಂತರ ಚುನಾವಣೆಯ ಸಮಯದಲ್ಲಿ ನೀಡಿದ್ದ 5 ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮೂಲಕ ಕೊಟ್ಟ ಮಾತು ಉಳಿಸಿಕೊಂಡಿದೆ. ಗ್ಯಾರಂಟಿಗಳನ್ನು ಕೊಡಬಾರದೆಂದು ಬಿಜೆಪಿಯವರು ಬೊಬ್ಬೆ ಹಾಕುತ್ತಿದ್ದಾರೆ. ಇದೆಲ್ಲವನ್ನೂ ದೇಶದ ಜನತೆ ಗಮನಿಸುತ್ತಿದ್ದಾರೆ ಎಂದರು. ಹಿರಿಯ ಕಾಂಗ್ರೆಸ್ ಮುಖಂಡ ಬಿ.ವಿ.ಕೃಷ್ಣಪ್ಪ ಮಾತನಾಡಿ ಬಿಜೆಪಿ ನಾಯಕ ಕಟ್ಟಾಸುಬ್ರಮಣ್ಯ ನಾಯ್ಡು ಅವರೊಂದಿಗೆ ಉತ್ತಮ ಬಾಂಧವ್ಯವಿದೆ. ಅವರು ನಮ್ಮ ಮನೆಗೆ ಬಂದಿದ್ದಾಗ.ಕೆಲವರು ಬಿಜೆಪಿ ಪಕ್ಷದ ಶಾಲು ಹೊದಿಸಿ, ನಾನು ಬಿಜೆಪಿಗೆ ಸೇರ್ಪಡೆಗೊಂಡಿದ್ದೇನೆ ಎಂದು ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದರು. ನಮ್ಮ ಕುಟುಂಬ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡಿ, ಗುಂಡೇಟಿಗೆ ಬಲಿಯಾಗಿ ಪ್ರಾಣತ್ಯಾಗ ಮಾಡಿರುವ ಕುಟುಂಬ. ನಾವು ನಮ್ಮ ಪೂರ್ವಿಕರ ಆದಿಯಾಗಿ ಕಾಂಗ್ರೆಸ್ ನಲ್ಲಿದ್ದೇವೆ. ನನ್ನ ವಿರುದ್ಧ ಅಪಪ್ರಚಾರ ಮಾಡಲಾಗುತ್ತಿದೆ. ನಾನು ಕಾಂಗ್ರೆಸ್ ನಲ್ಲೆ ಇದ್ದೇನೆ. ಮುಂದೆಯೂ ಇರುತ್ತೇನೆ ಎಂದು ಹೇಳಿದರು.

ಟೌನ್ ಕಾಂಗ್ರೆಸ್ ಅಧ್ಯಕ್ಷ ವಿ.ಎಂ.ನಾಗರಾಜ್, ಪ್ರಧಾನ ಕಾರ್ಯದರ್ಶಿ ಎಸ್.ಮಂಜುನಾಥ್, ಪುರಸಭೆ ಸದಸ್ಯರಾದ ಎ.ಆರ್.ಹನೀಪುಲ್ಲಾ, ಎಂ.ನಾರಾಯಣಸ್ವಾಮಿ, ಎಂ.ರಾಜಣ್ಣ, ಜಿಲ್ಲಾ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಮುಬಾರಕ್, ಮುಖಂಡರಾದ ಜೆ.ಎನ್.ಶ್ರೀನಿವಾಸ್, ಮುನಿನಾರಾಯಣಪ್ಪ, ಜಗದೀಶ್, ಹರೀಶ್, ತೇಜಸ್, ಬಾಬು, ಮುಂತಾದವರು ಹಾಜರಿದ್ದರು.

# ರಂಗೋಲಿಯಲ್ಲಿ ಮೂಡಿದ ಮತದಾನ ಜಾಗೃತಿ

**ಮೈಸೂರು:** ಲೋಕಸಭಾ ಚುನಾವಣೆ 2024 ರ ಹಿನ್ನೆಲೆ ನಂಜನಗೂಡು ತಾಲ್ಲೂಕಿನ ದೇಬೂರು ಗ್ರಾಮ ಪಂಚಾಯಿತಿ ದೇಬೂರು ಗ್ರಾಮದಲ್ಲಿ ಮಹಿಳೆಯರು ರಂಗೋಲಿ ಬಿಡಿಸುವ ಮೂಲಕ ಮತದಾನ ಜಾಗೃತಿ ಮೂಡಿಸಿದ್ದಾರೆ. ದೇಬೂರು ಗ್ರಾಮದ ಲಕ್ಷ್ಮೀ ನಾರಾಯಣಸ್ವಾಮಿ ದೇಗುಲದ ಮುಂಭಾಗದ ರಸ್ತೆಯಲ್ಲಿ ಗ್ರಾಮದ ಸ್ವ- ಸಹಾಯ ಸಂಘದ ಮಹಿಳಯರು ಸೇರಿದಂತೆ ಇತರರು ಬಣ್ಣದ ಬಣ್ಣದ ರಂಗೋಲಿಗಳೊಂದಿಗೆ ಮತದಾನ ಜಾಗೃತಿ ಘೋಷವಾಕ್ಯಗಳನ್ನು ಬಿಡಿಸಿ ಕಡ್ಡಾಯವಾಗಿ ಮತದಾನ ಮಾಡುವಂತೆ ಅರಿವು ಮೂಡಿಸಿದರು. ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ಪೂರ್ಣಿಮಾ ಅವರು ಮಾತನಾಡಿ, 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರ ಮತವು ಅತ್ಯಮೂಲ್ಯವಾಗಿದ್ದು, ಯಾರೊಬ್ಬರು ಮತದಾನದಿಂದ ಹೊರಗೊಳಿಯದೆ ತಮ್ಮ ಸಂವಿಧಾನದ ಹಕ್ಕನ್ನು ಚಲಾಯಿಸುವಂತೆ ಕರೆ ನೀಡಿದರು. ಹಾಗೂ ಚುನಾವಣೆ ಸಂಬಂಧ ಯಾವುದೇ ದೂರುಗಳಿದ್ದಲ್ಲಿ ಸಿ-ವಿಜಿಲ್ ಆಪ್ ಮೂಲಕ ಸಲ್ಲಿಸುವಂತೆ ತಿಳಿಸಿದರು. ಬಳಿಕ ಅತ್ಯುತ್ತಮವಾಗಿ ರಂಗೋಲಿ ಬಿಡಿಸಿದ ಮಹಿಳೆಯರಿಗೆ ಬಹುಮಾನ ವಿತರಿಸಿದರು. ವೇದಿಕೆ ಕಾರ್ಯಕ್ರಮ ಬಳಿಕ ಮತದಾನ ಪ್ರಚಾರ ವಾಹನದೊಂದಿಗೆ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದಲ್ಲಿ ಎಲ್ಲಾ ಮಹಿಳೆಯರು, ಗ್ರಾಮಸ್ಥರು ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಜಾಥಾ ನಡೆಸಿ ಮತದಾನದ ಮಹತ್ವ ಸಾರಿದರು.



## ಲೋಕಸಭಾ: ನಾಮಪತ್ರ ಸಲಿಕೆ ಸಂಬಂಧ ಸೂಚನೆಗಳು

**ಚಿಕ್ಕಬಳ್ಳಾಪುರ:** ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ರ ಸಂಬಂಧ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಕ್ಕೆ ಸಂಬಂಧಿಸಿದಂತೆ ನಾಮಪತ್ರಗಳನ್ನು ಮಾರ್ಚ್ 28 ರಿಂದ ಏಪ್ರಿಲ್ 04 ರವರೆಗೆ ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 3.00 ಗಂಟೆಯವರೆಗೆ (ಸಾರ್ವತ್ರಿಕ ರಜಾ ದಿನಗಳನ್ನು ಹೊರತುಪಡಿಸಿ) ಜಿಲ್ಲಾಧಿಕಾರಿಗಳ ಕಚೇರಿಯ ಮೊದಲನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ ಎಫ್‌ಎ-04 ರಲ್ಲಿ ಸ್ಥಾಪಿಸಲಾಗಿರುವ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಸ್ವೀಕರಿಸಲಿದ್ದು, ನಾಮಪತ್ರಗಳನ್ನು ಸಲ್ಲಿಸುವ ಅಭ್ಯರ್ಥಿಗಳು/ಸೂಚಕರು ಚುನಾವಣಾಧಿಕಾರಿಗಳ ಕಾರ್ಯಾಲಯಕ್ಕೆ ಅಭ್ಯರ್ಥಿಯು ಸೇರಿ ಐದು (1+4) ಜನರಿಗೆ ಮಾತ್ರ ಅಧೀಕೃತ ಪ್ರವೇಶ ನೀಡಲಾಗುವುದು. ನಾಮಪತ್ರಗಳನ್ನು ಸಲ್ಲಿಸುವ ಅಭ್ಯರ್ಥಿಗಳು/ಸೂಚಕರಿಗೆ ಚುನಾವಣಾಧಿಕಾರಿಗಳ ಕಚೇರಿಯಿಂದ 100 ಮೀಟರ್ ಒಳಭಾಗದಲ್ಲಿ ಒಟ್ಟು 3 ವಾಹನಗಳಿಗೆ ಪ್ರವೇಶವಿರುತ್ತದೆ. ನಾಮಪತ್ರ, ನಮೂನೆ-2ಎ, ನಮೂನೆ-26 ರ ಅಫಿಡವಿಟ್ ಮತ್ತು ಇತರೆ ಅಗತ್ಯ ದಾಖಲೆಗಳ ಪ್ರತಿಗಳು ಜಿಲ್ಲಾಧಿಕಾರಿಗಳ ಕಚೇರಿಯ 1ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ ಎಫ್‌ಎ-03 ರಲ್ಲಿ ಸ್ಥಾಪಿಸಲಾಗಿರುವ ನಾಮಪತ್ರ ಮಾಹಿತಿ/ಸಲ್ಲಿಕಾ ಕೇಂದ್ರದಲ್ಲಿ ಕಚೇರಿಯ ಅವಧಿಯಲ್ಲಿ ಲಭ್ಯವಿರುತ್ತದೆ. ಈ ನಮೂನೆಗಳು/ದಾಖಲೆಗಳು ಭಾರತ ಚುನಾವಣಾ ಆಯೋಗದ ವೆಬ್ ಸೈಟ್ ನಲ್ಲಿಯೂ ಸಹಃ ಲಭ್ಯವಿದ್ದು, ಸಾರ್ವಜನಿಕರು ವೆಬ್ ಸೈಟ್ ಮೂಲಕ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ. ನಾಮಪತ್ರ ಸಲ್ಲಿಕೆ ಮತ್ತು ದಾಖಲೆಗಳ ಬಗ್ಗೆ ಹೆಚ್ಚಿನ ಮಾಹಿತಿ ಅವಶ್ಯಕವಿದ್ದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶ್ರೀ ಹರೀಶ್.ಹೆಚ್.ಎ, ಶಿರಸ್ತೇದಾರ್ ರವರನ್ನು (ದೂರವಾಣಿ ಸಂಖ್ಯೆ: 08156-277004) ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ, ತಿಳಿಸಿದ್ದಾರೆ.

## ಮಹಿಳೆ ಕೃಷಿಯಿಂದ ಕಕ್ಷೆವರೆಗೆ

**ಮಂಡ್ಯ:** ಮಹಿಳೆ ಮಕ್ಕಳನ್ನು ಹೆರುವ ಯಂತ್ರವಲ್ಲ ಹಾಗೂ ಮನೆ ಕೆಲಸ ಅಡುಗೆ ಕೆಲಸಕ್ಕೆ ಸೀಮಿತವಾಗಿಲ್ಲದೆ ಇವಾಗ ಕೃಷಿಯಿಂದ ಕಕ್ಷೆವರೆಗೆ ಎಲ್ಲಾ ಕ್ಷೇತ್ರದಲ್ಲೂ ಪುರುಷರಿಗೆ ಕಡಿಮೆ ಇಲ್ಲದ ಹಾಗೆ ದುಡಿಯುತ್ತಿದ್ದಾಳೆ ಎಂದು ಬಾಲಕಿಯ ಬಾಲ ಮಂದಿರದ ಅಧೀಕ್ಷಕರಾದ ಮಂಜುಳಾ ಜಿ. ತಿಳಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಬಾಲಕಿಯರ ಬಾಲ ಮಂದಿರ ಮಂಡ್ಯ ಇವರ ವತಿಯಿಂದ ಕಲ್ಲಳ್ಳಿ 14ನೇ ಕ್ರಾಸ್ ನಲ್ಲಿ ಬಾಲಕಿಯ ಬಾಲ ಮಂದಿರದಲ್ಲಿ ವಿಶ್ವ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದರು.1975ರಲ್ಲಿ ಮೊದಲ ಬಾರಿಗೆ ವಿಶ್ವಸಂಸ್ಥೆ ಮಾರ್ಚ್ 8ರಂದು ಅಧಿಕೃತವಾಗಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಣೆಗೆ ತಂದಿತು. ಇಂದಿನ ದಿನದಲ್ಲಿ ಮಹಿಳೆ ಎಲ್ಲಾ ಕ್ಷೇತ್ರದಲ್ಲೂ ದುಡಿತಿದ್ದು ಪುರುಷರಿಗೆ ಸರಿಸಮಾನವಾಗಿ ದುಡಿತಿದ್ದಾಳೆ ಅವಳಿಗೆ ಸರಿಯಾದ ರೀತಿಯಲ್ಲಿ ವಿದ್ಯಾಭ್ಯಾಸ ಸಮಾನತೆ ನೀಡಿರುವುದರಿಂದ ಮಹಿಳೆ ಸಮಾಜದಲ್ಲಿ ಮುಂದೆ ಬರುವುದರಲ್ಲಿ ಯಾವುದೇ ಸಂಶಯವಿಲ್ಲ ಅವಳಿಗೆ ಆತ್ಮಸ್ಥೈರ್ಯ ನೀಡುವುದರಿಂದ ತನ್ನ ಕುಟುಂಬ ನಿರ್ವಹಣೆ ಮಾಡುವುದು ಅವಳಿಗೆ ಸುಲಭವಾಗಿತ್ತದೆ ಹೆಣ್ಣು ಸಮಾಜದ ಕಣ್ಣು, ಬದುಕಿನಲ್ಲಿ ಎಲ್ಲಾ ಸವಾಲುಗಳನ್ನು ಎದುರಿಸಿ ನಿಲ್ಲುವ ಗಟ್ಟಿಗಿತ್ತಿ ಮಹಿಳೆ ಎಂದು ತಿಳಿಸಿದರು ಇದೇ ಸಂದರ್ಭದಲ್ಲಿ ಮಹಿಳಾ ಸಿಬ್ಬಂದಿ ವರ್ಗದವರಿಗೆ ಆಟಗಳನ್ನು ಆಡಿಸಿ ಗೆದ್ದಂತ ಮಹಿಳೆಯರಿಗೆ ಬಹುಮಾನಗಳನ್ನು ವಿತರಿಸಲಾಯಿತು.ಜೊತೆಗೆ ಸಾಂಸ್ಕೃತಿ ಕಾರ್ಯಕ್ರಮ ನಡೆಯಿತು ಇದೇಸಂದರ್ಭದಲ್ಲಿ ಗೃಹ ಪಾಲಕರಾದ ಪಾರ್ವತಮ್ಮ ಮಾತನಾಡುತ್ತಾ ಸ್ವಾತಂತ್ರ ಬಂದು 75 ವರ್ಷಗಳು ಆಯ್ತು ನಮ್ಮ ಮಹಿಳೆಯರಿಗೆ ಲಿಂಗ ಸಮಾನತೆ ಬೇಕಾಗಿದೆ ತಾಯಿಯಾಗಿ ಸಲಹುವಳು ಹೆಣ್ಣು ಅಕ್ಕನಾಗಿ ಸರಿ ತಪ್ಪು ತಿದ್ದುವಳು ಹೆಣ್ಣು ತಂಗಿಯಾಗಿ ಕರುಣೆ ತೋರುಗಳು ಹೆಣ್ಣು ಹೆಂಡತಿಯಾಗಿ ಮನೆ ಬೆಳಗುವಳು ಹೆಣ್ಣು. ಹೆಣ್ಣು ಬಾಳಿನ ಕಣ್ಣು, ಪ್ರೇಮಮಯಿ ತ್ಯಾಗಮಯಿ ಹೆಣ್ಣು ಸ್ತ್ರೀಯರನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು.

## ಮೊದಲನೇ ದಿನ ಒಂದು ನಾಮಪತ್ರ ಸಲ್ಲಿಕೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ನಾಮಪತ್ರ ಸಲ್ಲಿಕೆಯ ಮೊದಲ ದಿನವಾದ ಇಂದು (ಗುರುವಾರ) ಪಕ್ಷೇತರ ಅಭ್ಯರ್ಥಿಯಾಗಿ ಎ.ಎಸ್. ಭಾಸ್ಕರ್ ಅವರು ಜಿಲ್ಲಾಡಳಿತ ಭವನದ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪಿ. ಎನ್ ರವೀಂದ್ರ, ಅವರಿಗೆ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಹಾಯಕ ಚುನಾವಣಾಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿ ಡಾ. ಎನ್.ತಿಪ್ಪೇಸ್ವಾಮಿ ರವರು ಇದ್ದರು.



# ಸುವರ್ಣ ಗಂಗೋತ್ರಿ ಜ್ಞಾನಸಂಪತ್ತು ಸಮಾಜಕ್ಕೆ ಹರಿದುಹೋಗಬೇಕು

**ಚಾಮರಾಜನಗರ:** ಸುವರ್ಣಾವತಿ ಜಲಾಶಯ ಎಲ್ಲಕಡೆ ಹರಿಯುವ ರೀತಿಯಲ್ಲಿ ಸುವರ್ಣ ಗಂಗೋತ್ರಿಯ ಜ್ಞಾನಸಂಪತ್ತು ಸಮಾಜಕ್ಕೆ ಹರಿದುಹೋಗಬೇಕು ಎಂದು ಶಿವಮೊಗ್ಗ ಕುವೆಂಪು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ.ಪಿ.ವೆಂಕಟರಾಮಯ್ಯ ಹೇಳಿದರು. ತಾಲೂಕಿನ ಬೇಡರಪುರದಲ್ಲಿರುವ ಸುವರ್ಣ ಗಂಗೋತ್ರಿ ನಿಜಗುಣ ಸಭಾಂಗಣದಲ್ಲಿ ನಡೆದ ಚಾಮರಾಜನಗರ ವಿಶ್ವವಿದ್ಯಾನಿಲಯದ ಪ್ರಥಮ ವರ್ಷದ ಸಂಸ್ಥಾಪನಾ ದಿನಾಚರಣೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ಮೈಸೂರು ವಿಶ್ವವಿದ್ಯಾನಿಲಯ ಪ್ರಾರಂಭಿಸಿದ ಶೈಕ್ಷಣಿಕ ಸ್ನಾತಕೋತರ ಕೇಂದ್ರವನ್ನು ಉನ್ನತದರ್ಜೆಗೇರಿಸಿ ಒಂದು ವಿಶ್ವವಿದ್ಯಾನಿಲಯವನ್ನಾಗಿ ಪ್ರಾರಂಭ ಮಾಡಿರುವುದು ತುಂಬಾ ಸಂತಸವಾಗಿದೆ ಎಂದರು. 8 ವಿಶ್ವವಿದ್ಯಾನಿಲಯಗಳನ್ನು ಒಟ್ಟಿಗೆ ಪ್ರಾರಂಭ ಮಾಡಿದಾಗ ಅನೇಕ ವ್ಯಾಖ್ಯೆಗಳು ಬಂತು. ಇಷ್ಟೊಂದು ವಿಶ್ವವಿದ್ಯಾನಿಲಯಗಳು ಒಟ್ಟಿಗೆ ಪ್ರಾರಂಭ ಮಾಡುವುದು ಔಚಿತ್ಯವೇ ? ಎಷ್ಟರಮಟ್ಟಿಗೆ ಇದು ಸಾಧಕವೇ ಒಂದು ವಿಶ್ವವಿದ್ಯಾನಿಲಯ ಮಾಡಬೇಕಾದರೆ ಸರ್ಕಾರ ಪೂರ್ವಭಾವಿ ಸಿದ್ದತೆಗಳನ್ನು ಮಾಡಬೇಕಿತ್ತು. ಆದ್ಯತೆಯಲ್ಲಿ ಮಾಡಬೇಕಿತ್ತು ಅದರಲ್ಲಿ ಮೊದಲ ಆದ್ಯತೆಯಲ್ಲಿ ಚಾಮರಾಜನಗರ ವಿಶ್ವವಿದ್ಯಾನಿಲಯ ಇತ್ತು. ಎಂದರು.

ವಿಶ್ವವಿದ್ಯಾನಿಲಯ ಸ್ಥಾಪನೆ ಮಾಡುವ ಉದ್ದೇಶಯೆಂದರೇ ಮೂರು ಸಂಗತಿಗಳನ್ನು ಈ ಸಮಾಜದಲ್ಲಿ ಈಡೇರಿಸುವ ಸಲುವಾಗಿ ಸ್ಥಾಪನೆ ಮಾಡಲಾಗಿದೆ. ಭೋಧನೆ ಬಹಳ ಅಚ್ಚುಕಟ್ಟಾಗಿರಬೇಕು. ಉನ್ನತ ಶಿಕ್ಷಣ ಭೋದನೆ ಬಹಳ ಅಚ್ಚುಕಟ್ಟಾದಾಗ ದೇಶದ ಕೀರ್ತಿ ಹೆಚ್ಚಿಸಲು ನೀವು ಒಂದು ಕೊಡುಗೆಯನ್ನು ನೀಡುತ್ತೀರಿ ಸಾಹಿತ್ಯ ಕ್ಷೇತ್ರ, ವಿಜ್ಞಾನಕ್ಷೇತ, ಆರ್ಥಿಕ ಕ್ಷೇತ್ರ ಸೇರಿದಂತೆ ಮಕ್ಕಳು ಎಲ್ಲಾ ಕ್ಷೇತ್ರಗಳಲ್ಲೂ ಸಾಧನೆ ಮಾಡುವ ತಯಾರಿ ಈ ವಿಶ್ವವಿದ್ಯಾನಿಲಯದಲ್ಲಿ ಮಾಡುತ್ತೇವೆ ಎಂದರು. ಎರಡನೆಯದು ಸಂಶೋಧನೆ ಇಲ್ಲಿ ಬಹಳ ಮುಖ್ಯವಾದದ್ದು ಹೊಸ ಹೊಸ ಸಂಗತಿಗಳನ್ನು ಸೃಷ್ಠಿ ಮಾಡುವ ಕೇಂದ್ರ ಇದು. ಹೊಸ ಆಲೋಚನೆ ಸೃಷ್ಠಿ ಮಾಡುವುದು, ಅದರ ಪ್ರಕಾರ ರಚನಾತ್ಮಕವಾದ ಸೃಜನಶೀಲತೆ ಅದನ್ನು ಹುಟ್ಟು ಹಾಕುವುದು. ಒಳ್ಳೆಯ ಸಂಶೋಧನೆ ಎಲ್ಲ ಕ್ಷೇತ್ರದಲ್ಲೂ ಆಗಬೇಕು. ಸಂಶೋಧನೆ ಬಹಳ ದೊಡ್ಡಪದ ಈಗ ವಿಜ್ಞಾನಕ್ಷೇತ, ಸಮಾಜ ವಿಜ್ಞಾನ ಕ್ಷೇತ್ರದಲ್ಲಿ ಸಾಹಿತ್ಯ ಕ್ಷೇತದಲ್ಲೂ ಸೇರಿದಂತೆ ಎಲ್ಲ ಕ್ಷೇತ್ರ ಸಂಶೋಧನೆ ಆಗಬೇಕು ಜ್ಞಾನಸಂಪತ್ತು ವೃದ್ದಿ ಕೇಂದ್ರ ವಿಶ್ವವಿದ್ಯಾನಿಲಯದಲ್ಲಿ ಆಗಬೇಕು, ಅಂತಹ ಸಂಶೋಧನಾ ಕೇಂದ್ರ ಇದಾಗಬೇಕು ಎಂದು ಹೇಳಿದರು.

ಮತ್ತೊಂದು ವಿಸ್ತರಣಾ ಔಟ್ ಟೀಚ್ ಪ್ರೋಗ್ರಾಮ್



ಅಳವಡಿಸಿಕೊಳ್ಳಬೇಕಾದ ಅವಶ್ಯಕತೆ ಇದೆ. ಔಟ್ ಟೀಚ್ ಪ್ರೋಗ್ರಾಮ್ ಎಂದರೆ ನೀವು ಹೇಗೆ ನಿಮ್ಮ ಜ್ಞಾನಸಂಪತ್ತನ್ನು ಸಮಾಜದ ಏಳಿಗೆಗೆ ಹೇಗೆ ಉಪಯೋಗಿಸುವುದು ಅನ್ನೊಂದನ್ನ ಅಲೋಚಿಸುವುದು ಏಕೆಂದರೆ ಇಲ್ಲಿ ಜ್ಞಾನ ವೃದ್ದಿಯಾಗಬೇಕು. ಕುವೆಂಪು ಅವರು ಹೇಳಿದ್ದಾರೆ ಮಾನಸ ಗಂಗೋತ್ರಿ ಎಂದರೆ ಅಲ್ಲಿ ಉತ್ಪತ್ತಿಯಾದ ಮಾನಸಿಕ ಬೆಳವಣಿಗೆ, ವಿಷಯ ಜ್ಞಾನ ಸಂಪತ್ತು ಗಂಗೋತ್ರಿ ತರ ಹರಿದು ಹೋಗಿ ಸಮಾಜಕ್ಕೆ ಹಂಚಿ ಹೋಗಬೇಕು. ಸುವರ್ಣಾ ಗಂಗೋತ್ರಿಯಲ್ಲೂ ಸುವರ್ಣಾವತಿ ಜಲಾಶಯದ ಎಲ್ಲಕಡೆ ಹರಿದು ಹೋಗುತ್ತದೆ ಅದೇ ರೀತಿ ಇಲ್ಲಿಯ ಜ್ಞಾನ ಸಂಪತ್ತು ಸಮಾಜಕ್ಕೆ ಹರಿದು ಹೋಗುವ ಮೂಲಕ ದೊಡ್ಡಮಟ್ಟದಲ್ಲಿ ಚಾಮರಾಜನಗರ ವಿಶ್ವವಿದ್ಯಾನಿಲಯ ಬೆಳೆಯಬೇಕು ಎಂದು ಆಶಿಸಿದರು.

ಚಾಮರಾಜನಗರ ಜಿಲ್ಲೆಯ ಸಾಕ್ಷರತೆ ಪ್ರಮಾಣ ಶೇ. 62 ರಷ್ಟು ಇರುವುದು ಬಹಳ ವಿಷಾಧಕರ ಸಂಗತಿಯಾಗಿ ವಯಸ್ಕರ ಶಿಕ್ಷಣದಲ್ಲಿ ನಿಲಯದ ವಿದ್ಯಾರ್ಥಿಗಳು ಪಾಲ್ಗೊಂಡರೆ ಜಿಲ್ಲೆಯ ಸಾಕ್ಷರತೆ ಪ್ರಮಾಣ ವೃದ್ದಿಸಿ ಶೇ. 100 ರಷ್ಟು ಗುರಿಮುಟ್ಟಬಹುದು ಎಂದರು. ಆದ್ಯತೆಯಲ್ಲಿ ಚಾಮರಾಜನಗರ ವಿಶ್ವವಿದ್ಯಾನಿಲಯನ್ನು ನೋಡಿದರೆ ಇದು ಜ್ಞಾನಸಂಪತ್ತನ್ನು ಹೇಗೆ ಸಮಾಜಕ್ಕೆ ಹೇಗೆ ವಿಸ್ತರಣೆ ಮಾಡಬೇಕು ಅನ್ನುವುದು ಬಹಳ ಮುಖ್ಯವಾದ ಸಂಗತಿ. ಅಂತಹ ಅವಕಾಶಗಳು ಈ ವಿಶ್ವವಿದ್ಯಾನಿಲಯಕ್ಕೆ ವಿಫುಲ ಅವಕಾಶಗಳಿಗೆ ಈ ದಿಕ್ಕಿನಲ್ಲಿ ಒಂದು ವಿಶ್ವವಿದ್ಯಾನಿಲಯ ಬೆಳೆಯಸಬೇಕಿದೆ. ಅ ನಿಟ್ಟಿನಲ್ಲಿ ಬೆಳಸಲು ಕುಲಪತಿಗಳು ಆಲೋಚನೆ ಮಾಡಿದ್ದಾರೆ ಎಂದರು. ವಿವಿಯ ಪಿ.ಎಂ.ಇ ಬಿ ವಿಜಿ ನಿರ್ದೇಶಕ ಡಾ.ಸಿದ್ದರಾಜು ವಾರ್ಷಿಕ ವರದಿ ಮಂಡಿಸಿ ಮಾತನಾಡಿ, ನಾನಾ ಸಾಧನೆಗಳನ್ನು ಕಾನೂನುಗಳನ್ನು , ಶೈಕ್ಷಣಿಕ ಮತ್ತು ಸಂಶೋಧನೆ ಗಳೊಂದಿಗೆ ಒಡಂಬಡಿಕೆ ಮಾಡಿಕೊಂಡಿರುವುದಾಗಿ ತಿಳಿಸಿದರು.

## ಜಿಲ್ಲೆಯಲ್ಲಿ ಸ್ವೀಪ್ ಚಟುವಟಿಕೆ, ರಂಗೋಲಿ ಸ್ಪರ್ಧೆ

# ವಿವಿಧೆಡೆ ಮತದಾನ ಜಾಗೃತಿ

**ಚಿಕ್ಕಬಳ್ಳಾಪುರ:** ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಹೆಚ್ಚಿನ ಮತದಾರರು ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು. ಮತ ಚಲಾಹಿಸುವುದು ನಮ್ಮ ಹಕ್ಕು, ತಪ್ಪದೆ ಎಲ್ಲರೂ ಮತದಾನ ಮಾಡಿ ಎಂದು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಡಾ. ಎನ್ ಭಾಸ್ಕರ್ ಅವರು ತಿಳಿಸಿದರು.

ಜಿಲ್ಲಾಡಳಿತ ಮತ್ತು ಚಿಕ್ಕಬಳ್ಳಾಪುರ ತಾಲೂಕು ಆಡಳಿತದ ಸ್ವೀಪ್ ಸಮಿತಿ , ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಮತದಾನ ಜಾಗೃತಿ ಅಂಗವಾಗಿ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಗುರುವಾರ ಆಯೋಜಿಸಲಾಗಿದ್ದ ರಂಗೋಲಿ ಸ್ಪರ್ಧೆಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮತದಾನದ ಜಾಗೃತಿ ಸಂದೇಶವನ್ನು ಸಾರುವ ನಿಟ್ಟಿನಲ್ಲಿ ಚಿಕ್ಕಬಳ್ಳಾಪುರ ತಾಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಿಬ್ಬಂದಿ,ಅಂಗನವಾಡಿ ,ಆಶಾ ಕರ್ತೆಯರು ರಂಗೋಲಿಯನ್ನು ಆಕರ್ಷಣೀಯವಾಗಿ ಬಿಡಿಸುವ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲು ಯತ್ನಿಸಿರುವುದು ಶ್ಲಾಘನೀಯ ಎಂದರು.

**ಟೈಟಾನ್ ಕಂಪನಿ ಸಿಬ್ಬಂದಿ ರವರಿಗೆ ಸ್ವೀಪ್:** ಚಿಕ್ಕಬಳ್ಳಾಪುರ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿ ಸಂದೀಪ್ ರವರು ಚಿಕ್ಕಬಳ್ಳಾಪುರ ನಗರದ ಹೊರವಲಯದಲ್ಲಿರುವ ಟೈಟಾನ್ ಕಂಪನಿಯಲ್ಲಿ ಅಲ್ಲಿನ ಅಧಿಕಾರಿ,ಸಿಬ್ಬಂದಿಗೆ ಮತದಾನದ ಬಗ್ಗೆ ಜಾಗೃತಿ ಮೂಡಿಸಿ ಮಾತನಾಡುತ್ತಾ, ಮತದಾನ ಮಾಡುವುದು ಪ್ರತಿ ಮತದಾರರರ ಹಕ್ಕು ಮತ್ತು ಕರ್ತವ್ಯವಾಗಿರುತ್ತದೆ. ತಪ್ಪದೆ ಮತ ಚಲಾಯಿಸಿ.ಇನ್ನೊಬ್ಬರ ಹೆಸರಿನಲ್ಲಿ ಮತದಾನ ಮಾಡುವುದು ಅಕ್ಷಮ್ಯ ಅಪರಾಧ ಮತ್ತು ಶಿಕ್ಷಾರ್ಹ. ಪ್ರಜಾಪ್ರಭುತ್ವದ ಬಲವರ್ಧನೆಗಾಗಿ ಕಡ್ಡಾಯವಾಗಿ ಎಲ್ಲರೂ ಮತದಾನ ಮಾಡಬೇಕು, ಮತದಾನದ ದಿನವಾದ ಏಪ್ರಿಲ್ 26ರಂದು ಸಾರ್ವಜನಿಕ ರಜೆ



ಇದ್ದು ತಪ್ಪದೇ ಎಲ್ಲರೂ ಮತದಾನ ಮಾಡಬೇಕು. ಮತದಾನದ ಜಾಗೃತಿ ಅಂಗವಾಗಿ ಮತದಾರರ ಸಹಿ ಸಂಗ್ರಹ ಅಭಿಯಾನ ಮತ್ತು ನನ್ನ ಮತ ನನ್ನ ಹಕ್ಕು ಹೇಳಿಕೆಯ ಸೆಲ್ಫೀ ಫೋಟೋ ಗ್ಯಾಲರಿ ಕಾರ್ಯಕ್ರಮ ಆಯೋಜಿಸಲಾಗಿದ್ದು,ಎಲ್ಲರೂ ಇದರ ಭಾಗವಾಗಿ ಪಾಲ್ಗೊಂಡಿದ್ದಕ್ಕೆ ಧನ್ಯವಾದ ತಿಳಿಸಿದರು.

**ಮತದಾನದ ಅರಿವಿಗೆ ಬೈಕ್ ರ್ಯಾಲಿ:** ಚಿಕ್ಕಬಳ್ಳಾಪುರ ನಗರಸಭೆ ವತಿಯಿಂದ ಸಾರ್ವಜನಿಕರಲ್ಲಿ ಮತದಾನದ ಬಗ್ಗೆ ಅರಿವು ಮೂಡಿಸಲು ನಗರಸಭೆ ಅಧಿಕಾರಿ,ಸಿಬ್ಬಂದಿ ಬೈಕ್ ರಾಲಿ ನಡೆಸಿದರು .ನಗರಸಭೆಯಿಂದ ಬೈಕ್ ರ್ಯಾಲಿ ಹೊರಟು ಗಂಗಮ್ಮಗುಡಿ ಬೀದಿ,ಎಂ.ಜಿ ರಸ್ತೆ,ಎಪಿಎಂಸಿ, ವಾಪಸಂದ್ರ, ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ, ಬಲಮುರಿ ವೃತ್ತ.,ಬಜಾರ್ ರಸ್ತೆ ಮುಖಾಂತರ ಮತ್ತೆ ನಗರಸಭೆಯ ಮುಂಭಾಗ ರ್ಯಾಲಿ ಮುಕ್ತಾಯಿತು.

**ಮಾನವ ಸರಪಳಿ ಮೂಲಕ ಜಾಗೃತಿ:** ಚಿಂತಾಮಣಿ ತಾಲ್ಲೂಕು ಸ್ವಿಪ್ ಸಮಿತಿ ವತಿಯಿಂದ ಲೋಕಸಭಾ ಸಾರ್ವತ್ರಿಕ ಚುನಾವಣೆ-2024 ಪ್ರಯುಕ್ತ ಇಂದು ಸಾರ್ವಜನಿಕರಿಗೆ ಕಾರ್ಯನಿರ್ವಹಣಾಧಿಕಾರಿ ಆನಂದ್ ಮತ್ತು ನಗರ ಸಭೆ ಆಯುಕ್ತೆ ಮಾಧವಿ ಸಮ್ಮುಖದಲ್ಲಿ ಚಿಂತಾಮಣಿ ನಗರದ ಟ್ಯಾಂಕ್ ಬಂಡ್ ಸರ್ಕಲ್ ಬಳಿ ಮಾನವ ಸರಪಳಿ ನಿರ್ಮಿಸಿ ಸಾರ್ವಜನಿಕರಿಗೆ ಮತ್ತು ನಗರಸಭೆಯ ಸಿಬ್ಬಂದಿಗೆ ಮತದಾನದ ಬಗ್ಗೆ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಜತೆಗೆ ಪ್ರತಿಜ್ಞಾವಿಧಿಯನ್ನು ಬೋಧಿಸಿ ಅರಿವು ಮೂಡಿಸಲಾಯಿತು.

**ಸ್ವಸಹಾಯ ಸಂಘದ ಮಹಿಳೆಯರಿಗೆ ಮತದಾನ ಜಾಗೃತಿ ಕಾರ್ಯಕ್ರಮ:** ಗೌರಿಬಿದನೂರು ತಾಲ್ಲೂಕು ಸ್ವಿಪ್ ಸಮಿತಿ ಅಧ್ಯಕ್ಷರು ಹಾಗೂ ಕಾರ್ಯನಿರ್ವಾಹಣಾಧಿಕಾರಿ ಹೊನ್ನಯ್ಯ ಜಿ. ಕೆ ರವರು ಗಂಗಸಂದ್ರ ಗ್ರಾಮ ಪಂಚಾಯತಿಯಲ್ಲಿನ ಸ್ವ-ಸಹಾಯ ಸಂಘದ ಮಹಿಳೆಯರಿಗೆ ಹಾಗೂ ಗ್ರಾಮಸ್ಥರಿಗೆ ಮತದಾನದ ಬಗ್ಗೆ ಜಾಗೃತಿ ಮೂಡಿಸಿದರು. ಶಿಡ್ಲಘಟ್ಟ ನಗರದ ಪಶುಪಾಲನಾ ಆಸ್ಪತ್ರೆಯ ಬಳಿ ಅಧಿಕಾರಿಗಳು ಮತದಾನದ ಜಾಗೃತಿಯ ''ಚುನಾವಣಾ ಪರ್ವ ದೇಶದ ಗರ್ವ'' ಬ್ಯಾನರ್ ಪ್ರದರ್ಶಿಸಿದರು ಜೊತೆಗೆ ಕರಪತ್ರಗಳನ್ನು ನೀಡಿ ಆಗಮಿಸಿದ್ದ ರೈತರಿಗೆ ಮತ್ತು ಸಿಬ್ಬಂದಿ ಅಧಿಕಾರಿಗಳಿಗೆ, ಸಾರ್ವಜನಿಕರಿಗೆ ಮತದಾನದ ಅರಿವಿನ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು.



**ಸೌಮ್ಯನಾಯಕಿ ಸಮೇತ ಶ್ರೀ ಚನ್ನಕೇಶವ ಸ್ವಾಮಿಗಳವರ ಬ್ರಹ್ಮರಥೋತ್ಸವ ಅಂಗವಾಗಿ ದಿ. ಅಂಗತಟ್ಟಿ ನಂಜುಂಡಪ್ಪನವರ ಮಗ ದಿ. ಅಂಗತಟ್ಟಿ ಚಿಕ್ಕರುದ್ರಪ್ಪ ನವರ ಸ್ಮರಣೆಯಲ್ಲಿ ಶ್ರೀ ಸಂಗಮೇಶ್ವರ ಧರ್ಮ ಸಂಸ್ಥೆ ವತಿಯಿಂದ ಗಾಂಧಿಚೌಕದ ತೇರಿನ (ರಥ) ಬಳಿ ವಸಂತೋತ್ಸವ ಪೂಜಾ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು. ಆಗಮಿಸಿದ ಭಕ್ತಾದಿಗಳಿಗೆ ಪಾನಕ, ಮಜ್ಜಿಗೆ, ಹೆಸರುಹುಸ್ಲಿ ಪ್ರಸಾದ ವಿತರಣೆ ಮಾಡಲಾಯಿತು. ಅರ್ಚಕರಾದ ಮುರಳೀಧರ್ ಭಟ್ಟಾಚಾರ್ಯರು, ತನು ಸಂಗಮೇಶ್ವರ ಧರ್ಮಸಂಸ್ಥೆಯ ಅಧ್ಯಕ್ಷರಾದ ಎಂ. ಚಂದ್ರಕಾಂತಕುಮಾರ್, ಕಾರ್ಯದರ್ಶಿ ವಿ. ವಿಶ್ವನಾಥ್, ಸದಸ್ಯರಾದ ಬಿ. ಪ್ರಭುದೇವ್, ಪಿ. ಮುರಳೀಧರ್, ಕೆ. ಮುರಳಿಧರ್ ಉಪಸ್ಥಿತರಿದ್ದರು.**



**ಮಹಾರತ್ನಂ ಟ್ರಸ್ಟ್ ಹಾಗೂ ಜಿಲ್ಲಾಕನ್ನಡ ಸಾಹಿತ್ಯ ಪರಿಷತ್‌ನ ಸಹಯೋಗದೊಂದಿಗೆಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ವಿವಿಧಕ್ಷೇತ್ರದಲ್ಲಿ ಸಾಧನೆಗೈದ ಮಹಿಳೆಯರಿಗೆ ಸನ್ಮಾನಿಸಿ ಗೌರವಿಸಲಾಯಿತು. ಸನ್ಮಾನಿತರಾದ ಲಕ್ಷ್ಮೀಪುರ ನಾಗರತ್ನ ಎಂ, ಕುವೆಂಪುನಗರದ ಆಂಡಾಳ್ ಕೆ.ಎಸ್, ವಿಜಯನಗರದ ಕಾಂತಮಣಿರವರನ್ನುಜಾನಪದ ವಿದ್ವಾಂಸರಾದ ಪ್ರೊ. ಮೈಸೂರುಕೃಷ್ಣಮೂರ್ತಿ ಸನ್ಮಾನಿಸಿ ಗೌರವಿಸಿದರು.ಮುಖ್ಯ ಅತಿಥಿಗಳಾಗಿ ಪರಿಷತ್ ನಅಧ್ಯಕ್ಷರಾದ ಮಡ್ಡಿಕೆರೆಗೋಪಾಲ್, ಮಹಾರತ್ನಂಟ್ರಸ್ಟ್‌ನಅಧ್ಯಕ್ಷರಾದ ಮೈಸೂರು ಮಹಾಲಿಂಗು ಎಂ, ಮಹಿಳಾ ಆಯೋಗದ ಮಾಜಿಅಧ್ಯಕ್ಷರಾದ ಮಂಜುಳಾ ಮಾನಸ, ಮಹಾರತ್ನಂಟ್ರಸ್ಟ್‌ನ ಕಾರ್ಯದರ್ಶಿ ರೂಪಾ, ಖಜಾಂಚಿ ನಾಗರತ್ನ ಎಂ. ಇದ್ದರು.**

## ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರ ಚುನಾವಣಾಧಿಕಾರಿಗಳಿಂದ ಅಧಿಸೂಚನೆ

**ಚಿಕ್ಕಬಳ್ಳಾಪುರ:** ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಚುನಾವಣೆ ಸಂಬಂಧ ಚಿಕ್ಕಳ್ಳಾಪುರ ಲೋಕಸಭಾ ಕ್ಷೇತ್ರದ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ, ಅವರು ಇಂದು ಅಧಿಸೂಚನೆ ಹೊರಡಿಸಿದರು.

ಚುನಾವಣಾ ಅಧಿಸೂಚನೆ ಹೊರಡಿಸುವುದರೊಂದಿಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಅವಧಿ ಪ್ರಾರಂಭವಾಗಿದೆ. ನಾಮಪತ್ರಗಳನ್ನು ಉಮೇದುವಾರರು ಅಥವಾ ಅವರ ಸೂಚಕರು ಚುನಾವಣಾಧಿಕಾರಿಗಳಾದ ಪಿ.ಎನ್.ರವೀಂದ್ರ, ಅಥವಾ ಸಹಾಯಕ ಚುನಾವಣಾಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಡಾ. ಎನ್.ತಿಪ್ಪೇಸ್ವಾಮಿ ಅವರಿಗೆ ಚಿಕ್ಕಬಳ್ಳಾಪುರದ ಶಿಡ್ಲಘಟ್ಟ ರಸ್ತೆಯಲ್ಲಿರುವ ಜಿಲ್ಲಾಡಳಿತ ಭವನದ ಎಫ್.ಎ-4 ರಲ್ಲಿರುವ ಚುನಾವಣಾಧಿಕಾರಿಗಳ ಕಚೇರಿಗೆ ಬೆಳಿಗ್ಗೆ 11 ರಿಂದ ಮಧ್ಯಾಹ್ನ 3 ಗಂಟೆಯ ವರಿಗೆ (ಸರ್ಕಾರಿ ರಜಾ ದಿನ ಹೊರತುಪಡಿಸಿ) ಏಪ್ರಿಲ್ 4 ರವರೆಗೆ ನಾಮಪತ್ರ ಸಲ್ಲಿಸಬಹುದು. ನಾಮಪತ್ರದ ನಮೂನೆಗಳನ್ನು ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಹಾಗೂ ಸದರಿ ಸಮಯದಲ್ಲಿ ಪಡೆಯಬಹುದಾಗಿದೆ.

ನಾಮಪತ್ರಗಳ ಪರಿಶೀಲನಾ ಕಾರ್ಯವು ಏಪ್ರಿಲ್ 5 ರ ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ನಡೆಯಲಿದೆ. ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳಲು ಏಪ್ರಿಲ್ 8ರ ಸೋಮವಾರ ಮಧ್ಯಾಹ್ನ 3 ಗಂಟೆ ಯವರೆಗೆ ಅವಕಾಶವಿರುತ್ತದೆ. ಉಮೇದುವಾರಿಕೆ ಹಿಂತೆದುಕೊಳ್ಳುವ ತಿಳುವಳಿಕೆ ಪತ್ರವನ್ನು ಉಮೇದುವಾರರು ಅಥವಾ ಅವರ ಯಾರೇ ಸೂಚಕರು ಅಥವಾ ಅದನ್ನು ಸಲ್ಲಿಸಲು ಉಮೇದುವಾರರಿಂದ ಲಿಖಿತದಲ್ಲಿ ಅಧಿಕೃತವಾದ ಅವರ ಚುನಾವಣಾ ಏಜೆಂಟರು ಚುನಾವಣಾಧಿಕಾರಿಗಳು ಅಥವಾ ಸಹಾಯಕ ಚುನಾವಣಾಧಿಕಾರಿಗಳಿಗೆ ಚುನಾವಣಾಧಿಕಾರಿಗಳ ಕಚೇರಿಯಲ್ಲಿ ಏಪ್ರಿಲ್ 8 ರಂದು ಮಧ್ಯಾಹ್ನ 3 ಗಂಟೆಗೆ ಮುಂಚಿತವಾಗಿ ಸಲ್ಲಿಸಬಹುದು. ಮತದಾನ ಏಪ್ರಿಲ್ 26 ರಂದು ಬೆಳಿಗ್ಗೆ 7 ರಿಂದ ಸಂಜೆ 6 ಗಂಟೆಯವರೆಗೆ ನಿಗದಿಯಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪಿ.ಎನ್. ರವೀಂದ್ರ, ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಮತೆಯ ಕರೆಯೋಲೆ ಜಾಗೃತಿ

**ವಿಜಯಪುರ:** ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಮತದಾರರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಪಟ್ಟಣದ ಪುರಸಭೆಯಿಂದ ಪ್ರಮುಖ ಬೀದಿಗಳಲ್ಲಿ ಡೊಳ್ಳು ಮೇಳ ಬಾರಿಸಿಕೊಂಡು ಜಾಥಾ ಕಾರ್ಯಕ್ರಮಕ್ಕೆ ಪುರಸಭಾ ಮುಖ್ಯಾಧಿಕಾರಿ ಸಂತೋಷ ಕುಮಾರ್ ಚಾಲನೆ ನೀಡಿದ್ದಾರೆ.ಈ ವೇಳೆ ಮಾತನಾಡಿದ ಅವರು ಲೋಕಸಭಾ ಚುನಾವಣೆಯಲ್ಲಿ ತಪ್ಪದೆ ಮತದಾನ ಮಾಡಬೇಕು. ಈ ಬಗ್ಗೆ ಜಾಗೃತ ಮೂಡಿಸಲು ಡೊಳ್ಳು ಮೇಳದೊಂದಿಗೆ ಮತದಾನದ ಮಮತೆಯ ಕರೆಯೋಲೆ ಪತ್ರಿಕೆಯೊಂದಿಗೆ ಪ್ರತಿ ಮನೆಗೂ ಪತ್ರಿಕೆ ಹಂಚುವ,ಹಾಗೂ ಮತದಾನದ ಬಗ್ಗೆ ಪ್ರಮಾಣ ವಚನ ಬೋಧಿಸುವ ಮೂಲಕ ಜಾಗೃತಿ ಜಾಥಾ ಮಾಡಲಾಯಿತು.

ಸಮಾಜದ ಪ್ರತಿಯೊಂದು ವರ್ಗದವರೂ ತಪ್ಪದೆ ಮತದಾನ ಮಾಡುವಂತೆ ಉತ್ತೇಜಿಸುವುದು ಈ ಪ್ರಚಾರದ ಉದ್ದೇಶವಾಗಿದೆ ಎಂದರು. ಪುರಸಭಾ ಕಂದಾಯ ನೀರಿಕ್ಷಕ ತ್ಯಾಗರಾಜು ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆಯು ನಮ್ಮ ದೇಶದಲ್ಲಿ ಅತಿ ಪ್ರಾಮುಖ್ಯತೆಯನ್ನು ಪಡೆದಿದ್ದು, ಈ ವ್ಯವಸ್ಥೆಯಲ್ಲಿ ಪ್ರಜೆಗಳ ಪ್ರತಿನಿಧಿಯನ್ನಾಗಿ ಆಯ್ಕೆ ಮಾಡಲು ನಾವೆಲ್ಲರೂ ಹಕ್ಕುಳ್ಳವರಾಗಿದ್ದೇವೆ. ಆದ್ದರಿಂದ ಮತದಾನ ಮಾಡುವ ಮೂಲಕ ನಮ್ಮ ಹಕ್ಕನ್ನು ಚಲಾಯಿಸಿ ಪ್ರತಿನಿಧಿಗಳನ್ನು ಆಯ್ಕೆ ಮಾಡುವ



ಜವಾಬ್ದಾರಿ ನಮ್ಮ ಮೇಲಿರುತ್ತದೆ ಎಂದರು.

ಈ ಸಂದರ್ಭದಲ್ಲಿ ಕಂದಾಯ ಅಧಿಕಾರಿ ಚಂದ್ರು, ಆರೋಗ್ಯ ಅಧಿಕಾರಿ ಲಾವಣ್ಯ, ಪುರಸಭೆ ಸಿಬ್ಬಂದಿಯಾದ ಅನಿಲ್, ಪವನ್ ಜೋಶಿ, ಜನಾರ್ಧನ, ಸುನೀಲ್, ಮಂಜುನಾಥ್, ಪೃಥ್ವಿ, ಹೇಮಾವತಿ, ಹೇಮಲತಾ, ಲಿಂಗಣ್ಣ, ಕುಮಾರ್, ಮಂಜುನಾಥ್, ಹೇಮಂತ್ ಕುಮಾರ್, ಜನಾರ್ಧನ್, ಪುರಸಭೆ ಪೌರಕಾರ್ಮಿಕರು ಹಾಜರಿದ್ದರು.

# ಸಂಗೀತ ಸಂತೋಷ ನೀಡುವ ಸಂಜೀವಿನಿ

**ಷರಂಭಾಪುರಿ ಪೀಠ(ಬಾಳೆಹೊನ್ನೂರು):** ಬದುಕಿನ ಜಂಜಾಟದಲ್ಲಿ ಸದಾ ಮುಳುಗಿರುವವರಿಗೆ ಸಂಗೀತ ಸಂತೋಷ ಸಮಾಧಾನ ನೀಡುವ ಸಂಜೀವಿನಿಯಾಗಿದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಇತ್ತಿಚೆಗೆ ಶ್ರೀ ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಸಂಗೀತ ಸೌರಭ ಹಾಗೂ ಸಂಗೀತ ದಿಗ್ಗಜರಿಗೆ ಸತ್ಕಾರ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಗದಗಿನ ಪಂ.ಡಾ|| ರಾಜಗುರು ಗುರುಸ್ವಾಮಿ ಕಲಕೇರಿ ಹಾಗೂ ಧಾರವಾಡದ ಪಂ. ಡಾ|| ಎಮ್.ವೆಂಕಟೇಶ ಕುಮಾರ್ ಇವರಿಗೆ ವಿಶೇಷ ಸತ್ಕಾರ ಹಾಗೂ ಗೌರವ ಗುರುರಕ್ಷೆ ನೀಡಿದ ನಂತರ ಮಾತನಾಡಿದ ಅವರು ಪ್ರತಿ ವರುಷದ ಜಯಂತಿ ಜಾತ್ರಾ ಮಹೋತ್ಸವ ಸಂದರ್ಭದಲ್ಲಿ ಉಭಯ ಸಂಗೀತ ದಿಗ್ಗಜರು ಎರಡು ಗಂಟೆಗಳ ವಿಶೇಷ ಸಂಗೀತ ನಡೆಸಿಕೊಡುವುದಾದರೆ ಅದಕ್ಕೆ ಅವಕಾಶ ಕಲ್ಪಿಸುವುದಾಗಿ ತಿಳಿಸಿದರು. ಇದೇ ಸಂದರ್ಭದಲ್ಲಿ ಪಂ. ಡಾ|| ಎಮ್.ವೆಂಕಟೇಶ ಕುಮಾರ್ ಅವರು ಬಸಂತ ರಾಗ, ದೃತ ತಾಳದಲ್ಲಿ ಪಶುಪತೇ ಗಿರಿಜಾಪತಿ, ಹಾನಗಲ್ ಕುಮಾರಸ್ವಾಮಿಗಳಿಂದ ವಿರಚಿತ 'ಸುಶಾಂತ ಗುರುವರೇಣ್ಯ ರೇಣುಕಾರ್ಯಭೋ' ಗೀತೆಯನ್ನು ಭೀಮಪಲಾಸ ರಾಗ ಜಪ್ ತಾಳದಲ್ಲಿ ನಂತರ ಗದಗಿನ ಕವಿ ಪುಟ್ಟರಾಜ ಗವಾಯಿಗಳಿಂದ ವಿರಚಿತ ವೀರಶೈವದ ಜಗದ್ಗುರು ಪಂಚಾಚಾರ್ಯರ ನಮಿಸುವೆನು' ಹಾಡನ್ನು



ರಾಗೇಶ್ರೀ ರಾಗ ಕೇರವ ತಾಳದಲ್ಲಿ ಅಮೋಘವಾಗಿ ಪ್ರಸ್ತುತಪಡಿಸಿ ಜನಮನ ಸೂರೆಗೊಂಡರು. ನಂತರ ಪಂ. ಡಾ|| ರಾಜಗುರು ಗುರುಸ್ವಾಮಿ ಕಲಕೇರಿ ಅವರು 'ಮಲತ್ರಯಗಳನು ತೊಲಗಿಸುವಂಥ ಜಾಣ್ಮೆಯುಳ್ಳವನೇ ವೀರಶೈವನು' ಅಲ್ಲಮಪ್ರಭುಗಳ ವಚನವನ್ನು ಜೋಗ ರಾಗ ತೀನತಾಳದಲ್ಲಿ ಹಾಗೂ ತಮ್ಮ ಸ್ವರಚಿತ ಕವನ 'ಅಂದಿಂದು ಕಂದದಾ ಮುಂದೆಂದು ನಂದದಾ ಪಂಚ ಪೀಠಾಧೀಶರ ಬೆಳಕು' ಗೀತೆಯನ್ನು ಚಾಂದ ರಾಗದಲ್ಲಿ ದಾದ್ರಾ, ತಾಳದಲ್ಲಿ ಪ್ರಸ್ತುತಪಡಿಸಿ ಶ್ರೋತೃಗಳ ಮನಸ್ಸಿಗೆ ಮುದ ನೀಡಿದರು. ಗದಗಿನ ಶರಣಯ್ಯನವರು ತಬಲಾ, ಪಂ.ಬಸವರಾಜ ಹಿರೇಮಠ ಹಾರ್ಮೋನಿಯಂ ಸಾಥ ನೀಡಿದರು.

ಎಡೆಯೂರು ರೇಣುಕ ಶಿವಾಚಾರ್ಯರು, ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು ಸೇರಿದಂತೆ ವಿವಿಧ ಮಠಾಧೀಶರು ಸಮಾರಂಭದಲ್ಲಿ ಉಪಸ್ಥಿತರಿದ್ದರು.ಹಂಪಸಾಗರದ ಶಿವಲಿಂಗ ರುದ್ರಮುನಿ ಶಿವಾಚಾರ್ಯರು ಪ್ರಾಸ್ತಾವಿಕ ಮಾತನಾಡಿದರು. ಗದಗಿನ ಗಾನಭೂಷಣ ವೀರೇಶ ಕಿತ್ತೂರ ಪ್ರಾರ್ಥನೆ ಹಾಡಿದರು. ಡಾ|| ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

# ಅನನ್ಯ ಕಾಲೇಜಿನಲ್ಲಿ ಬಿ.ಕಾಂ ವಿದ್ಯಾರ್ಥಿಗಳಿಗೆ ಸಮ್ಮೋಹಿನಿ ಚಿಕಿತ್ಸಾ ಕಾರ್ಯಾಗಾರ



**ತುಮಕೂರು:** ಸಮ್ಮೋಹಿನಿ ಚಿಕಿತ್ಸೆ ಪ್ರಾತ್ಯಕ್ಷಿತೆಯ ಮೂಲಕ ವಿದ್ಯಾರ್ಥಿಗಳಲ್ಲಿ ಸುಪ್ತ ಮನಸ್ಸನ್ನು ಬಳಸಿ ನೆನಪಿನ ಶಕ್ತಿ ಓದಿನ ಬಗೆಗೆ ಆಸಕ್ತಿ ಪರೀಕ್ಷಾ ಭಯ ನಿವಾರಣೆ ಇನ್ನೂ ಹಲವಾರು ಸಮಸ್ಯೆಗಳನ್ನು ಶಮನ ಮಾಡಲು ವಿದ್ಯಾರ್ಥಿಗಳಿಗೆ ಸಮ್ಮೋಹಿನಿ ಚಿಕಿತ್ಸೆಯ ಕಾರ್ಯಾಗಾರವನ್ನು ಬಿ.ಕಾಂ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಹಿಪ್ನೋಥೆರಪಿಸ್ಟ್ ಮತ್ತು ಸ್ಪಿರುಚ್ಯುಲ್ ಹೀಲರ್ ಜಿತೇಂದ್ರ ಜಿ.ಎಸ್.ರವರು ನಡೆಸಿಕೊಟ್ಟರು.

ನಗರದ ಅನನ್ಯ ಇನ್ಸ್ಟಿಟ್ಯೂಟ್ ಅಫ್ ಕಾಮರ್ಸ್ ಅಂಡ್ ಮ್ಯಾನೇಜ್ಮೆಂಟ್‌ನ ವತಿಯಿಂದ ಬಿ.ಕಾಂ ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಸಮ್ಮೋಹಿನಿ ಚಿಕಿತ್ಸಾ ಕಾರ್ಯಾಗಾರವನ್ನು ಮಾ.27ರಂದು ಬುಧವಾರ ಕಾಲೇಜಿನ ಆವರಣದಲ್ಲಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಉಪಾಧ್ಯಕ್ಷರಾದ ಬಿ.ಆರ್.ಉಮೇಶ್‌ರವರು ಮಾತನಾಡುತ್ತಾ ಸಮ್ಮೋಹಿನಿ ಚಿಕಿತ್ಸೆ ಎಂಬುದು ಸನಾತನ ವೇದೋಕ್ತವಾಗಿ ಬಂದ ಒಂದು ಪ್ರಾಚೀನ ಚಿಕಿತ್ಸಾ ವಿಧಾನ ಇದರಲ್ಲಿ ವ್ಯಕ್ತಿಯು ಅನುಭವಾತ್ಮಕ ಸಂವೇದನೆಗಳು, ಗ್ರಹಿಕೆಗಳು, ಅಲೋಚನೆಗಳು ಅಥವಾ ನಡವಳಿಕೆಗಳಲ್ಲಿ ಬದಲಾವಣೆಗಳನ್ನು ಕಾಣುತ್ತಾರೆ. ಸಮ್ಮೋಹಿನಾ ಸ್ಥಿತಿಯಲ್ಲಿರುವ ವ್ಯಕ್ತಿಯ ಅಥವಾ ವಿದ್ಯಾರ್ಥಿಯ ಸುಪ್ತ ಮನಸ್ಸಿನಲ್ಲಿ ಅಡಗಿರುವ ತಪ್ಪು ಗ್ರಹಿಕೆಗಳು, ಭಯಗಳು, ನೋವುಗಳು, ಕಹಿ ನೆನಪುಗಳನ್ನು ತೆಗೆದು ವ್ಯಕ್ತಿಗೆ ಅನುಕೂಲಕ್ಕೆ ಬೇಕಾದಂತಹ ಒಳ್ಳೆಯ ಗುಣಗಳನ್ನು ವಿಷಯಗಳನ್ನು ಭಿತ್ತಬಹುದಾಗಿದೆ. ವಿದ್ಯಾರ್ಥಿಗಳಿಗೆ ಈ ಚಿಕಿತ್ಸಾ ಅಥವಾ ಈ ವಿದ್ಯೆ ಬಹಳ ಉಪಯುಕ್ತವಾಗಿರುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಅನನ್ಯ ಸಂಸ್ಥೆಯ ಟ್ರಸ್ಟಿಯಾದ ಡಾ.ಹೆಚ್.ಹರೀಶ್‌ರವರು ಮಾತನಾಡುತ್ತಾ ಪ್ರಾಚೀನ ವಿದ್ಯೆಗಳಾದ ಯೋಗ, ಸಮ್ಮೋಹಿನಿ ವಿದ್ಯೆ, ಧ್ಯಾನ ಇವುಗಳನ್ನು ರೂಢಿಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು. ಇದೇ ಸಂದರ್ಭದಲ್ಲಿ ಅನನ್ಯ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ವಿಶ್ವಾಸ್, ಪ್ರಾಧ್ಯಾಪಕರಾದ ದೇವಕಿಪ್ರಸಾದ್, ಆರ್.ಅನಂತಲಕ್ಷ್ಮಿ ಹಾಗೂ ಸಂಸ್ಥೆಯ ಬೋಧಕ ಬೋಧಕೇತರ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಲಕ್ಷ್ಮೀ ಸಲಹೆ

# ಸದೃಢ ಭಾರತ ನಿರ್ಮಾಣಕ್ಕೆ ಮತದಾನ ಮಾಡಿ



**ಚಾಮರಾಜನಗರ:** ಅಖಂಡ, ಸದೃಢ ಭಾರತ ನಿರ್ಮಾಣಕ್ಕೆ ಎಲ್ಲರೂ ಕಂಕಣ ಬದ್ಧರಾಗಿ, ಕಡ್ಡಾಯವಾಗಿ ನೈತಿಕ ಮತದಾನ ಮಾಡುವಂತೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಪಿ. ಲಕ್ಷ್ಮಿ ಅವರು ಸಲಹೆ ಮಾಡಿದರು. ನಗರದ ಜಿಲ್ಲಾಡಳಿತ ಭವನದ ಹಳೇ ಕೆಡಿಪಿ ಸಭಾಂಗಣದಲ್ಲಿಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಹಿರಿಯ ನಾಗರಿಕರ ಹಾಗೂ ವಿಕಲಚೇತನ ಸಬಲೀಕರಣ ಇಲಾಖೆ ಮತ್ತು ಮೊಬಿಲಿಟಿ ಇಂಡಿಯಾ ಇವರ ಸಂಯುಕ್ತ ಆಶ್ರಯದಲ್ಲಿ ಸ್ವಾಭಿಮಾನಿ ಭಾರತ ನಿರ್ಮಾಣಕ್ಕಾಗಿ ವಿಶೇಷ ಚೇತನರ ವಿಶೇಷ ನಡಿಗೆ ಧ್ಯೇಯವಾಕ್ಯದಡಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ವಿಶೇಷಚೇತನರಿಗೆ ಹಮ್ಮಿಕೊಳ್ಳಲಾಗಿದ್ದ ಹೊಂಬೆಳಕು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಅಂಗವಿಕಲತೆ ಶಾಪವಲ್ಲ ವರ. ಸಮುದಾಯದಲ್ಲಿ ಈ ಹಿಂದೆ ವಿಕಲಚೇತನರಿಗೆ ಗೌರವವಿರಲಿಲ್ಲ. ಈಗ ಕಾಲ ಬದಲಾಗಿದೆ. ಇಂದಿನ ನಾಗರಿಕ ಸಮಾಜದಲ್ಲಿ ವಿಕಲಚೇತನರು ಎಲ್ಲರಂತೆ ಮತಗಟ್ಟೆಗೆ ಬಂದು ಮತದಾನ ಮಾಡಬಹುದಾಗಿದೆ. ಮತದಾನ ಪ್ರತಿಯೊಬ್ಬರ ಹಕ್ಕು. ನಮ್ಮೆಲ್ಲರ ಒಂದೊಂದು ಮತವು ಅತ್ಯಮೂಲ್ಯವಾಗಿದ್ದು, ಪ್ರತಿಯೊಬ್ಬರು ಮತ ಚಲಾಯಿಸಬೇಕು. ವಿಶೇಷಚೇತನರು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದರು. ಮದುವೆ ಪ್ರಕ್ರಿಯೆಯಲ್ಲಿ ಹೆಣ್ಣು ಹಾಗೂ ಗಂಡುಗಳ ವ್ಯಕ್ತಿತ್ವ, ಗುಣ, ನಡತೆಗಳ ಕುರಿತು ಕೂಲಂಕುಷವಾಗಿ ವಿಚಾರಿಸುವುದು ವಾಡಿಕೆ. ಹಾಗೆಯೇ ಎಲ್ಲರೂ ಸುಭದ್ರ ಜೀವನ, ಸುಭದ್ರ ದೇಶ ಕಟ್ಟುವ ನಿಟ್ಟಿನಲ್ಲಿ ಮತ ಹಾಕುವಾಗ ಚುನಾವಣೆಗೆ ಸ್ಪರ್ಧಿಸಿರುವ ವ್ಯಕ್ತಿಯ ಬಗ್ಗೆ ವೈಚಾರಿಕ ಪರಾಮರ್ಶೆ ನಡೆಸಬೇಕು. ಯಾವುದೇ ಆಮಿಷಗಳಿಗೆ ಒಳಗಾಗದೇ ಮತವನ್ನು ಚಲಾಯಿಸಬೇಕು. ಮತವನ್ನು ಮಾರಿಕೊಳ್ಳದೇ ನೈತಿಕ ಮತದಾನಕ್ಕೆ ಹೆಚ್ಚಿನ ಒತ್ತು ನೀಡಬೇಕು. ಜಿಲ್ಲೆಯಲ್ಲಿ ಒಟ್ಟು 17001 ವಿಕಲಚೇತನ ಮತದಾರರನ್ನು ನೋಂದಾಯಿಸಲಾಗಿದ್ದು, ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕೆಂದು ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಪಿ. ಲಕ್ಷ್ಮಿ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಮೊಬಿಲಿಟಿ ಇಂಡಿಯಾ ಸಂಸ್ಥೆ ಹಿರಿಯ ಕಾರ್ಯಕ್ರಮ ವ್ಯವಸ್ಥಾಪಕರಾದ ಎಸ್.ಎನ್. ಆನಂದ್ ಹಾಗೂ ಜಿಲ್ಲಾ ವಿಕಲಚೇತನರ ಸಂಘದ ಗೌರವಾಧ್ಯಕ್ಷರಾದ ಕೃಷ್ಣಮೂರ್ತಿ ಅವರು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ವಿಶೇಷಚೇತನರಿಗೆ ಮತದಾನದ ಮಹತ್ವದ ಬಗ್ಗೆ ಮನವರಿಕೆ ಮಾಡಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಮಂಜುನಾಥ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸುರೇಶ್, ಮೊಬಿಲಿಟಿ ಇಂಡಿಯಾ ಸಂಸ್ಥೆಯ ಸಂಯೋಜಕರಾದ ರಾಜಣ್ಣ, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ವೇದಿಕೆ ಕಾರ್ಯಕ್ರಮಕ್ಕೂ ಮೊದಲು ಜಿಲ್ಲೆಯಲ್ಲಿ ವಿಕಲಚೇತನರನ್ನು ಕೂಡ ಮತದಾನದ ಪ್ರಕ್ರಿಯೆಯಲ್ಲಿ ಭಾಗವಹಿಸುವಂತೆ ಪ್ರೇರೇಪಿಸಲು ಜಿಲ್ಲಾಡಳಿತ ಭವನದ ಮುಂಭಾಗದಿಂದ ಆಯೋಜಿಸಲಾಗಿದ್ದ ಜಾಗೃತಿ ಜಾಥಾಗೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ನೋಡೆಲ್ ಅಧಿಕಾರಿ ಪಿ. ಲಕ್ಷ್ಮಿ ಅವರು ಹಸಿರು ನಿಶಾನೆ ತೋರಿ ಚಾಲನೆ ನೀಡಿದರು. ಜಾಥಾದಲ್ಲಿ ಚುನಾವಣಾ ಪರ್ವ-ದೇಶದ ಗರ್ವ ಹಾಗೂ ನೈತಿಕ ಮತದಾನಕ್ಕೆ ಬೆಂಬಲಿಸುವಂತೆ ಘೋಷಣೆಗಳನ್ನು ಮೊಳಗಿಸಿ ಅರಿವು ಮೂಡಿಸಲಾಯಿತು.

## ಆಕರ್ಷಕ ಮತದಾರರ ಆಮಂತ್ರಣ ಪತ್ರ ಅನಾವರಣ

**ಚಾಮರಾಜನಗರ:** ಜಿಲ್ಲೆಯಲ್ಲಿ ಈ ಬಾರಿ 18 ವರ್ಷ ತುಂಬಿದ ನೂತನ ಮತದಾರರನ್ನು ಮತಗಟ್ಟೆಗಳಿಗೆ ಸೆಳೆದು ಮತದಾನ ಪ್ರಮಾಣವನ್ನು ಹೆಚ್ಚಿಸುವ ಸಲುವಾಗಿ ನಗರದ ಜಿಲ್ಲಾಡಳಿತ ಭವನದ ಮುಂಭಾಗ (ಗೇಟ್)ದಲ್ಲಿ ಆಕರ್ಷಕವಾಗಿ ವಿನ್ಯಾಸಗೊಳಿಸಿ ಅಳವಡಿಸಲಾಗಿರುವ ಬೃಹತ್ ಮತದಾರರ ಬೃಹತ್ ಆಮಂತ್ರಣ ಪತ್ರವನ್ನು ಅನಾವರಣಗೊಳಿಸಲಾಯಿತು. ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಅಂಗವಾಗಿ ಜಿಲ್ಲಾ ಸ್ವೀಪ್ ಕಾರ್ಯಕ್ರಮದಡಿ ನಗರದಲ್ಲಿಂದು ಹಮ್ಮಿಕೊಳ್ಳಲಾಗಿದ್ದ ಜಾಗೃತಿ ಜಾಥಾ ಸಂದರ್ಭದಲ್ಲಿ ಜಿಲ್ಲೆಯ ಯುವ ಮತದಾರರನ್ನು ಮತಗಟ್ಟೆಗಳಿಗೆ ಕರೆತರಲು ಮದುವೆಯ ಆಹ್ವಾನ ಪತ್ರದ ಮಾದರಿಯಲ್ಲಿ ತಯಾರಿಸಿ ಅಳವಡಿಸಲಾಗಿರುವ ಏಪ್ರಿಲ್ 26ರಂದು ಮತದಾನದ ಮಮತೆಯ ಕರೆಯೋಲೆ? ಆಮಂತ್ರಣ ಪತ್ರವನ್ನು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಶಿಲ್ಪಾ ನಾಗ್ ಅವರು ಉದ್ಘಾಟಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ರ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ಬಿ.ಆರ್.ಟಿ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯ ಸಂರಕ್ಷಣಾಧಿಕಾರಿ ದೀಪಾ ಜೆ. ಕಂಟ್ರಾಕ್ಟರ್, ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ, ಜಿಲ್ಲಾ ಚುನಾವಣಾ ರಾಯಭಾರಿ ದೀಪಾ ಬುದ್ದೆ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಮಂಜುನಾಥ್, ತಾಲೂಕು ಪಂಚಾಯಿತಿ ಕಾರ್ಯನಿವಾಹಕ ಅಧಿಕಾರಿ ಕೃಷ್ಣಪ್ಪ, ಇತರರು ಇದ್ದರು.



## ಏ.15,16ಕ್ಕೆ ಕ್ರೀಡಾಪಟುಗಳ ಆಯ್ಕೆ ಪ್ರಕ್ರಿಯೆ

**ಮಂಡ್ಯ:** ಬೆಂಗಳೂರು ವಿದ್ಯಾನಗರ ಖೇಲೋ ಇಂಡಿಯಾ ರಾಜ್ಯ ಉತ್ಕೃಷತಾ ತರಬೇತಿ ಕೇಂದ್ರಕ್ಕೆ ಏಪ್ರಿಲ್ 15 ಮತ್ತು 16 ರಂದು ಅಥ್ಲೇಟಿಕ್ಸ್ ಹಾಗೂ ಈಜು ಕ್ರೀಡೆಗಳಲ್ಲಿ ಪ್ರತಿಭಾನ್ವಿತರಾಗಿರುವ ಹಾಗೂ ಪ್ರತಿಭೆಗಳನ್ನು ಆಯ್ಕೆ ಮಾಡುವ ಸಲುವಾಗಿ ಶ್ರೀ ಜಯಪ್ರಕಾಶ್ ನಾರಾಯಣ ರಾಷ್ಟ್ರೀಯ ಯುವ ತರಬೇತಿ ಕೇಂದ್ರ, ಕ್ರೀಡಾ ಶಾಲೆ ಯಲ್ಲಿ ಆಯ್ಕೆ ಪ್ರಕ್ರಿಯೆಯನ್ನು ಸಂಘಟಿಸಲಾಗುವುದು. ಆಸಕ್ತ ಅರ್ಹ ಕ್ರೀಡಾಪಟುಗಳು ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿರುತ್ತದೆ. ಆಯ್ಕೆಗೆ ಭಾಗವಹಿಸುವವರು 1-7-2024 ಕ್ಕೆ 14 ವರ್ಷ ಮೇಲ್ಪಟ್ಟವರಾಗಿದ್ದು, 23 ವರ್ಷ ಒಳಪಟ್ಟಿರಬೇಕು. ಪ್ರಸ್ತುತ 10ನೇ ತರಗತಿ ವ್ಯಾಸಂಗ ಮಾಡುತ್ತಿದ್ದು 2024-25ನೇ ಸಾಲಿಗೆ ಪ್ರಥಮ ಪಿ.ಯು.ಸಿ ಪ್ರವೇಶ ಪಡೆಯಲು ಅರ್ಹತೆಯುಳ್ಳವರಾಗಿರಬೇಕು ಹಾಗೂ ವಯಸ್ಸಿನ ದೃಢೀಕರಣ ಪತ್ರ ಕಡ್ಡಾಯವಾಗಿ ಇರಬೇಕು, ಕರ್ನಾಟಕದಲ್ಲಿ ವಾಸಿಸುತ್ತಿರುವವರಿಗೆ ಮೊದಲ ಆದ್ಯತೆ ನೀಡಲಾಗುವುದು ಆಧಾರ್ ಕಾರ್ಡ್ ಕಡ್ಡಾಯವಾಗಿ ತರತಕ್ಕದ್ದು, ಪಾಸ್ ಪೋರ್ಟ್ ಸೈಜಿನ ಇತ್ತೀಚಿನ ಭಾವಚಿತ್ರದೊಂದಿಗೆ ಮತ್ತು ಸ್ವವಿವರದ ಅರ್ಜಿಯನ್ನು ಆಯ್ಕೆ ಸಂದರ್ಭದಲ್ಲಿ ಸಲ್ಲಿಸಬೇಕು, ರಾಜ್ಯ ಮಟ್ಟದ ಅಧಿಕೃತ ಕ್ರೀಡಾಪಟುಗಳಲ್ಲಿ ಪದಕ ಪಡೆದಿರಬೇಕು ರಾಷ್ಟ್ರ ಮಟ್ಟದ ಅಧಕೃತ ಕ್ರೀಡಾಕೂಡಗಳಲ್ಲಿ ಭಾಗವಹಿಸಿ ಪದಕ ಪಡೆದವರಿಗೆ ಪ್ರಾಶಸ್ತ?ಯ ನೀಡಲಾಗುವುದು, ಆರೋಗ್ಯ ದೃಢೀಕರಣ ಹಾಗೂ ದೈಹಿಕ ಸಾಮರ್ಥ್ಯದ ಪ್ರಮಾಣ ಪತ್ರವನ್ನು ಸರ್ಕಾರಿ ವೈದ್ಯರಿಂದ ದೃಢೀಕರಿಸಿದ ಮೂಲ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸಬೇಕು, ಆಯ್ಕೆಯ ಸಮಯದಲ್ಲಿ ಯಾವುದೇ ಗಾಯಗಳು, ಸಾವು-ನೋವುಗಳು ಸಂಭವಿಸಿದರೆ ಸಂಸ್ಥೆ ಅಥವಾ ಇಲಾಖೆ ಜವಾಬ್ದಾರಿಯುತವಾಗಿರುವುದಿಲ್ಲ, ಆಯ್ಕೆಗೆ ಹಾಜರಾಗುವ ಕ್ರೀಡಾಪಟುಗಳಿಗೆ ಯಾವುದೇ ದಿನಭತ್ಯೆ, ಪ್ರಯಾಣ ಭತ್ಯೆ ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆಯಲ್ಲಿ ಕಛೇರಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಮಂಡ್ಯ ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿರುತ್ತಾರೆ

## ಜಿಲ್ಲಾಧಿಕಾರಿ ಸ್ಥಳ ಪರಿಶೀಲನೆ

**ಮಂಡ್ಯ:** ಜಿಲ್ಲಾಧಿಕಾರಿ ಡಾ: ಕುಮಾರ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎನ್ ಯತೀಶ್ ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸುತ್ತ ಸೆಕ್ಷನ್ 144 ಜಾರಿಯಾಗಿರುವ ಬಗ್ಗೆ ಪರಿಶೀಲನೆ ನಡೆಸಿದರು.



## ಎರಡು ನಾಮಪತ್ರ ಸ್ವೀಕಾರ

**ರಾಮನಗರ:** ಲೋಕಸಭಾ ಸಾರ್ವತ್ರಿಕ ಚುನಾವಣೆ-2024ಕ್ಕೆ ಸಂಬಂಧಿಸಿದಂತೆ ರಾಮನಗರ ಜಿಲ್ಲೆಯಲ್ಲಿ ಇಂದು (ಮಾ. 28ರಂದು) 2 ನಾಮಪತ್ರ ಸ್ವೀಕರಿಸಲಾಗಿದೆ. 23-ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಿ.ಕೆ. ಸುರೇಶ್ ಅವರು 2 ನಾಮಪತ್ರ ಸಲ್ಲಿಸಿರುತ್ತಾರೆ ಎಂದು ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.



## ಚುನಾವಣಾ ವೆಚ್ಚ ವೀಕ್ಷಕರ ನೇಮಕ: ದೂರು ಸಲ್ಲಿಸಲು ಅವಕಾಶ

**ಚಿಕ್ಕಬಳ್ಳಾಪುರ:** ಲೋಕಸಭಾ ಚುನಾವಣಾ ಸಂಬಂಧ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಚುನಾವಣಾ ವೆಚ್ಚ ವೀಕ್ಷಕರನ್ನಾಗಿ ದೇಬಾಶೀಶ್ ಮಜುಮ್ ದಾರ್, ಐ.ಆರ್.ಎಸ್ ರವರನ್ನು ಭಾರತ ಚುನಾವಣಾ ಆಯೋಗವು ನೇಮಕ ಮಾಡಿದೆ. ಸಾರ್ವಜನಿಕರು ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಆಗುತ್ತಿರುವ ಅನಧಿಕೃತ ವೆಚ್ಚಗಳು, ಎಂ.ಸಿ.ಸಿ. ಉಲ್ಲಂಘನೆ ಪ್ರಕರಣಗಳು ಕಂಡು ಬಂದಲ್ಲಿ ವೆಚ್ಚ ವೀಕ್ಷಕರ ದೂರವಾಣಿ ಸಂಖ್ಯೆ: 9481911030 ಗೆ ಕರೆ ಮಾಡಿ ತಿಳಿಸಬಹುದು ಅಥವಾ ಚುನಾವಣಾ ವೆಚ್ಚ ವೀಕ್ಷಕರು ವಾಸ್ತವ್ಯ ಹೂಡಿರುವ ನಗರದ ಹೊರವಲಯದಲ್ಲಿರುವ ಚದಲಪುರ ಪರಿವೀಕ್ಷಣಾ ಮಂದಿರದ ಕೊಠಡಿ ಸಂಖ್ಯೆ:2 ಕ್ಕೆ ಖುದ್ದಾಗಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




### ನಾಮಪತ್ರ ಸಲ್ಲಿಕೆ

ಮಂಡ್ಯ. ಮಂಡ್ಯ ಲೋಕಸಭಾ ಸಾರ್ವತ್ರಿಕ ಚುನಾವಣೆ 2024 ರ ಅಂಗವಾಗಿ ನಾಮಪತ್ರ ಸಲ್ಲಿಸಲು ಮೊದಲ ದಿನವಾದ ಇಂದು ಪಕ್ಷೇತರ ಅಭ್ಯರ್ಥಿಯಾಗಿ ಯೋಗೇಶ್ ಅವರು ಜಿಲ್ಲಾ ಚುನಾವಣಾಧಿಕಾರಿ ಡಾ: ಕುಮಾರ ಅವರಿಗೆ ನಾಮಪತ್ರ ಸಲ್ಲಿಸಿದರು.

## ಮದುವೆ ಸಮಾರಂಭದಲ್ಲಿ ಗಮನ ಸೆಳೆದ ಮತದಾನ ಜಾಗೃತಿ




**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ನಗರದ ಮಾಂಗಲ್ಯಂ ಕಲ್ಯಾಣ ಮಂಟಪದಲ್ಲಿ ನಿನ್ನೆ (ಮಾ.27) ನಡೆದ ಮದುವೆ ಸಮಾರಂಭದಲ್ಲಿ ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರ ನೇತೃತ್ವದಲ್ಲಿ ನಡೆದ ಮತದಾನ ಜಾಗೃತಿ ಕಾರ್ಯಕ್ರಮ ಎಲ್ಲರ ಗಮನ ಸೆಳೆಯಿತು.

ಮದುವೆ ಸಮಾರಂಭದಲ್ಲಿ ಚುನಾವಣಾ ಪರ್ವ ದೇಶದ ಗರ್ವ ಚುನಾವಣಾ ಘೋಷವಾಕ್ಯವುಳ್ಳ ಭಿತ್ತಿ ಪತ್ರಗಳನ್ನು ವಧು ವರರಿಗೆ ನೀಡಿ ಮತದಾನ ಅರಿವು ಮೂಡಿಸಲಾಯಿತು. ಅಲ್ಲದೇ ಸಮಾರಂಭದಲ್ಲಿ ನೆರೆದಿದ್ದ ಸಾವಿರಾರು ಜನರಿಗೆ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ತಪ್ಪದೇ ಮತದಾನ ಮಾಡುವಂತೆ ಜಾಗೃತಿ ಮೂಡಿಸಲಾಯಿತು.

ಇದೇ ವೇಳೆ ಮದುವೆ ಮಂಟಪದಲ್ಲಿ ಚುನಾವಣಾ ಆಯೋಗ ಸಿದ್ದಪಡಿಸಿರುವ ಮತದಾನದ ಸಂದೇಶ ಸಾರುವ ಜಾಗೃತಿ ಗೀತೆಯನ್ನು ಪ್ರಸಾರ ಮಾಡಲಾಯಿತು.

ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಪಿ. ಲಕ್ಷ್ಮೀ ಅವರು ಮಾತನಾಡಿ ಅವರು ಈ ಬಾರಿಯ ಚುನಾವಣೆಯಲ್ಲಿ ಮತದಾನದ ಕುರಿತು ಸಾರ್ವಜನಿಕರಲ್ಲಿ ವ್ಯಾಪಕ ಜಾಗೃತಿ ಮೂಡಿಸಿ ಮತದಾನದ ಪ್ರಮಾಣ ಹೆಚ್ಚಳಕ್ಕಾಗಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ವಿಭಿನ್ನ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ವಿಶೇ?ವಾಗಿ ಮದುವೆ ಮಂಟಪಗಳಲ್ಲಿ ನೂತನ ವಧು-ವರರಿಂದ ಜಾಗೃತಿ ಮೂಡಿಸಲಾಗುತ್ತಿದೆ. ಒಟ್ಟಾರೆಯಾಗಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಮತದಾನದ ಪ್ರಮಾಣವನ್ನು ಹೆಚ್ಚಿಸುವ ಗುರಿ ನಮ್ಮದಾಗಿದೆ ಎಂದರು.

ನಗರದಲ್ಲಿರುವ ಮದುವೆ ಮಂಟಪಗಳಲ್ಲಿ ಎಲ್ಲಿ ಮದುವೆ ಸಮಾರಂಭ ನಡೆಯುತ್ತಿದೆ ಅಲ್ಲಿಗೆ ಜಿಲ್ಲಾ ಸ್ವೀಪ್ ಸಮಿತಿ ತಂಡದವರು ಭೇಟಿ ನೀಡಿ ನೂತನ ವಧುವರರಿಂದ ಮತದಾನದ ಜಾಗೃತಿ ಸಾರುವ ಭಿತ್ತಿ ಪತ್ರಗಳನ್ನು ವಧು-ವರರಿಂದ ಪ್ರದರ್ಶಿಸಿ ಮದುವೆಯಲ್ಲಿ ಭಾಗಿಯಾಗುವ ಜನರಿಗೆ ಕಡ್ಡಾಯವಾಗಿ ಮತದಾನ ಮಾಡುವಂತೆ ತಿಳಿವಳಿಕೆ ನೀಡಲಾಗುತ್ತಿದೆ. ವಧು ವರರು ಹಾಗೂ ಸಾರ್ವಜನಿಕರಿಂದಲೂ ಸಹ ಮತದಾನ ಜಾಗೃತಿ ಕಾರ್ಯಕ್ರಮಕ್ಕೆ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಲಕ್ಷ್ಮೀ ಅವರು ತಿಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಎಂ. ಜುಂಜಣ್ಣ, ವಾರ್ತಾ ಸಹಾಯಕರಾದ ಸುರೇಶ್ ಕುಮಾರ್ ಹಾಗೂ ಇತರರು ಈ ಸಂದರ್ಭದಲ್ಲಿ ಇದ್ದರು.

## ಉತ್ತಮ ಅಭ್ಯರ್ಥಿ ಆಯ್ಕೆಗಾಗಿ ಎಲ್ಲರೂ ತಪ್ಪದೇ ಹಕ್ಕು ಚಲಾಯಿಸಿ

**ಚಾಮರಾಜನಗರ:** ಸಾರ್ವತ್ರಿಕ ಲೋಕಸಭಾ ಚುನಾವಣೆಯ ಮತದಾನ ಜಿಲ್ಲೆಯಲ್ಲಿ ಏಪ್ರಿಲ್ 26ರಂದು ನಡೆಯಲಿದ್ದು, ಉತ್ತಮ ಅಭ್ಯರ್ಥಿಯ ಆಯ್ಕೆಗಾಗಿ ಎಲ್ಲರೂ ತಪ್ಪದೇ ಕಡ್ಡಾಯವಾಗಿ ಮತದಾನ ಮಾಡುವಂತೆ ಅಜ್ಜೀಪುರ ಗ್ರಾಮ ಪಂಚಾಯತಿ ಕಾರ್ಯದರ್ಶಿ ಶ್ರೀನಿವಾಸ ಅವರು ತಿಳಿಸಿದರು.




ಹನೂರು ತಾಲೂಕಿನ ಅಜ್ಜೀಪುರ ಗ್ರಾಮ ಪಂಚಾಯತಿಯಲ್ಲಿ ನಿನ್ನೆ (ಮಾ.27) ನಡೆದ ತಾಲೂಕು ಸ್ವೀಪ್ ಸಮಿತಿಯಿಂದ ಆಯೋಜಿಸಿದ್ದ ಮತದಾನದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಾರ್ವಜನಿಕರು ಯಾವುದೇ ಆಮಿಷಗಳಿಗೆ ಒಳಗಾಗದೆ ನಿಷ್ಪಕ್ಷಪಾತವಾಗಿ ಮತ ಚಲಾಯಿಸಬೇಕು. ಮತದಾನ ನಿಮ್ಮ ಮುಂದಿನ ಪೀಳಿಗೆಯ ಭವಿಷ್ಯ ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಮತದಾನ ಮಾಡುವುದು ಬಹಳ ಪವಿತ್ರವಾದ ಕೆಲಸ. ನಮ್ಮ ದೇಶವನ್ನು ಅಭಿವೃದ್ಧಿ ಪಡಿಸುವ ಒಬ್ಬ ಸೂಕ್ತವಾದ ಅಭ್ಯರ್ಥಿ ಆಯ್ಕೆ ಮಾಡಲು ಎಲ್ಲರೂ ತಪ್ಪದೇ ಮತದಾನ ಮಾಡಿ ಎಂದರು.

ಅಜ್ಜೀಪುರ ಶಾಲೆಯ ಮಕ್ಕಳು ಪೋಷಕರಿಗೆ ಕಡ್ಡಾಯವಾಗಿ ಮತದಾನ ಮಾಡುವಂತೆ ನಡೆಸಿದ ಮತದಾನದ ಮಮತೆಯ ಕರೆಯೋಲೆ ಗಮನ ಸೆಳೆಯಿತು. ಇದೇ ಸಂಧರ್ಭದಲ್ಲಿ ಮತದಾನ ಜಾಗೃತಿ ವಿಡಿಯೋ ಮತ್ತು ಜಿಂಗಲ್ಸ್‌ಗಳ ಮೂಲಕ ಸಾರ್ವಜನಿಕರಿಗೆ ಮತ ಚಲಾವಣೆಯ ಮಹತ್ವದ ಅರಿವು ಮೂಡಿಸಲಾಯಿತು. ತಾಲೂಕು ಪಂಚಾಯತಿಯ ಮಹೇಶ, ಗ್ರಾಮ ಪಂಚಾಯತಿಯ ದಾಸ್, ಇಕ್ರಂ, ಶಾಲಾ ಶಿಕ್ಷಕರು, ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಇದ್ದರು.

## ಯಾವುದೇ ಆಮಿಷಗಳಿಗೆ ಒಳಗಾಗದೇ ಮತ ಚಲಾಯಿಸಲು ಶಿಕ್ಷಕರಾದ ಆನಂದ್ ಕರೆ

**ಚಾಮರಾಜನಗರ:** ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಮೊದಲ ಹಂತದ ಮತದಾನ ಏಪ್ರಿಲ್ 26 ರಂದು ನಡೆಯಲಿದ್ದು, ಅರ್ಹರೆಲ್ಲರು ಯಾವುದೆ ಆಮಿಷಗಳಿಗೆ ಒಳಗಾಗದೆ ನಿಷ್ಪಕ್ಷಪಾತವಾಗಿ ಮತ ಚಲಾಯಿಸುವಂತೆ ಹನೂರು ತಾಲೂಕಿನ ಬಸಪ್ಪನದೊಡ್ಡಿ ಗ್ರಾಮದ ಶಾಲಾ ಸಹ ಶಿಕ್ಷಕರಾದ ಆನಂದ ಅವರು ಕರೆ ನೀಡಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಸ್ವೀಪ್ ಸಮಿತಿ, ಹನೂರು ತಾಲೂಕು ಕಚೇರಿ ಹಾಗೂ ತಾಲೂಕು ಪಂಚಾಯತ್ ಮತ್ತು ತಾಲೂಕು ಸ್ವೀಪ್ ಸಮಿತಿ ವತಿಯಿಂದ ರಾಮಾಪುರ ಹಾಗೂ ಸೂಳೇರಿಪಾಳ್ಯ ಹಾಗೂ ಬಸಪ್ಪನದೊಡ್ಡಿ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮತದಾನ ಪವಿತ್ರವಾದ ಕಾರ್ಯವಗಿದೆ. ದೇಶವನ್ನು ಅಭಿವೃದ್ಧಿಯತ್ತ ಕೊಂಡೊಯ್ಯುವ ಒಬ್ಬಸೂಕ್ತವಾದ ಅಭ್ಯರ್ಥಿ ಆಯ್ಕೆ ಮಾಡಲು ಎಲ್ಲರೂ ತಪ್ಪದೇ ಮತದಾನ ಮಾಡಬೇಕು. ದೇಶವನ್ನ ನಡೆಸಲು ನಿಮ್ಮ ಒಂದು ಓಟು ಬಹಳ ಅಮೂಲ್ಯವಾಗಿದೆ. ಹಣದ ಆಸೆಗೆ ಮತವನ್ನು ಮಾರಿಕೊಳ್ಳಬೇಡಿ. ನಿಮಗೆ ಮೂಲ ಸೌಕರ್ಯ ಒದಗಿಸಲು ಅರ್ಹ ವ್ಯಕ್ತಿಯನ್ನು ಆಯ್ಕೆ ಮಾಡಿ ಎಂದು ಶಿಕ್ಷಕರಾದ ಆನಂದ ಅವರು ತಿಳಿಸಿದರು.

ಬಸಪ್ಪನ ದೊಡ್ಡಿ ಶಾಲೆಯ ಮಕ್ಕಳು ಕಡ್ಡಾಯವಾಗಿ ಮತದಾನ ಮಾಡುವಂತೆ ಅವರ ತಂದೆ ತಾಯಿಗಳಿಗೆ ಮತದಾನದ ಮಮತೆಯ ಕರೆಯೋಲೆ ಪತ್ರ ಬರೆದಿರುವುದು ಗಮನ ಸೆಳೆಯಿತು. ಇದೇ ಸಂಧರ್ಭದಲ್ಲಿ ಮತದಾನ ಜಾಗೃತಿಯ ವಿಡಿಯೋ ಮತ್ತು ಜಿಗಲ್ಸ್‌ಗಳ ಮೂಲಕ ಸಾರ್ವಜನಿಕ ಮತ ಚಲಾವಣೆಯ ಮಹತ್ವದ ತಿಳುವಳಿಕೆ ನೀಡಲಾಯಿತು

ಇದೇ ಸಂದರ್ಭದಲ್ಲಿ ತಾಲೂಕು ಪಂಚಾಯತಿಯ ಮಹೇಶ, ಗ್ರಾಮ ಪಂಚಾಯತಿಯ ಅಂಬಿಕಾ, ರಾಜಶೇಖರ, ಶಾಲಾ ಶಿಕ್ಷಕರು ಹಾಜರಿದ್ದರು.

## ಪ್ರಸ್ತುತ ಶೈಕ್ಷಣಿಕ ಸನ್ನಿವೇಶದಲ್ಲಿ ಕೌಶಲ್ಯ ಮತ್ತು ಉದ್ಯೋಗಾವಕಾಶ ಬಹಳ ಮುಖ್ಯ

**ಬೆಂಗಳೂರು:** ಪ್ರಸ್ತುತ ಶಿಕ್ಷಣ ವ್ಯವಸ್ಥೆಯಲ್ಲಿ ಕೌಶಲ ಮತ್ತು ಉದ್ಯೋಗವಕಾಶ ಕಲ್ಪಿಸುವುದು ಬಹಳ ಮುಖ್ಯವಾಗಿದೆ ಎಂದು ಕರ್ನಾಟಕ ಉನ್ನತ ಶಿಕ್ಷಣ ಪರಿಷತ್ತಿನ ಉಪಾಧ್ಯಕ್ಷರಾದ ಪ್ರೊ. ಎಸ್. ಆರ್. ನಿರಂಜನ ತಿಳಿಸಿದರು.

ಇಗ್ನೋ ಬೆಂಗಳೂರು ಪ್ರಾದೇಶಿಕ ಕೇಂದ್ರದಲ್ಲಿ ನಡೆದ ಹಿರಿಯ ವಿಧ್ಯಾರ್ಥಿಗಳ ಸಭೆ ಮತ್ತು ಪ್ರಮಾಣ ಪತ್ರ ಪ್ರಧಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದ ಅವರು, ಪ್ರಸ್ತುತ ಶೈಕ್ಷಣಿಕ ಸನ್ನಿವೇಶದಲ್ಲಿ ಕೌಶಲ್ಯ ಮತ್ತು ಉದ್ಯೋಗಾವಕಾಶ ಬಹಳ ಮುಖ್ಯ ಎಂದು ಅವರು ಅಭಿಪ್ರಾಯಪಟ್ಟರು.

ಭಾರತದಲ್ಲಿ 2050 ಕ್ಕೆ 400 ದಶಲಕ್ಷ ಮೆಟ್ರಿಕ್ ಟನ್ ಆಹಾರ ಪೂರೈಸಬೇಕಾಗುತ್ತದೆ. ಇದನ್ನು ಪೂರೈಸಲು ಸಾಧ್ಯವೇ ಎಂಬುದನ್ನು ನಾವು ಚಿಂತನೆ ನಡೆಸಬೇಕಿದೆ, ಈ ಕಾರಣದಿಂದಲೇ ಹಸಿರು ಕ್ರಾಂತಿ ಪಿತಾಮಹ ಡಾ.ಎಂ. ಎಸ್. ಸ್ವಾಮಿನಾಥನ್ ಅವರು ವೈಜ್ಞಾನಿಕ ಸಂಶೋಧನೆ ಕೈಗೊಂಡು ಹೆಚ್ಚು ಆಹಾರ ಉತ್ಪಾದನೆ ಮಾಡಲು ನೀಲಿ ನಕ್ಷೆ ರೂಪಿಸಿದರು. ಭಾರತ ಮತ್ತು ನೆರೆಯ ರಾಷ್ಟ್ರಗಳ ಅಗತ್ಯತೆ ಪೂರೈಸುವ ಇಳುವರಿಯನ್ನು ಪ್ರಸ್ತಾಪಿಸಿದ್ದರು ಎಂದರು.

ಕೋವಿಡ್‌ಅನ್ನು ನಿಯಂತ್ರಿಸಲು ಪರಮಾಣು ವಿಜ್ಞಾನ, ಸೈಬರ್ ಭದ್ರತೆ, ವೈದ್ಯಕೀಯ ವಿಜ್ಞಾನ, ಆರೋಗ್ಯ ಮತ್ತು ನೈರ್ಮಲ್ಯ ಮತ್ತು ಲಸಿಕೆ ಕ್ಷೇತ್ರಗಳಲ್ಲಿ ಭಾರತವು ಅನೇಕ ಮೈಲಿಗಲ್ಲುಗಳನ್ನು ಸಾಧಿಸಬಹುದು. ನಮ್ಮ ದೇಶದ ಆರ್ಥಿಕ ಬೆಳವಣಿಗೆಯ ಮೇಲೆ ನೇರವಾಗಿ ಪ್ರಭಾವವನ್ನು ಬೀರುವ ಶಿಕ್ಷಣ ಮತ್ತು ಸಂಬಂಧಿತ ಕ್ಷೇತ್ರಗಳಲ್ಲಿನ ಗುಣಮಟ್ಟವನ್ನು ಸುಧಾರಿಸಲು ಗುಣಾತ್ಮಕ ಸಂಶೋಧನೆಯತ್ತ ಗಮನಹರಿಸುವಂತೆ ಅವರು ಪದವೀಧರರನ್ನು ಪ್ರೇರೇಪಿಸಿದರು. ವಿದ್ಯಾರ್ಥಿಗಳು ವ್ಯವಹಾರ ಮತ್ತು ಸಂಖ್ಯಾಶಾಸ್ತ್ರೀಯ ತಂತ್ರಗಳನ್ನು ಅಭಿವೃದ್ಧಿಪಡಿಸಬೇಕು. ಇದು ಕಡಿಮೆ ಸಮಯದಲ್ಲಿ ಸಮಸ್ಯೆಗಳನ್ನು ಪರಿಹರಿಸಲು ಸಹಾಯ ಮಾಡುತ್ತದೆ. ಕೌಶಲ್ಯಗಳನ್ನು ಸುಧಾರಿಸಲು ಅಥವಾ ನವೀಕರಿಸಲು ಅಂತರವನ್ನು ಗುರುತಿಸುವಲ್ಲಿ ಸ್ವಯಂ ಮೌಲ್ಯಮಾಪನವು ಅತ್ಯುತ್ತಮ ವಿಧಾನವಾಗಿದೆ ಎಂದು ತಿಳಿಸಿದರು.

ನಂತರ ಮಾತನಾಡಿದ ಇಗ್ನೋ ಪ್ರಾದೇಶಿಕ ಕೇಂದ್ರ, ಹಿರಿಯ ಪ್ರಾದೇಶಿಕ ನಿರ್ದೇಶಕರಾದ ಡಾ.ಎಸ್. ರಾಧಾ ಅವರು ಇಗ್ನೋ ಐಐಸಿ ವೆಬಿನಾರ್‌ಗಳು, ಸ್ವಯಂ ಪ್ರಭಾ ಪ್ರಾದೇಶಿಕ ಭಾ?ಾ ಸಮಾಲೋಚನೆ ಮತ್ತು ಇತರ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಜ್ಞಾನ, ಅಭಿಪ್ರಾಯ-ಅನಿಸಿಕೆಗಳನ್ನು ಹಂಚಿಕೊಳ್ಳುವುದಕ್ಕೆ ಇದೊಂದು ಉತ್ತಮ ವೇದಿಕೆಯಾಗಿದೆ. ಇಗ್ನೋ ಪ್ರಾದೇಶಿಕ ಕೇಂದ್ರ, ಬೆಂಗಳೂರು ಇದುವರೆಗೆ ಹಳೆಯ ವಿದ್ಯಾರ್ಥಿಗಳ 300ಕ್ಕೂ ಹೆಚ್ಚು ಯಶಸ್ಸಿನ ಕಥೆಗಳನ್ನು ರೆಕಾರ್ಡ್ ಮಾಡಿದೆ ಮತ್ತು ಅಧಿಕೃತ ಚಾನೆಲ್‌ನಲ್ಲಿ ಅಪ್ಲೊ?ಲೀಡ್ ಮಾಡಿದೆ. ಇಗ್ನೋ ಹಳೆಯ ವಿದ್ಯಾರ್ಥಿಗಳು ಐಎಎಸ್, ಐಪಿಎಸ್, ಮಿಲಿಟರಿ, ಸರ್ಕಾರಿ ಕಚೇರಿಗಳು ಮತ್ತು ಸರ್ಕಾರೇತರ ಕಚೇರಿಗಳು ಹಾಗೂ ಸಮಾಜದಲ್ಲಿ ಪ್ರಮುಖ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ ಎಂದು ತಮ್ಮ ಸಂಸ್ಥೆಯ ವಿದ್ಯಾರ್ಥಿಗಳ ಬಗ್ಗೆ ಕಾರ್ಯಕ್ರಮದಲ್ಲಿ ನೆರೆದಿದ್ದ ವಿದ್ಯಾರ್ಥಿಗಳಿಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ಉಪಕಾರ್ಯದರ್ಶಿ ಹಾಗೂ ಎಂಇಎಸ್ ಸದಸ್ಯ ಗಣೇಶ ಭಟ್ಟ, ಪ್ರೊ?ರ. ಡಾ. ವೆಂಕೋಬ ರಾವ್, ಬೆಂಗಳೂರಿನ ಪ್ರಾದೇಶಿಕ ಕೇಂದ್ರದ ಸಹಾಯಕ ನಿರ್ದೇಶಕರಾದ ಡಾ. ಹೆಚ್ ಸಿ ಹೇಮಾಮಾಲಿನಿ ಮತ್ತು ಡಾ.ಪಿ.ಕಸ್ತೂರಿ ಮುಂತಾದವರು ಉಪಸ್ಥಿತರಿದ್ದರು.

## ಪ್ರತಿಯೊಬ್ಬರು ಕಡ್ಡಾಯ ಮತ್ತು ನೈತಿಕ ಮತದಾನ ಮಾಡಿ: ರಾಮಲಿಂಗಯ್ಯ

**ಚಾಮರಾಜನಗರ:** ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ಕಡ್ಡಾಯವಾಗಿ ಮತದಾನ ಮಾಡಿ ಎಂದು ಗುಂಡ್ಲುಪೇಟೆ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ರಾಮಲಿಂಗಯ್ಯ ಅವರು ತಿಳಿಸಿದರು.




ಗುಂಡ್ಲುಪೇಟೆ ತಾಲೂಕಿನ ತೆರಕಣಾಂಬಿ ಗ್ರಾಮ ಪಂಚಾಯಿತಿಯಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ತಾಲೂಕು ಸ್ವೀಪ್ ಸಮಿತಿಯಿಂದ ಆಯೋಜಿಸಲಾಗಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ದೇಶವನ್ನು ಮುನ್ನಡೆಸಲು ನಿಮ್ಮ ಒಂದು ಮತ ಬಹಳ ಅಮೂಲ್ಯವಾದದ್ದು. ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸಿ ಮೂಲಸೌಕರ್ಯ ಒದಗಿಸುವ ಅರ್ಹ ವ್ಯಕ್ತಿಯನ್ನು ಆಯ್ಕೆ ಮಾಡಬೇಕು. ಯಾವುದೇ ಆಮಿ?ಗಳಿಗೆ ಒಳಗಾಗದೆ ನಿ?ಕ್ಷಪಾತವಾಗಿ ಮತಚಲಾಯಿಸಬೇಕು. ಮತದಾನ ನಿಮ್ಮ ಮುಂದಿನ ಪೀಳಿಗೆಗೆ ಭವಿ?್ಯ ರೂಪಿಸುವಲ್ಲಿ ತನ್ನದೇ ಆದ ಪಾತ್ರವಹಿಸುತ್ತದೆ ಎಂದು ರಾಮಲಿಂಗಯ್ಯ ತಿಳಿಸಿದರು.

ಇದೇ ವೇಳೆ ಮತದಾನ ಜಾಗೃತಿಯ ಜಿಂಗಲ್ಸ್‌ಗಳ ಮೂಲಕ ಸಾರ್ವಜನಿಕರಲ್ಲಿ ಮತ ಚಲಾವಣೆಯ ಮಹತ್ವದ ಬಗ್ಗೆ ಅರಿವು ಮೂಡಿಸಲಾಯಿತು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಹದೇವಸ್ವಾಮಿ ರವರು ಗ್ರಾಮೀಣ ಸಂತೆಯಲ್ಲಿ ನೆರೆದಿದ್ದ ರೈತರಿಗೆ ಕಡ್ಡಾಯ ಮತದಾನದ ಪ್ರತಿಜ್ಞಾ ವಿಧಿ ಭೋದಿಸಿದರು.

ಸಹಾಯಕ ಯೋಜನಾಧಿಕಾರಿ ಶ್ರೀನಿವಾಸ್, ತಾಲ್ಲೂಕು ಪಂಚಾಯತಿಯ ನೀಲಕಂಠ, ಯತೀಶ, ಶಿವಕುಮಾರ್, ಗ್ರಾಮ ಪಂಚಾಯತಿ ಕಾರ್ಯದರ್ಶಿ ರಾಜು ಎಂ, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮ ಪಂಚಾಯಿತಿ ಹಾಗೂ ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರು ಈ ಸಂಧರ್ಭದಲ್ಲಿ ಹಾಜರಿದ್ದರು.

# ಸಂಜೆ ಟಿಪ್ಸ್



## 'ಒಂದು ದೇಶ, ಒಂದು ಟ್ರಾಕ್ಟರ್ ಬೆಲೆ'ಗೆ ಚಾಲನೆ

ಭಾರತದ ನಂ.1 ಟ್ರಾಕ್ಟರ್ ರಫ್ತು ಬ್ರಾಂಡ್ ಸೋನಾಲಿಕಾ ಟ್ರಾಕ್ಟರ್ಸ್ ಕೃಷಿ ಯಾಂತ್ರೀಕರಣದಲ್ಲಿ ಪರಿವರ್ತನೀಯ ಹೆಜ್ಜೆ ಇರಿಸಲು ಉತ್ಸುಕವಾಗಿದೆ ಮತ್ತು ತನ್ನ 'ಒಂದು ದೇಶ, ಒಂದು ಟ್ರಾಕ್ಟರ್' ಅನ್ನು ಒಂದೇ ಬೆಲೆಯಲ್ಲಿ ನೀಡುವ ಹೊಚ್ಚಹೊಸ ಉಪಕ್ರಮ ಪ್ರಾರಂಭಿಸಿದೆ. ತನ್ನ ಹೆವಿ-ಡ್ಯೂಟಿ ಟ್ರಾಕ್ಟರ್ ಶ್ರೇಣಿಯನ್ನು ವಿಸ್ತರಿಸುವ ನಿಟ್ಟಿನಲ್ಲಿ ಸೋನಾಲಿಕಾ ತನ್ನ ಹೊಚ್ಚಹೊಸ 'ಸಿಕಂದರ್ ಡಿ.ಎಲ್.ಎಕ್ಸ್.ಡಿ.ಐ.60 ಟಾರ್ಕ್ ಪ್ಲಸ್ ಮಲ್ಟಿ-ಸ್ಪೀಡ್ ಟ್ರಾಕ್ಟರ್ ಅನ್ನು ಕಂಪನಿಯ ವಿಶೇಷ ಬೆಲೆ ರೂ.8,49,999(ಎಕ್ಸ್- ಶೋರೂಂ)ನಲ್ಲಿ ಬಿಡುಗಡೆ ಮಾಡಿದೆ. ಗಟ್ಟಿ ಮಣ್ಣಿನಲ್ಲೂ ಅಸಾಧಾರಣ ಕಾರ್ಯಕ್ಷಮತೆ ನೀಡಲು ಉನ್ನತ ಟಾರ್ಕ್ ಹೊಂದಿದ್ದು ಇದು ಅತ್ಯಂತ ದೊಡ್ಡ ಎಂಜಿನ್ ವಿಭಾಗದಲ್ಲಿ ಸೇರಿದೆ ಮತ್ತು ಜಮೀನಿನ/ ಜಮೀನಿನ ಆಚೆಗೂ 10 ಡಿಲಕ್ಸ್ ವಿಶೇಷತೆಗಳ ಮೂಲಕ ಕಠಿಣ ಕಾರ್ಯಕ್ಷಮತೆ ನೀಡುತ್ತದೆ. ಸೋನಾಲಿಕಾದ ಹೆವಿ ಡ್ಯೂಟಿ ಟ್ರಾಕ್ಟರ್ ಶ್ರೇಣಿಗೆ ಹೊಚ್ಚಹೊಸ ಸೇರ್ಪಡೆಯಾಗಿದ್ದು ಪಂಜಾಬ್ ನ ಹೊಷಿಯಾರ್ ಪುರದ ವಿಶ್ವದ ನಂ.1 ಟ್ರಾಕ್ಟರ್ ಘಟಕದಿಂದ ಬಿಡುಗಡೆಯಾಗಲಿದೆ. ಸೋನಾಲಿಕಾದ ಹೊಚ್ಚಹೊಸ ಸೇರ್ಪಡೆ ಸಿಕಂದರ್ ಡಿ.ಎಲ್.ಎಕ್ಸ್.ಡಿ.ಐ.60 ಟಾರ್ಕ್ ಪ್ಲಸ್ ಮಲ್ಟಿ ಸ್ಪೀಡ್ ಟ್ರಾಕ್ಟರ್ ತನ್ನ ಅತ್ಯಂತ ಪ್ರಶಂಸೆಗೆ ಒಳಗಾದ ಸಿಕಂದರ್ ಡಿ.ಎಲ್.ಎಕ್ಸ್. ಸರಣಿಗೆ ಹೊಚ್ಚಹೊಸ ಸೇರ್ಪಡೆಯಾಗಿದೆ. ಸೋನಾಲಿಕಾದ ಪರಂಪರೆಯನ್ನುಮುಂದಕ್ಕೆ ಕೊಂಡೊಯ್ಯುವ ನಿಟ್ಟಿನಲ್ಲಿ ಹೊಸ ಟ್ರಾಕ್ಟರ್ ಅತ್ಯಂತ ದೊಡ್ಡ 4 ಸಿಲಿಂಡರ್ 4,709 ಸಿಸಿ ಎಚ್.ಡಿ.ಎಂ. ಎಂಜಿನ್‌ಅನ್ನು ಹೊಂದಿದ್ದು ಸರಿಸಾಟಿ ಇರದ 275 ಎನ್.ಎಂ.ಟಾರ್ಕ್ ನೀಡುತ್ತದೆ. ಸುಧಾರಿತ 12ಎಫ್+12ಆರ್ ಮಲ್ಟಿ-ಸ್ಪೀಡ್ ಟ್ರಾನ್ಸ್ ಮಿಷನ್ ಅನ್ನು ಶಟಲ್-ಟೆಕ್ ತಂತ್ರಜ್ಞಾನದೊಂದಿಗೆ ಹಾಗೂ ಉನ್ನತ 5ಜಿ ಹೈಡ್ರಾಲಿಕ್ಸ್ ನೊಂದಿಗೆ ಹೊಂದಿದ್ದು ಇದು 2,200 ಕೆಜಿ ಹೊಸ ಬಿಡುಗಡೆ ಕುರಿತು ಇಂಟರ್ನ್ಯಾಷನಲ್ ಟ್ರಾಕ್ಟರ್ಸ್ ಲಿಮಿಟೆಡ್ ಜಂಟಿ ವ್ಯವಸ್ಥಾಪಕ ನಿರ್ದೇಶಕ ಶ್ರೀ ರಾಮನ್ ಮಿಟ್ಟಲ್, ಮೆಚ್ಚುಗೆ ವ್ಯಕ್ತಪಡಿಸಿದರು.

## ನೇರಳೆಹಣ್ಣಿನ ಜ್ಯೂಸ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ನೇರಳೆಹಣ್ಣು, ನೀರು - 2ಲೀಟರ್, ಸಕ್ಕರೆ - ಅರ್ಧ ಕಪ್, ಉಪ್ಪು- ರುಚಿಗೆ, ಕಾಳುಮೆಣಸಿನ ಪುಡಿ - ಚಿಟಿಕೆ, ಕಪ್ಪು ಉಪ್ಪು - ಅರ್ಧ ಚಮಚ, ಜೀರಿಗೆ ಪುಡಿ - ಒಂದೂವರೆ ಚಮಚ, ನಿಂಬೆರಸ - ಕಾಲು ಕಪ್, ಐಸ್ಕ್ಯೂಬ್ - ಅಗತ್ಯವಿದ್ದಷ್ಟು, ಪುದಿನಾ - ಒಂದು ಮುಷ್ಟಿ,

### ಮಾಡುವ ವಿಧಾನ

ನೇರಳೆಹಣ್ಣನ್ನು ತೊಳೆದು, ನೀರಿನಲ್ಲಿ ಬೇಯಿಸಿಕೊಳ್ಳಿ. ಸ್ಟೌ ಉರಿ ಸಣ್ಣ ಮಾಡಿದ ಆ ನೀರಿಗೆ ಉಪ್ಪು, ಕಪ್ಪು ಉಪ್ಪು, ಜೀರಿಗೆ ಪುಡಿ, ಕಾಳುಮೆಣಸಿನ ಪುಡಿ ಹಾಗೂ ಸಕ್ಕರೆ ಸೇರಿಸಿ. ಪುನಃ ಸಣ್ಣ ಉರಿಯಲ್ಲಿ 15ನಿಮಿಷ ಕುದಿಸಿ. ಬೀಜದಿಂದ ತಿರುಳು ಬೇರಾಗುವವರೆಗೂ ಬೇಯಿಸಿಕೊಂಡು ಸ್ಟೌ ಆಫ್ ಮಾಡಿ. ನಂತರ ಮ್ಯಾಷರ್‌ನಿಂದ ಕಿವುಚಿ. ಅದರಿಂದ ರಸವನ್ನು ಹಿಂಡಿ ಸೋಸಿಕೊಳ್ಳಿ. ಆದರೆ ಬೀಜ ಜಜ್ಜದಂತೆ ನೋಡಿಕೊಳ್ಳಿ. ಈ ರಸವನ್ನು ನಿಂಬೆರಸದೊಂದಿಗೆ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಸಕ್ಕರೆ ಹಾಗೂ ಉಪ್ಪಿನ ರುಚಿ ನೋಡಿಕೊಂಡು ಐಸ್ಕ್ಯೂಬ್ ಸೇರಿಸಿ. ಈ ನಿಮ್ಮ ಮುಂದೆ ನೇರಳೆಹಣ್ಣಿನ ಜ್ಯೂಸ್ ಕುಡಿಯಲು ಸಿದ್ಧ.

# ಸಮಂತಾ ಬಿಚ್ಚಿಟ್ಟ ಗುಟ್ಟು



ದಕ್ಷಿಣ ಚಿತ್ರರಂಗದ ಪ್ರಮುಖ ನಟಿಮಣಿಯರಲ್ಲಿ ಸಮಂತಾ ರುತ್ ಪ್ರಭು ಕೂಡ ಒಬ್ಬರು. ಗತಿಸಿದ ಕೆಲ ಸಮಯ ಸಮಂತಾ ಪಾಲಿಗೆ ಸಾಕಷ್ಟು ಕಷ್ಟಕರವಾಗಿತ್ತು. ಸಮಂತಾ ಆಟೋಇಮ್ಯೂನ್ ಮಯೋಸಿಟಿಸ್ ಎಂಬ ಕಾಯಿಲೆಯಿಂದ ಬಳಲುತ್ತಿದ್ದರು. ಈಗ ಈ ಕಾಯಿಲೆಯಿಂದ ಚೇತರಿಸಿಕೊಂಡ ಬಳಿಕ, ಸಮಂತಾ ಮತ್ತೆ ವರ್ಕ್ ಮೋಡ್ ಗೆ ಮರಳಿದ್ದಾರೆ. ಇದಾದ ಬಳಿಕ ಸಮಂತಾ ಮಾಧ್ಯಮ್ ಸಂವಾದ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿದ್ದರು. ಇಂಡಿಯಾ ಟುಡೇ ಮೀಡಿಯಾ ಕಾಂಕ್ಲೆವ್ ನಲ್ಲಿ ಸಮಂತಾ ರುತ್ ಪ್ರಭು ತಮ್ಮ ಅನಾರೋಗ್ಯದ ಬಗ್ಗೆ ಬಹಿರಂಗವಾಗಿ ಮಾತನಾಡಿದ್ದಾರೆ. ಅಷ್ಟೇ ಅಲ್ಲ ತಮ್ಮ ಲೈಂಗಿಕತೆಯ ಬಗ್ಗೆ ತುಂಬಾ ಆಘಾತಕಾರಿ ಹೇಳಿಕೆಯೊಂದನ್ನು ನೀಡಿದ್ದು, ಈ ಹೇಳಿಕೆ ಹೆಡ್ಲೈನ್ ಗಳನ್ನು ಸೃಷ್ಟಿಸುತ್ತಿದೆ.

ಈ ಸಮ್ಮೇಳನದಲ್ಲಿ ನಟಿ ಸಮಂತಾ ರುತ್ ಪ್ರಭು ಅವರಿಗೆ 'ಪುಷ್ಪಾ' ಚಿತ್ರದಲ್ಲಿ ನಿಮ್ಮ ಮೇಲೆ ಚಿತ್ರೀಕರಿಸಲಾದ 'ಊ ಅಂಟಾವಾ' ಬ್ಲಾಕ್‌ಬಸ್ಟರ್ ಹಾಡನ್ನು ನೀವು ಆಯ್ಕೆ ಮಾಡಲು ಕಾರಣವೇನೆ ಎಂದು ಪ್ರಶ್ನಿಸಲಾಗಿದೆ, ಇದಕ್ಕೆ ಉತ್ತರಿಸಿದ ಸಮಂತಾ, ಇದು ತನಗೆ ದೊಡ್ಡ ಸವಾಲಾಗಿತ್ತು ಎಂದು ಹೇಳಿದ್ದಾರೆ. ಏಕೆಂದರೆ ತಾನು ಯಾವಾಗಲೂ ತನ್ನ ಲೈಂಗಿಕತೆಯ ಬಗ್ಗೆ ಅಹಿತಕರವಾಗಿರುತ್ತಿದ್ದೆ ಎಂದು ಹೇಳಿದ್ದಾರೆ. ಎಂಟರ್ಟೈನ್ಮೆಂಟ್ ನ್ಯೂಸ್ ವರ್ಲ್ಡ್‌ನಲ್ಲಿ ವೈರಲ್ ಆಗಿರುವ ಈ ವೀಡಿಯೊದಲ್ಲಿ ನಟಿ, 'ನಾನು ಯಾವಾಗಲೂ ಸಾಕಷ್ಟು ಒಳ್ಳೆಯವಳಲ್ಲ ಎಂದು ಭಾವಿಸುವ ಸ್ಥಳದಿಂದ ಬರುತ್ತೇನೆ. ನಾನು ನನ್ನನ್ನು ಒಳ್ಳೆಯವಳು ಎಂದು ಪರಿಗಣಿಸಲಿಲ್ಲ. ನಾನು ಇತರ ಹುಡುಗಿಯರಂತೆ ಕಾಣುವುದಿಲ್ಲ. ಹೀಗಾಗಿ ಅದು ನನ್ನ ಪಾಲಿಗೆ ದೊಡ್ಡ ಸವಾಲಾಗಿತ್ತು (ನಿಜ ಹೇಳಬೇಕೆಂದರೆ, ಊ ಅಂಟಾವಾ ಚಿತ್ರದ ಮೊದಲ ಶಾಟ್ ಸಮಯದಲ್ಲಿ, ನಾನು ಆಂತರಿಕವಾಗಿ ಭಯದಿಂದ ನಡುಗುತ್ತಿದ್ದೆ. ಏಕೆಂದರೆ ಮಾದಕವಾಗಿ ಕಾಣುವುದು ನನ್ನ ವಿಷಯವಲ್ಲ. ಆದರೆ ಇದಾದ ನಂತರ ನಾನು ನಟಿಯಾಗಿ ಹಾಗೂ ವ್ಯಕ್ತಿಯಾಗಿಯೂ ಬೆಳೆದೆ. ನಾನು ಯಾವಾಗಲೂ ಕಷ್ಟಕರ ಸಂದರ್ಭಗಳಲ್ಲಿ ನನ್ನನ್ನು ಇರಿಸಿಕೊಳ್ಳಲು ಪ್ರಯತ್ನಿಸಿದೆ ಎಂದಿದ್ದಾರೆ. ಈ ಸಂದರ್ಭದಲ್ಲಿ ಸಮಂತಾಗೆ ನೀವು ಮತ್ತೊಮ್ಮೆ ಅಂತಹ ಸವಾಲನ್ನು ಸ್ವೀಕರಿಸುತ್ತೀರಾ ಎಂದು ಪ್ರಶ್ನಿಸಲಾಗುತ್ತದೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ನಟಿ, ಈಗ ನನಗೆ ಅದರಲ್ಲಿ ಯಾವುದೇ ಸವಾಲು ಕಾಣಿಸುತ್ತಿಲ್ಲ ಎಂದು ಹೇಳುತ್ತಾರೆ. ಅಲ್ಲು ಅರ್ಜುನ್ ಅಭಿನಯದ 'ಪುಷ್ಪಾ' ಚಿತ್ರದಲ್ಲಿ ನಟಿಯ ಬ್ಲಾಕ್‌ಬಸ್ಟರ್ ಹಾಡು 'ಊ ಅಂಟಾವಾ' ಸಾಕಷ್ಟು ಬಜ್ ಅನ್ನು ಸೃಷ್ಟಿಸಿರುವುದು ನಮ್ಮೆಲ್ಲರಿಗೂ ತಿಳಿದೇ ಇದೆ. ಸಮಂತಾ ರುತ್ ಪ್ರಭು ಇತ್ತೀಚಿನ ದಿನಗಳಲ್ಲಿ ಹಲವು ಪ್ರಾಜೆಕ್ಟ್‌ಗಳಲ್ಲಿ ಬ್ಯುಸಿಯಾಗಿದ್ದಾರೆ. ಅವರು ಶೀಘ್ರದಲ್ಲೇ ನಟ ವರುಣ್ ಧವನ್ ಅವರ ಮುಂದಿನ ವೆಬ್ ಸರಣಿ ಸಿಟಾಡೆಲ್ ನಲ್ಲಿ ಕಾಣಿಸಿಕೊಳ್ಳಲಿದ್ದಾರೆ.

# ಬೇಸಿಗೆಯಲ್ಲಿ ಉತ್ತಮವಾಗಿ ನಿದ್ರೆ ಮಾಡಲು ಸಲಹೆಗಳು

### ಹೆಲ್ತ್ ಟಿಪ್ಸ್



ಹೆಚ್ಚಿನ ತಾಪಮಾನವು ನಿದ್ರಿಸಲು ಮತ್ತು ನಿದ್ರಿಸಲು ಕಷ್ಟವಾಗಬಹುದು. ನಿಮ್ಮ ಕೋಣೆಗೆ ಶಾಖವನ್ನು ಪ್ರವೇಶಿಸದಂತೆ ತಡೆಯಲು ಹಗಲಿನಲ್ಲಿ ನಿಮ್ಮ ಬ್ಲೈಂಡ್ಗಳನ್ನು ಮುಚ್ಚುವ ಮೂಲಕ ನಿಮ್ಮ ಮಲಗುವ ಕೋಣೆಯನ್ನು ತಂಪಾಗಿಡಿ. ಹೆಚ್ಚುವರಿಯಾಗಿ, ನಿಮ್ಮ ಮಲಗುವ ಕೋಣೆಯನ್ನು ತಂಪಾಗಿ ಮತ್ತು ಆರಾಮದಾಯಕವಾಗಿಸಲು ನೀವು ಏರ್ ಕಂಡಿಷನರ್, ಫ್ಯಾನ್ ಅಥವಾ ಪೋರ್ಟಬಲ್ ಏರ್ ಕೂಲರ್ ಅನ್ನು ಬಳಸುವುದನ್ನು ಪರಿಗಣಿಸಬಹುದು. ಹತ್ತಿ, ಲಿನಿನ್ ಅಥವಾ ಬಿದಿರಿನಂತಹ ಹಗುರವಾದ ಮತ್ತು ಗಾಳಿಯಾಡಬಲ್ಲ ಬಟ್ಟೆಗಳಿಂದ ತಯಾರಿಸಿದ ಪೈಜಾಮಗಳು ಮತ್ತು ಹಾಳೆಗಳು ನಿಮ್ಮನ್ನು ತಂಪಾಗಿರಿಸಲು ಮತ್ತು ರಾತ್ರಿಯಲ್ಲಿ ಬೆವರುವುದನ್ನು ತಡೆಯಲು ಸಹಾಯ ಮಾಡುತ್ತದೆ. ಬಿಗಿಯಾದ ಬಟ್ಟೆಗಳನ್ನು ಅಥವಾ ಶಾಖವನ್ನು ಹಿಡಿದಿಟ್ಟುಕೊಳ್ಳುವ ವಸ್ತುಗಳನ್ನು ಧರಿಸುವುದನ್ನು ತಪ್ಪಿಸಿ. ಬೇಸಿಗೆಯಲ್ಲಿ ಹೆಚ್ಚಿನ ಹಗಲು ಸಮಯವು ನಿಮ್ಮ ದೇಹದ ನೈಸರ್ಗಿಕ ನಿದ್ರೆಯ ಚಕ್ರವನ್ನು ಅಡ್ಡಿಪಡಿಸಬಹುದು. ನಿಯಮಿತ ನಿದ್ರೆಯ ಮಾದರಿಯನ್ನು ಕಾಪಾಡಿಕೊಳ್ಳಲು ಸಹಾಯ ಮಾಡಲು, ಮಲಗುವ ಮುನ್ನ ಸ್ಮಾರ್ಟ್‌ಫೋನ್ಗಳು, ಟ್ಯಾಬ್ಲೆಟ್ಗಳು ಮತ್ತು ಕಂಪ್ಯೂಟರ್ಗಳಂತಹ ಎಲೆಕ್ಟ್ರಾನಿಕ್ ಸಾಧನಗಳಿಂದ ನೀಲಿ ಬೆಳಕಿಗೆ ಒಡ್ಡಿಕೊಳ್ಳುವುದನ್ನು ಮಿತಿಗೊಳಿಸಿ. ಪರ್ಯಾಯವಾಗಿ, ನೀಲಿ ಬೆಳಕನ್ನು ತಡೆಯುವ ಕನ್ನಡಕವನ್ನು ಬಳಸುವುದನ್ನು ಪರಿಗಣಿಸಿ ಅಥವಾ ನಿಮ್ಮ ಎಲೆಕ್ಟ್ರಾನಿಕ್ ಸಾಧನಗಳಲ್ಲಿ ರಾತ್ರಿ ಮೋಡ್ ವೈಶಿಷ್ಟ್ಯವನ್ನು ಬಳಸುವುದನ್ನು ಪರಿಗಣಿಸಿ. ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಮತ್ತು ರಾತ್ರಿಯ ನಿದ್ರೆಯನ್ನು ಪಡೆಯಲು ಹೈಡ್ರೇಟೆಡ್ ಆಗಿರುವುದು ಅತ್ಯಗತ್ಯ. ದಿನವಿಡೀ ಸಾಕಷ್ಟು ನೀರು ಕುಡಿಯಿರಿ ಮತ್ತು ನಿದ್ರೆಗೆ ಅಡ್ಡಿಪಡಿಸುವ ಕೆಫೀನ್ ಅಥವಾ ಆಲ್ಕೋಹಾಲ್ ಕುಡಿಯುವುದನ್ನು ತಪ್ಪಿಸಲು ಪ್ರಯತ್ನಿಸಿ. ವಿಶ್ರಾಂತಿಯ ಬೆಡ್ಟೈಮ್ ದಿನಚರಿಯು ನಿಮ್ಮ ಮೆದುಳಿಗೆ ಇದು ಗಾಳಿಯಾಡಲು ಮತ್ತು ನಿದ್ರೆಗೆ ತಯಾರಾಗುವ ಸಮಯ ಎಂದು ಸೂಚಿಸಲು ಸಹಾಯ ಮಾಡುತ್ತದೆ. ಬೆಚ್ಚಗಿನ ಸ್ನಾನವನ್ನು ತೆಗೆದುಕೊಳ್ಳುವುದನ್ನು ಪರಿಗಣಿಸಿ, ಪುಸ್ತಕವನ್ನು ಓದುವುದು ಅಥವಾ ಮಲಗುವ ಮೊದಲು ಶಾಂತವಾದ ಸಂಗೀತವನ್ನು ಕೇಳುವುದು ನಿಮಗೆ ವಿಶ್ರಾಂತಿ ಪಡೆಯಲು ಮತ್ತು ರಾತ್ರಿಯ ನಿದ್ರೆಗಾಗಿ ತಯಾರಾಗಲು ಸಹಾಯ ಮಾಡುತ್ತದೆ.

# 'ಪಪ್ಪಾಯ' ಹೇರ್ ಮಾಸ್ಕ್

### ಬ್ಯೂಟಿ ಟಿಪ್ಸ್



ಪಪ್ಪಾಯಿ ಹಣ್ಣು ಆರೋಗ್ಯಕ್ಕೆ ತುಂಬಾ ಒಳ್ಳೆಯದು. ಇದನ್ನು ಚರ್ಮದ ಸೌಂದರ್ಯ ವೃದ್ಧಿಸಲು ಕೂಡ ಬಳಸುತ್ತಾರೆ. ಇದರಿಂದ ಹಲವು ಬಗೆಯ ಫೇಸ್ ಪ್ಯಾಕ್ ತಯಾರಿಸಿ ಮುಖಕ್ಕೆ ಹಚ್ಚುತ್ತಾರೆ. ಅದೇ ರೀತಿ ಇದರಿಂದ ಹೇರ್ ಮಾಸ್ಕ್ ತಯಾರಿಸಿ ಕೂದಲಿಗೆ ಹಚ್ಚುವುದರಿಂದ ಕೂದಲಿನ ಸೌಂದರ್ಯ ಕೂಡ ಕಾಪಾಡಬಹುದು. 1 ಕಪ್ ಮೊಸರು, ½ ಪಪ್ಪಾಯಿ, 1 ಚಮಚ ನಿಂಬೆ ರಸ ಇವಿಷ್ಟನ್ನು ಚೆನ್ನಾಗಿ ಮಿಶ್ರಣ ಮಾಡಿ ಕೂದಲಿಗೆ ಹಚ್ಚಿ 50 ನಿಮಿಷ ಬಿಟ್ಟು ಕೂದಲನ್ನು ಶಾಂಪೂವಿನಿಂದ ವಾಶ್ ಮಾಡಿ. ಇದನ್ನು ವಾರಕ್ಕೊಮ್ಮೆ ಮಾಡಿ. 1 ಹಣ್ಣಾದ ಪಪ್ಪಾಯಿಯ ತಿರುಳಿಗೆ 2 ಚಮಚ ತೆಂಗಿನೆಣ್ಣೆ, 1 ಚಮಚ ತೆಂಗಿನ ಹಾಲು, ನಿಂಬೆ ರಸ ಸೇರಿಸಿ ಪೇಸ್ಟ್ ತಯಾರಿಸಿ ನೆತ್ತಿಗೆ ಹಚ್ಚಿ 10 ನಿಮಿಷ ಮಸಾಜ್ ಮಾಡಿ 40 ನಿಮಿಷ ಬಿಟ್ಟು ಶಾಂಪೂವಿನಿಂದ ವಾಶ್ ಮಾಡಿ. ಇದನ್ನು ವಾರಕ್ಕೊಮ್ಮೆ ಮಾಡಿದರೆ ಉತ್ತಮ ಫಲಿತಾಂಶ ಸಿಗುತ್ತದೆ.

# ಸುಳ್ಳುಸುದ್ದಿ ಕಾರ್ಖಾನೆಗಳ ಕುರಿತ ಅವಲೋಕನ: ಬ್ರ್ಯಾಂಡ್‌ಗಳಿಗೆ ಆಗುವ ಹಾನಿಯ ಬಗ್ಗೆ ಚರ್ಚೆ




ಇಂದಿನ ಡಿಜಿಟಲ್ ಯುಗದಲ್ಲಿ ಸುಳ್ಳು ಸುದ್ದಿಗಳು(ಫೇಕ್ ನ್ಯೂಸ್) ಅತ್ಯಂತ ಅಪಾಯಕಾರಿಯಾಗಿ ಬೆಳೆದು ನಿಂತಿವೆ. ಅವುಗಳು ವ್ಯಕ್ತಿಗಳು, ಸಂಸ್ಥೆಗಳು ಮತ್ತು ಇಡೀ ಉದ್ಯಮಗಳನ್ನೇ ನಾಶ ಮಾಡುವ ಸಾಮರ್ಥ್ಯವನ್ನು ಹೊಂದಿದೆ. ಇಂಥಾ ಸಾಂಕ್ರಾಮಿಕ ರೋಗಕ್ಕೆ ಸಿಕ್ಕಿ ಒದ್ದಾಡಿದ ಹಲವು ಬ್ರ್ಯಾಂಡ್ ಗಳೂ ಇವೆ. ಬ್ರ್ಯಾಂಡ್ ಗಳು ಅನೇಕ ಬಾರಿ ತಮ್ಮ ಬಗೆಗಿನ ತಪ್ಪು ಮಾಹಿತಿಗಳ ಜಾಲಕ್ಕೆ ಸಿಲುಕುತ್ತವೆ, ಅದರಿಂದ ಅವರು ಗ್ರಾಹಕರ ನಂಬಿಕೆ ಕಳೆದುಕೊಂಡು ಒದ್ದಾಡುವ ಕಷ್ಟಕ್ಕೆ ಒಳಪಡುತ್ತಾರೆ.

ಸುಳ್ಳು ಸುದ್ದಿ ಕಾರ್ಖಾನೆಗಳು ಗುಟ್ಟಾಗಿ ಕಾರ್ಯನಿರ್ವಹಿಸುತ್ತವೆ. ಸಾಮಾಜಿಕ ಜಾಲತಾಣಗಳ ಶಕ್ತಿಯನ್ನು ಸಮರ್ಥವಾಗಿ ಬಳಸಿಕೊಂಡು ತಕ್ಷಣ ಒತ್ತಬೇಕು ಅನ್ನಿಸುವ ಹೆಡ್‌ಲೈನ್‌ಗಳನ್ನು ಕೊಟ್ಟು ಮತ್ತು ವೈರಲ್ ಕಂಟೆಂಟ್ ಗಳ ಮೂಲಕ ಸುಳ್ಳು ಮಾಹಿತಿಯನ್ನು ಪ್ರಸಾರ ಮಾಡುತ್ತಾರೆ. ಈ ಸುಳ್ಳು ಸುದ್ದಿ ಕಾರ್ಖಾನೆಗಳು ಆನ್‌ಲೈನ್ ಪ್ಲಾಟ್‌ಫಾರ್ಮ್‌ಗಳ ದುರ್ಬಲತೆಗಳನ್ನು ಬಳಸಿಕೊಂಡು ಕಾರ್ಯನಿರ್ವಹಿಸುತ್ತವೆ. ಅಲ್ಲಿ ಸತ್ಯಕ್ಕಿಂತ ವೈಭವೀಕರಣ ವಿಜೃಂಭಿಸುತ್ತದೆ ಮತ್ತು ತಪ್ಪು ಮಾಹಿತಿಯು ಕಾಳ್ಗಿಚ್ಚಿನಂತೆ ಹರಡುತ್ತದೆ.

ಸುಳ್ಳು ಸುದ್ದಿಗಳಿಂದಾದ ಅನಾಹುತದ ಬಗ್ಗೆ ಒಂದು ಇತ್ತೀಚಿನ ಉದಾಹರಣೆ ಹಾಂಗ್ ಕಾಂಗ್ ನಲ್ಲಿ ನಡೆದಿದೆ. ಹಾಂಗ್ ಕಾಂಗ್ ನ ಅಂತಾರಾಷ್ಟ್ರೀಯ ಕಂಪನಿಯೊಂದು ಡೀಪ್ ಫೇಕ್ ತಂತ್ರಜ್ಞಾನದಿಂದಾಗಿ 25.6 ಮಿಲಿಯನ್ ಕಳೆದುಕೊಳ್ಳಬೇಕಾಗಿ ಬಂತು. ಕಂಪನಿಯ ಉದ್ಯೋಗಿಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ವಂಚನೆ ಮಾಡಲಾಯಿತು. ಅತ್ಯಾಧುನಿಕ ತಂತ್ರಜ್ಞಾನದಿಂದಲೇ ಮೋಸವು ಜರುಗಿತು.

ಸುಳ್ಳಿ ಸುದ್ದಿಗಳ ಹರಡುವಿಕೆಯ ಜಾಲಕ್ಕೆ ಇತರ ವಲಯಗಳೂ ಬಲಿಯಾಗಿವೆ. ಅದಕ್ಕೆ ಒಂದು ಉದಾಹರಣೆ ತಂಪು ಪಾನೀಯಗಳು ರಾತ್ರಿಯಲ್ಲಿ ಹಲ್ಲನ್ನು ಕರಗಿಸಬಲ್ಲವು ಎಂಬ ಸುಳ್ಳು. ಅದು ಸುಳ್ಳೆಂಬುದು ತಿಳಿದಿದ್ದರೂ ಆ ಸುದ್ದಿ ಹರಡುತ್ತಲೇ ಇರುತ್ತದೆ. ಇದು ತಪ್ಪು ಮಾಹಿತಿಯ ಶಕ್ತಿ ಸಾಮರ್ಥ್ಯವನ್ನು ಎತ್ತಿ ತೋರಿಸುತ್ತದೆ.

''ಸಮುದಾಯದಲ್ಲಿನ ಧ್ವನಿಯಾಗಿ ನಾವು ಪಾಯ್ ಆಯಿಲ್ ಕುರಿತಾಗಿ ಹರಡುವ ತಪ್ಪು ಮಾಹಿತಿಗಳಿಂದ ಉಂಟಾಗುವ ಸವಾಲುಗಳನ್ನು ಎದುರಿಸಬೇಕಾಗಿದೆ. ಈ ವಿಚಾರದಲ್ಲಿ ಸುಳ್ಳು ಮಾಹಿತಿಯ ಪ್ರಸಾರವು ಗ್ರಾಹಕರನ್ನು ದಾರಿ ತಪ್ಪಿಸುವುದಲ್ಲದೆ ಪಾಮ್ ಆಯಿಲ್ ಉದ್ಯಮಕ್ಕೆ ಧಕ್ಕೆ ಉಂಟು ಮಾಡುತ್ತದೆ. ಹಾಗಾಗಿ ಸುಳ್ಳು ಸುದ್ದಿಗಳ ಜಾಲವನ್ನು ಕಿತ್ತು ಹಾಕುವುದು ಬಹಳ ಮುಖ್ಯವಾಗಿದೆ. ನಿಖರವಾದ, ವೈಜ್ಞಾನಿಕವಾಗಿ ಸಾಬೀತು ಹೊಂದಿರುವ ಮಾಹಿತಿ ಮಾತ್ರ ಇರಬೇಕು ಎಂಬುದು ನಮ್ಮ ಉದ್ದೇಶ, ಅದರಿಂದ ಗ್ರಾಹಕರು ವಿವೇಕಯುಕ್ತ ನಿರ್ಧಾರಗಳನ್ನು ತೆಗೆದುಕೊಳ್ಳುವುದು ಸಾಧ್ಯವಾಗಲಿದೆ. ಮಿಥ್ಯೆಗಳನ್ನು ಇಲ್ಲವಾಗಿಸುವ ಮೂಲಕ ಮತ್ತು ಮುಕ್ತ ಸಂವಹನವನ್ನು ನಡೆಸುವ ಮೂಲಕ, ನಾವು ಪಾಮ್ ಆಯಿಲ್ ನ ಕೊಡುಗೆಗಳು, ಅನುಕೂಲಗಳು ಮತ್ತು ಸುಸ್ಥಿರ ಅಭ್ಯಾಸಗಳ ಕುರಿತು ಸೂಕ್ಷ್ಮವಾದ ಗ್ರಹಿಕೆಯನ್ನು ಬೆಳೆಸಿಕೊಳ್ಳಬಹುದು. ಆ ಮೂಲಕ ಭಾರತದ ವಿವಿಧ ಕೈಗಾರಿಕೆಗಳನ್ನು ಶ್ರೀಮಂತಗೊಳಿಸಬಹುದು ಎಂದು ಎಸ್. ಎನ್. ಡಿ.ಟಿ ಮಹಿಳಾ ವಿಶ್ವವಿದ್ಯಾಲಯದ ಗೃಹ ವಿಜ್ಞಾನ ಆಹಾರ ವಿಜ್ಞಾನ ಮತ್ತು ಪೌಷ್ಟಿಕಾಂಶ ವಿಭಾಗದ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನೆ ವಿಭಾಗದಲ್ಲಿ ಪ್ರಸ್ತುತ ಸಂದರ್ಶಕ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿರುವ ಸಹ ಪ್ರಾಧ್ಯಾಪಕಿ ಡಾ.ಮೀನಾ ಮೆಹ್ತಾ ಹೇಳಿದ್ದಾರೆ.

ಪಾಮ್ ಆಯಿಲ್ ಉದ್ಯಮದಲ್ಲಿನ ಬ್ರ್ಯಾಂಡ್ ಗಳ ಮೇಲೆ ಅರಣ್ಯನಾಶ ಮತ್ತು ಕಾರ್ಮಿಕರ ಶೋಷಣೆಯ ಕುರಿತ ಸುಳ್ಳು ಆರೋಪಗಳು ಹರಡಿದರೆ ಅದರಿಂದ ಗ್ರಾಹಕರು ಬಹಿಷ್ಕಾರ ಹಾಕಬಹುದಾಗಿದೆ ಮತ್ತು ಆ ಕಾರಣದಿಂದ ಆರ್ಥಿಕ ನಷ್ಟ ಉಂಟಾಗಬಹುದು. ಆದಾಗ್ಯೂ, ಕಾಲ್ಪನಿಕ ಕಥೆಗಳಿಂದ ಸತ್ಯವನ್ನು ಪ್ರತ್ಯೇಕಿಸುವುದು ಬಹಳ ಮುಖ್ಯವಾಗಿದೆ. ಜೊತೆಗೆ ಸುಸ್ಥಿರವಾಗಿ ಉತ್ಪಾದಿಸಲಾದ ಪಾಮ್ ಆಯಿಲ್ ನ ಸಕಾರಾತ್ಮಕ ಕೊಡುಗೆಗಳನ್ನು ಗುರುತಿಸುವುದು ಕೂಡ ಅತ್ಯಗತ್ಯವಾಗಿದೆ.

ಸುಸ್ಥಿರವಾಗಿ ತಯಾರಿಸಿದ ಪಾಮ್ ಆಯಿಲ್ ಪರಿಸರ ಸ್ನೇಹಿ ಮಾತ್ರವಲ್ಲ ಆರ್ಥಿಕವಾಗಿಯೂ ಪ್ರಯೋಜನಕಾರಿಯಾಗಿದೆ. ಇತರ ತೈಲ ಮೂಲಗಳಿಗೆ ಹೋಲಿಸಿದರೆ ಪಾಮ್ ಆಯಿಲ್ ತಯಾರಿಕೆಗೆ ಕಡಿಮೆ ಭೂಮಿ ಮತ್ತು ಸಂಪನ್ಮೂಲಗಳು ಇದ್ದರೆ ಸಾಕು. ಆಹಾರದಿಂದ ಹಿಡಿದು ಸೌಂದರ್ಯವರ್ಧಕಗಳು ಮತ್ತು ಜೈವಿಕ ಇಂಧನಗಳವರೆಗೆ ವಿವಿಧ ಕೈಗಾರಿಕೆಗಳಲ್ಲಿ ಈ ಆಯಿಲ್ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಅಲ್ಲದೇ ಅನೇಕ ಕಡೆಗಳಲ್ಲಿ ಆರ್ಥಿಕ ಅಭಿವೃದ್ಧಿ ಉಂಟುಮಾಡುತ್ತದೆ.

ಪ್ರಮಾಣೀಕರಣ ಯೋಜನೆಗಳು ಮತ್ತು ಉದ್ಯಮದ ಉಪಕ್ರಮಗಳ ಮೂಲಕ ಸುಸ್ಥಿರ ಪಾಮ್ ಆಯಿಲ್ ಉತ್ಪಾದನೆಯನ್ನು ಉತ್ತೇಜಿಸುವ ಪ್ರಯತ್ನಗಳು ನಡೆಯುತ್ತಿವೆ. ಜೊತೆಗೆ ಜವಾಬ್ದಾರಿಯುತ ಅಭ್ಯಾಸಗಳು ಮತ್ತು ಪರಿಸರಕ್ಕೆ ಒಳಿತು ಮಾಡು ನಿಟ್ಟಿನಲ್ಲಿ ಉದ್ಯಮ ಬದ್ಧತೆಯನ್ನು ಪ್ರದರ್ಶಿಸಿವೆ.

ಇತ್ತೀಚೆಗೆ ವಾಟ್ಸಪ್ ನಲ್ಲಿ ಪಾಮ್ ಆಯಿಲ್ ಕುರಿತ ಸುಳ್ಳು ಹೇಳಿಕೆಯು ಹರಡಿತ್ತು. ಅದರಿಂದ ಅನಗತ್ಯ ಆರೋಗ್ಯ ಭಯ ಉಂಟಾಗುವ ಸಾಧ್ಯತೆ ಇತ್ತು. ಅದರಲ್ಲಿ ಅಹಮದಾಬಾದ್ ನ ಖ್ಯಾತ ಹೃದಯರೋಗ ತಜ್ಞರು ಹೇಳಿದ್ದಾರೆ ಎನ್ನಲಾದ ಮಾಹಿತಿ ಇತ್ತು. ಆದರೆ ಅವರು ಅದನ್ನು ಖಂಡಿಸಿದ್ದಾರೆ. ಆ ಮಾಹಿತಿ ಕುರಿತಾಗಿ ತನಗೆ ಏನೂ ಗೊತ್ತಿಲ್ಲ ಎಂದು ಹೇಳಿದ್ದಾರೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ವ್ಯಾಪಾರ ವ್ಯವಹಾರದಲ್ಲಿ ಹಿನ್ನಡೆ, ತಂದೆಯ ಆರೋಗ್ಯದಲ್ಲಿ ವ್ಯತ್ಯಾಸ, ದೈವ ಕಾರ್ಯಗಳಿಗೆ ಖರ್ಚು, ವಾಹನಗಳಿಗೆ ಖರ್ಚು.

**ವೃಷಭ:** ಮಿತ್ರರಿಂದ ಸಹಾಯದ ನಿರೀಕ್ಷೆ, ದೂರ ಪ್ರಯಾಣ, ಆರ್ಥಿಕವಾಗಿ ತಪ್ಪು ನಿರ್ಧಾರ, ಆಕಸ್ಮಿಕ ಲಾಭ.

**ಮಿಥುನ:** ಉದ್ಯೋಗದಲ್ಲಿ ಒತ್ತಡ, ಕೋರ್ಟ್ ಕೇಸ್‌ಗಳ ಚಿಂತೆ, ಆರ್ಥಿಕವಾಗಿ ಹಿನ್ನಡೆ, ಮಾನಸಿಕ ಸಂಕಟ.

**ಕಟಕ:** ಆರ್ಥಿಕವಾಗಿ ಅನುಕೂಲ, ಸಂಗಾತಿಯಿಂದ ಯೋಗ ಫಲಗಳು, ಕುಟುಂಬದಲ್ಲಿ ಕಿರಿಕಿರಿ, ಪಾಲುದಾರಿಕೆಯಲ್ಲಿ ಅನುಕೂಲ.

**ಸಿಂಹ:** ಆರ್ಥಿಕವಾಗಿ ಹಿನ್ನಡೆ, ಶತ್ರು ಕಾಟ, ಉದ್ಯೋಗದಲ್ಲಿ ಅನುಕೂಲ, ಕೋರ್ಟ್ ಕೇಸ್‌ಗಳಿಂದ ಅನುಕೂಲ.

**ಕನ್ಯಾ:** ಶುಭ ಕಾರ್ಯಗಳಲ್ಲಿ ಜಯ, ಪ್ರೀತಿ ಪ್ರೇಮದಲ್ಲಿ ಯಶಸ್ಸು, ಕೆಲಸ ಕಾರ್ಯಗಳಲ್ಲಿ ಅನುಕೂಲ, ಸ್ನೇಹಿತರಿಂದ ಸಹಕಾರ.

**ತುಲಾ:** ಸಾಲ ಭಾದೆ, ತೊಳಲಾಟ, ಸೋಮಾರಿತನ, ಆರ್ಥಿಕವಾಗಿ ಹಿನ್ನಡೆ, ಆರೋಗ್ಯದಲ್ಲಿ ಏರುಪೇರು, ಕೌಟುಂಬಿಕ ಕಲಹ.

**ವೃಶ್ಚಿಕ:** ಮಕ್ಕಳ ಭವಿಷ್ಯದ ಚಿಂತೆ, ಆರ್ಥಿಕವಾಗಿ ಅನಾನುಕೂಲ, ಕೌಟುಂಬಿಕ ಸಮಸ್ಯೆ, ಭಾವನಾತ್ಮಕ ವಿಷಯಗಳಿಂದ ನೋವು.

**ಧನಸ್ಸು:** ಸ್ವಯಂಕೃತ ಅಪರಾಧದಿಂದ ಸಮಸ್ಯೆ, ಸೋಮಾರಿತನ, ನಿದ್ರಾಭಂಗ, ಆರೋಗ್ಯದಲ್ಲಿ ಸಣ್ಣಪುಟ್ಟ ವ್ಯತ್ಯಾಸ.

**ಮಕರ:** ವಾಹನಗಳಿಗೆ ಅಧಿಕ ಖರ್ಚು, ಕೆಲಸ ಕಾರ್ಯಗಳಲ್ಲಿ ಹಿನ್ನಡೆ, ಆರ್ಥಿಕವಾಗಿ ಸಂಕಷ್ಟ, ಸಂಗಾತಿಯಿಂದ ಅನುಕೂಲ.

**ಕುಂಭ:** ಆರ್ಥಿಕವಾಗಿ ತಪ್ಪು ನಿರ್ಧಾರ, ವ್ಯಾಪಾರ ವ್ಯವಹಾರದಲ್ಲಿ ನಷ್ಟ, ಉದ್ಯೋಗದಲ್ಲಿ ಕಿರಿಕಿರಿ, ಕುಟುಂಬದಿಂದ ವಿರೋಧ.

**ಮೀನ:** ವ್ಯಾಪಾರ ವ್ಯವಹಾರದಲ್ಲಿ ಲಾಭ, ಮಕ್ಕಳ ಜೀವನದಲ್ಲಿ ಬದಲಾವಣೆ, ಸೋಮಾರಿತನ ಮತ್ತು ಆಲಸ್ಯ, ಯೋಗ ಫಲಗಳು ಮತ್ತು ಅದೃಷ್ಟ.

# ಗುಡ್ ಫ್ರೈಡೇ




ಗುಡ್ ಫ್ರೈಡೇ ಕ್ರಿಶ್ಚಿಯನ್ ಸಮುದಾಯದವರ ಬಹಳ ಮಹತ್ವದ ದಿನ. ಪ್ರಪಂಚದಾದ್ಯಂತ ಕ್ರಿಶ್ಚಿಯನ್ನರು ಗುಡ್ ಫ್ರೈಡೇಯನ್ನು ಆಚರಿಸುತ್ತಾರೆ. ಚರ್ಚ್ಗೆ ಭೇಟಿ ನೀಡುವ ಮೂಲಕ ಶುಭ ಶುಕ್ರವಾರದ ಆಚರಣೆಯಲ್ಲಿ ತೊಡಗುವುದು ವಿಶೇಷ. ಪ್ರತಿವರ್ಷ ಈಸ್ಟರ್‌ಗೂ ಮೊದಲ ಶುಕ್ರವಾರವನ್ನು ಗುಡ್ಫ್ರೈಡೇ ಎಂದು ಆಚರಿಸಲಾಗುತ್ತದೆ. ಶುಭ ಶುಕ್ರವಾರ ಹೆಸರಿನಲ್ಲಿ ಸಾಂಕೇತಿಕವಾಗಿ ಶುಭವನ್ನು ಸೂಚಿಸಿದರೂ ಕೂಡ ಕ್ರಿಶ್ಚಿಯನ್ ಸಮುದಾಯಕ್ಕೆ ಇದು ದುಃಖದ ದಿನವಾಗಿದೆ. ಈ ದಿನದಂದು ಕೆಲವರು ಉಪವಾಸ ಮಾಡುತ್ತಾರೆ, ಇನ್ನೂ ಕೆಲವರು ಶೋಕ ಹಾಗೂ ದುಃಖದ ದಿನವನ್ನಾಗಿ ಆಚರಿಸುತ್ತಾರೆ.

ಈ ದಿನದಂದು ಏಸುಕ್ರಿಸ್ತನನ್ನು ಶಿಲುಬೆಗೇರಿಸಿದ ದಿನ. ಆ ಕಾರಣಕ್ಕೆ ಇದು ಶುಭಸೂಚಕವಲ್ಲ ಮತ್ತು ದುಃಖದ ದಿನವಾಗಿದೆ ಎಂಬುದು ನಂಬಿಕೆ. ಶೋಕಾಚರಣೆಯ ಈ ದಿನವನ್ನು ಗ್ರೇಟ್ ಫ್ರೈಡೇ, ಬ್ಲ್ಯಾಕ್ ಫ್ರೈಡೇ ಎಂದೂ ಕರೆಯುತ್ತಾರೆ. ಈ ದಿನದಂದು ಏಸುಕ್ರಿಸ್ತನು ತನ್ನ ಮರಣದ ನಂತರ ಪುನಃ ಮರುಜೀವ ಪಡೆದ ದಿನ ಎಂದು ನಂಬಲಾಗಿದೆ. ಹಾಗಾಗಿ ಇದನ್ನು ಶುಭ ಶುಕ್ರವಾರ ಎಂದೂ ಹೇಳಲಾಗುತ್ತದೆ.

ಗುಡ್ಫ್ರೈಡೇ ಏಸುವು ತನ್ನನ್ನು ನಂಬಿದವರ ಪಾಪ ವಿಮೋಚನೆಗೊಳಿಸಲು ತನ್ನ ಜೀವನವನ್ನು ತ್ಯಾಗ ಮಾಡಿದ ಪವಿತ್ರ ದಿನವೂ ಹೌದು. ದೇವರು ಅಂದರೆ ಏಸುಕ್ರಿಸ್ತ ಜಗತ್ತನ್ನು ಅತಿಯಾಗಿ ಪ್ರೀತಿಸುತ್ತಾನೆ ಎಂದು ನಂಬಲಾಗಿದೆ. ಅವನು ತನ್ನನ್ನು ನಂಬಿದ ಜನರ ಪಾಪ ವಿಮೋಚನೆಗಾಗಿ ಪ್ರಾಣವನ್ನು ತ್ಯಾಗ ಮಾಡಿದನು. ಆ ಕಾರಣಕ್ಕೆ ಈ ದಿನವನ್ನು ಶೋಕ ಮತ್ತು ದುಃಖದ ದಿನವನ್ನಾಗಿ ಆಚರಿಸಲಾಗುತ್ತದೆ. ಕ್ರೈಸ್ತ ಧರ್ಮದ ಜನರು ಗುಡ್ ಫ್ರೈಡೆದಂದು ಲಾರ್ಡ್ ಜೀಸಸ್ನ ತ್ಯಾಗವನ್ನು ನೆನಪಿಸಿಕೊಳ್ಳುತ್ತಾರೆ. ಈ ದಿನದಂದು ಜನರು ಕಪ್ಪು ಬಟ್ಟೆಗಳನ್ನು ಧರಿಸಿ ಕರ್ತನಾದ ಯೇಸುವಿನ ತ್ಯಾಗಕ್ಕಾಗಿ ಶೋಕಿಸುತ್ತಾರೆ. ಅಲ್ಲದೆ ಚರ್ಚ್ ಗಳಿಗೆ ತೆರಳಿ ವಿಶೇಷ ಪ್ರಾರ್ಥನೆ ಸಲ್ಲಿಸುತ್ತಾರೆ. ಈ ದಿನ ಚರ್ಚುಗಳಲ್ಲಿ ಗಂಟೆಗಳನ್ನು ಬಾರಿಸುವುದಿಲ್ಲ. ಅಲ್ಲದೆ ಜನರು ಚರ್ಚ್‌ನಲ್ಲಿ ಶಿಲುಬೆಗೆ ಮುತ್ತಿಡುವ ಮೂಲಕ ಪ್ರಭು ಯೇಸುವನ್ನು ಸ್ಮರಿಸುತ್ತಾರೆ. ಈ ದಿನದಂದು ಜನರು ಲಾರ್ಡ್ ಜೀಸಸ್ನ ಬೋಧನೆಗಳನ್ನು ನೆನಪಿಸಿಕೊಳ್ಳುತ್ತಾರೆ ಮತ್ತು ತಮ್ಮ ಜೀವನದಲ್ಲಿ ಅವುಗಳನ್ನು ರೂಪಿಸಲು ಪ್ರಯತ್ನಿಸುತ್ತಾರೆ. ಲಾರ್ಡ್ ಜೀಸಸ್ ಹೇಳಿದ ಪ್ರೀತಿ, ಸತ್ಯ ಮತ್ತು ನಂಬಿಕೆಯ ಮಾರ್ಗವನ್ನು ಅನುಸರಿಸಲು ಜನರು ಜೀವನದುದ್ದಕ್ಕೂ ಪ್ರಮಾಣ ಮಾಡುತ್ತಾರೆ. ಗುಡ್ ಫ್ರೈಡೆಯಂದು ದಾನ ಕಾರ್ಯಗಳು ಗುಡ್ ಫ್ರೈಡೆಯಂದು, ಕರ್ತನಾದ ಯೇಸುವನ್ನು ಸ್ಮರಿಸುತ್ತಾ ದಾನ ಕಾರ್ಯಗಳನ್ನು ಮಾಡಲಾಗುತ್ತದೆ. ಉಪವಾಸದ ನಂತರ ಸಿಹಿ ತಿನಿಸು ಮಾಡಿ ಜನರಿಗೆ ಹಂಚಲಾಗುತ್ತದೆ.

ಸಂಜೆ ಮುಗಿಲು
ಶುಕ್ರವಾರ
29.3.2024


# ಕಾಂಗ್ರೆಸ್ ತೊರೆದ ಮಹಿಳೆ ಸಾವಿತ್ರಿ ಜಿಂದಾಲ್, ಬಿಜೆಪಿಗೆ ಸೇರ್ಪಡೆ



**ನವದೆಹಲಿ:** ಭಾರತದ ಅತ್ಯಂತ ಶ್ರೀಮಂತ ಮಹಿಳೆ ಸಾವಿತ್ರಿ ಜಿಂದಾಲ್ ಗುರುವಾರ ಕಾಂಗ್ರೆಸ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ ಒಂದು ದಿನದ ನಂತರ ಭಾರತೀಯ ಜನತಾ ಪಕ್ಷ (ಬಿಜೆಪಿ) ಸೇರಿದರು.

ಅವರ ಮಗಳು ಸೀಮಾ ಜಿಂದಾಲ್ ಕೂಡ ಪಕ್ಷಕ್ಕೆ ಸೇರಿದರು. ಹರಿಯಾಣದ ಮಾಜಿ ಸಚಿವೆ ಬುಧವಾರ ತಡರಾತ್ರಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕಾಂಗ್ರೆಸ್ ತೊರೆಯುವ ನಿರ್ಧಾರವನ್ನು ಘೋಷಿಸಿದರು.

ನಾನು ಶಾಸಕನಾಗಿ 10 ವರ್ಷಗಳ ಕಾಲ ಹಿಸಾರ್ ಜನರನ್ನು ಪ್ರತಿನಿಧಿಸಿದ್ದೇನೆ ಮತ್ತು ಸಚಿವನಾಗಿ ಹರಿಯಾಣ ರಾಜ್ಯಕ್ಕೆ ನಿಸ್ವಾರ್ಥವಾಗಿ ಸೇವೆ ಸಲ್ಲಿಸಿದ್ದೇನೆ ಎಂದು 84 ವರ್ಷದ ಮಮತಾ ಬ್ಯಾನರ್ಜಿ ತಮ್ಮ ಪೋಸ್ಟ್‌ನಲ್ಲಿ ಬರೆದಿದ್ದಾರೆ.

ಹಿಸಾರ್ ಜನರು ನನ್ನ ಕುಟುಂಬ ಮತ್ತು ನನ್ನ ಕುಟುಂಬದ ಸಲಹೆಯ ಮೇರೆಗೆ ನಾನು ಇಂದು ಕಾಂಗ್ರೆಸ್ ನ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುತ್ತಿದ್ದೇನೆ ಎಂದು ಅವರು ತಮ್ಮ ಪೋಸ್ಟ್‌ನಲ್ಲಿ ಬರೆದಿದ್ದಾರೆ.

ಅವರ ಪುತ್ರ, ಮಾಜಿ ಸಂಸದ ನವೀನ್ ಜಿಂದಾಲ್ ಕೂಡ ಕಾಂಗ್ರೆಸ್ ತೊರೆದು ಭಾರತೀಯ ಜನತಾ ಪಕ್ಷಕ್ಕೆ ಸೇರಿದ ಕೆಲವು ದಿನಗಳ ನಂತರ ಅವರ ನಿರ್ಧಾರ ಬಂದಿದೆ.

ನವೀನ್ ಜಿಂದಾಲ್ ಸೇರ್ಪಡೆಯಾದ ಕೆಲವೇ ಗಂಟೆಗಳ ನಂತರ, ಅವರು 2024 ರ ಲೋಕಸಭಾ ಚುನಾವಣೆಯಲ್ಲಿ ಕುರುಕ್ಷೇತ್ರದಿಂದ ಸ್ಪರ್ಧಿಸುವುದಾಗಿ ಬಿಜೆಪಿ ಘೋಷಿಸಿತು.

# ಹೆಣ್ಣುಮಗುವಿಗೆ ಜನ್ಮ ನೀಡಿದ ಭಗವಂತ್ ಮಾನ್ ಪತ್ನಿ



**ನವದೆಹಲಿ:** ಪಂಜಾಬ್ ಮುಖ್ಯಮಂತ್ರಿ ಮತ್ತು ಆಮ್ ಆದ್ಮಿ ಪಕ್ಷದ ಮುಖಂಡ ಭಗವಂತ್ ಸಿಂಗ್ ಮಾನ್ ಮತ್ತು ಅವರ ಪತ್ನಿ ಡಾ.ಗುಪ್ರೀತ್ ಕೌರ್ ಗುರುವಾರ ಹೆಣ್ಣು ಮಗುವಿಗೆ ಜನ್ಮ ನೀಡಿದ್ದಾರೆ.

ತಾಯಿ ಮತ್ತು ಮಗು ಇಬ್ಬರೂ ಆರೋಗ್ಯವಾಗಿದ್ದು, ಮೊಹಾಲಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ದೇವರು ಉಡುಗೊರೆಯಾಗಿ ಮಗಳನ್ನು ಕೊಟ್ಟಿದ್ದಾನೆ.. ತಾಯಿ ಮತ್ತು ಮಗು ಇಬ್ಬರೂ ಆರೋಗ್ಯವಾಗಿದ್ದಾರೆ ಎಂದು ಮನ್ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ. ಕೌರ್ ಅವರನ್ನು ಬುಧವಾರ ಫೋರ್ಟಿಸ್ ಆಸ್ಪತ್ರೆಗೆ ದಾಖಲಿಸಲಾಯಿತು ಮತ್ತು ಪಂಜಾಬ್ ಮುಖ್ಯಮಂತ್ರಿ ಗುರುವಾರ ಬೆಳಿಗ್ಗೆ ಅಲ್ಲಿಗೆ ಆಗಮಿಸಿದರು.

ಮಾರ್ಚ್ 2022 ರಲ್ಲಿ ಪಂಜಾಬ್ ಮುಖ್ಯಮಂತ್ರಿಯಾಗಿ ಮನ್ ಪ್ರಮಾಣವಚನ ಸ್ವೀಕರಿಸಿದ ನಾಲ್ಕು ತಿಂಗಳ ನಂತರ, ಜುಲೈ 2022 ರಲ್ಲಿ ಚಂಡೀಗಢದಲ್ಲಿ ಈ ಜೋಡಿ ವಿವಾಹವಾದರು.ಎಎಪಿ ನಾಯಕ 2015 ರಲ್ಲಿ ತಮ್ಮ ಮೊದಲ ಪತ್ನಿ ಇಂದರ್‌ಪ್ರೀತ್ ಕೌರ್ಗೆ ವಿಚ್ಛೇದನ ನೀಡಿದರು ಮತ್ತು ಅವರಿಗೆ ಇಬ್ಬರು ಮಕ್ಕಳಿದ್ದಾರೆ – ಮಗಳು ಸೀರತ್ ಕೌರ್ ಮಾನ್ (23) ಮತ್ತು ಮಗ ದಿಲ್ಶಾನ್ ಸಿಂಗ್ ಮಾನ್ (19). ಹರಿಯಾಣದ ಕುರುಕ್ಷೇತ್ರ ಮೂಲದ ಗುಪ್ರೀತ್ ಕೌರ್ 2018 ರಲ್ಲಿ ಹರಿಯಾಣದ ಮುಲ್ಲಾನಾದ ಮಹರ್ಷಿ ಮಾರ್ಕಂಡೇಶ್ವರ ವಿಶ್ವವಿದ್ಯಾಲಯದಿಂದ ಎಂಬಿಬಿಎಸ್ ಪದವಿ ಪಡೆದಿದ್ದಾರೆ.

## ಬಿಜೆಪಿಗೆ ಸೇರಿದ ಭರ್ತೃಹರಿ ಮಹತಾಬ್

**ದೆಹಲಿ:** ಕಟಕ್‌ನ ಆರು ಬಾರಿ ಸಂಸದರಾಗಿರುವ ಭರ್ತೃಹರಿ ಮಹತಾಬ್ ಅವರು ಆಡಳಿತಾರೂಢ ಬಿಜು ಜನತಾ ದಳ ತೊರೆದು ಪ್ರಮುಖ ರಾಜ್ಯ ನಾಯಕರ ಸಮ್ಮುಖದಲ್ಲಿ ಬಿಜೆಪಿ ಸೇರಿದ್ದಾರೆ. 2019 ರ ಸಾರ್ವತ್ರಿಕ ಚುನಾವಣೆಯಲ್ಲಿ, ಮಹತಾಬ್ ಅವರು ಕಟಕ್ ಲೋಕಸಭಾ ಸ್ಥಾನ ಗೆದ್ದಿದ್ದು, ಅವರ ಸಮೀಪ ಪ್ರತಿಸ್ಪರ್ಧಿ ಬಿಜೆಪಿಯ ಪ್ರಕಾಶ್ ಮಿಶ್ರಾ ಅವರನ್ನು ಭಾರಿ ಮತಗಳ ಅಂತರದಿಂದ ಸೋಲಿಸಿದರು. ಮಹತಾಬ್ ಅವರು 1998 ರಲ್ಲಿ ಕಟಕ್ನಿಂದ ಲೋಕಸಭೆಗೆ ಮೊದಲ ಬಾರಿಗೆ ಆಯ್ಕೆಯಾಗಿದ್ದು ನಂತರ 1999, 2004, 2009, ಮತ್ತು 2014 ರಲ್ಲಿ ಲೋಕಸಭೆಗೆ ಮರು ಆಯ್ಕೆಯಾದರು. 67 ವರ್ಷದ ಭರ್ತೃಹರಿ ಮಹತಾಬ್ ಲೋಕಸಭೆ ಚುನಾವಣೆಗೆ ಕಣಕ್ಕಿಳಿಯುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಸಂಸತ್ತಿನಲ್ಲಿ ಚರ್ಚೆಗಳಲ್ಲಿ ಅತ್ಯುತ್ತಮ ಪ್ರದರ್ಶನಕ್ಕಾಗಿ 2017 ರಿಂದ 2020 ರವರೆಗೆ ಸತತ ನಾಲ್ಕು ವರ್ಷಗಳ ಕಾಲ ಅವರಿಗೆ ಸಂಸದ್ ರತ್ನ ಪ್ರಶಸ್ತಿಯನ್ನು ನೀಡಲಾಯಿತು.





## ಫೆಲೆಸ್ತೀನಿಯರಿಗೆ ಅವರ ತಾಯ್ನಾಡನ್ನು ನಿರಾಕರಿಸಲಾಗಿದೆ: ಜೈಶಂಕರ್



**ಕೌಲಾಲಂಪುರ:** ಇಸ್ರೇಲ್ –ಫೆಲೆಸ್ತೀನ್ ಬಿಕ್ಕಟ್ಟಿನ ಕುರಿತು ಗುರುವಾರ ತೀಕ್ಷ್ಣ ಹೇಳಿಕೆಯನ್ನು ನೀಡಿರುವ ವಿದೇಶಾಂಗ ವ್ಯವಹಾರಗಳ ಸಚಿವ ಎಸ್.ಜೈಶಂಕರ್ ಅವರು ಈ ಸಂಘರ್ಷದಲ್ಲಿ ಸರಿ, ತಪ್ಪುಗಳೇನೇ ಇರಲಿ ಫೆಲೆಸ್ತೀನಿಯರಿಗೆ ಅವರ ಹಕ್ಕುಗಳನ್ನು ಹಾಗೂ ತಾಯ್ನಾಡನ್ನು ನಿರಾಕರಿಸಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕಳೆದ ವರ್ಷದ ಆಕ್ಟೋಬರ್ 7ರಂದು ಇಸ್ರೇಲ್ ನೆಲದ ಮೇಲೆ ಹಮಾಸ್ ನಡೆಸಿದ ದಾಳಿಯು 'ಯೋತ್ಪಾದಕ ಕೃತ್ಯಕ್ಕೆ ಪ್ರತೀಕಾರವಾಗಿ ಇಸ್ರೇಲ್ ಗಾಝಾದ ಮೇಲೆ ಎಸಗಿದ ಪ್ರತಿದಾಳಿಯನ್ನು ಪ್ರಸ್ತಾವಿಸಿದ ಅವರು, ಪ್ರತಿಯೊಂದು ಪ್ರತಿಕ್ರಿಯೆಗೂ ಅಂತಾರಾಷ್ಟ್ರೀಯ ಮಾನವೀಯ ಕಾನೂನನ್ನು ಪರಿಗಣನೆಗೆ ತೆಗೆದುಕೊಳ್ಳಬೇಕೆಂದು ಪ್ರತಿಪಾದಿಸಿದರು. ಮಲೇಶ್ಯ ಪ್ರವಾಸದಲ್ಲಿರುವ ಜೈಶಂಕರ್ ಅವರು ಬುಧವಾರ ಕೌಲಾಲಂಪುರದಲ್ಲಿ ನಡೆ ಅನಿವಾಸಿ 'ಭಾರತೀಯ ಸಮುದಾಯದ ಜೊತೆಗಿನ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಒಂದೆಡೆ ಆಕ್ಟೋಬರ್ 7ರಂದು ಇಸ್ರೇಲ್ ನೆಲದಲ್ಲಿ ನಡೆದ ಘಟನೆಯು ಭಯೋತ್ಪಾದಕ ಕೃತ್ಯವಾಗಿದೆ. ಇನ್ನೊಂದೆಡೆ ಗಾಝಾದಲ್ಲಿ ಅಮಾಯಕ ನಾಗರಿಕರ ಸಾವನ್ನು ಯಾರೂ ಕೂಡಾ ಸಹಿಸಿಕೊಳ್ಳಲು ಸಾಧ್ಯಯವಿಲ್ಲ. ದೇಶಗಳು ಈ ಕೃತ್ಯವನ್ನು ಅವುಗಳ ಮನಸ್ಸಿಗೆ ತೋಚಿದ ರೀತಿಯಲ್ಲಿ ಸಮರ್ಥಿಸಿಕೊಳ್ಳಬುಹುದು. ಆದರೆ ಅದಕ್ಕೆ ಮುನ್ನ ಅಂತಾರಾಷ್ಟ್ರೀಯ ಮಾನವೀಯ ಕಾನೂನನ್ನು ಪರಿಗಣನೆಗೆ ತೆಗೆದುಕೊಳ್ಳಬೇಕೆಂದು ಜೈಶಂಕರ್ ತಿಳಿಸಿದ್ದಾರೆ.

''ಸರಿ ತಪ್ಪುಗಳು ಯಾವುದೇ ಇರಲಿ, ಫೆಲೆಸ್ತೀನಿಯರಿಗೆ ಅವರ ತಾಯ್ನಾಡನ್ನು ನಿರಾಕರಿಸಲಾಗುತ್ತಿದೆ ಎಂಬುದು ವಾಸ್ತವ' ಎಂದವರು ಹೇಳಿದರು.

# ಬಿಲ್‌ಗೇಟ್ಸ್ ಭೇಟಿಯಾದ ಪ್ರಧಾನಿ ನರೇಂದ್ರ ಮೋದಿ



**ದೆಹಲಿ:** ಮೈಕ್ರೋಸಾಫ್ಟ್ ಮಾಜಿ ಚೇರ್ಮನ್ ಬಿಲ್‌ಗೇಟ್ಸ್ ಅವರನ್ನು ಪ್ರಧಾನಿ ಮೋದಿ ಭೇಟಿಯಾಗಿದ್ದು, ಮಾತುಕತೆ ನಡೆಸಿದ್ದಾರೆ. ಪ್ರಧಾನಿ ನಿವಾಸಕ್ಕೆ ಭೇಟಿ ನೀಡಿದ್ದ ಬಿಲ್‌ಗೇಟ್ಸ್ ಮೋದಿಯೊಂದಿಗೆ ಕೆಲ ವಿಚಾರದ ಬಗ್ಗೆ ಚರ್ಚೆ ನಡೆಸಿದ್ದಾರೆ.ಈ ಬಗ್ಗೆ ಪ್ರೋಮೋ ಕೂಡ ಬಿಡುಗಡೆಯಾಗಿದೆ.

ಇದರಲ್ಲಿ ಪ್ರಧಾನಿ ಮೋದಿ ಮತ್ತು ಬಿಲ್ಗೇಟ್ಸ್ ತಂತ್ರಜ್ಞಾನ, ಕೋವಿಡ್ ಸಮಸ್ಯೆ ಸೇರಿ ಹಲವು ವಿಷಯಗಳ ಬಗ್ಗೆ ಚರ್ಚೆ ನಡೆಸಿದ್ದಾರೆ. ಮೊದಲು ಮಾತನಾಡುವ ಬಿಲ್ಗೇಟ್ಸ್, ಭಾರತೀಯ ತಂತ್ರಜ್ಞಾನವನ್ನು ಬಳಸುವುದಷ್ಟೇ ಅಲ್ಲದೇ, ಅದನ್ನು ಮುನ್ನಡೆಸಿಕೊಂಡು ಹೋಗುತ್ತಿದ್ದಾರೆಂದು ಹೇಳುತ್ತಾರೆ. ಎಐ, ಡಿಜಿಟಲ್ ರೆವ್ಯೂಲ್ಯೂಶನ್, ಆರೋಗ್ಯ, ವಿದ್ಯಾಭ್ಯಾಸ, ಕೃಷಿ, ನಾರಿ ಶಕ್ತಿ ಬಗ್ಗೆ ಇಬ್ಬರೂ ಮಾತನಾಡಿದ್ದಾರೆ.

ಹಳ್ಳಿ ಮಹಿಳೆಯರು ಹಸು ಮೇಯಿಸುತ್ತಾರೆ, ಎಮ್ಮೆ ಮೇಯಿಸುತ್ತಾರೆ, ಹಾಲು ಕರಿಯುತ್ತಾರೆ. ಆದರೆ ಅವರು ಇಷ್ಟಕ್ಕೆ ಸೀಮಿತವಾಗಬಾರದು. ನಾನು ಅವರ ಕೈಗೆ ಟೆಕ್ನಾಲಜಿ ನೀಡಬಯಸುತ್ತೇನೆ. ಕೆಲವರು ನನಗೆ ಹೇಳಿದ್ದಾರೆ, ನನಗೆ ಸೈಕಲ್ ಓಡಿಸಲು ಬರುತ್ತಿರಲಿಲ್ಲ. ಆದರೆ ನಾವಿಂದು ಪೈಲಟ್ ಆಗಿದ್ದೇವೆ. ನಮಗೆ ಡ್ರೋನ್ ನಡೆಸಲು ಬರುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಇನ್ನೂ ಸಾಕಷ್ಟು ವಿಷಯಗಳ ಬಗ್ಗೆ ಮೋದಿ ಮತ್ತು ಗೇಟ್ಸ್ ಚರ್ಚಿಸಿದ್ದಾರೆ.

## ಚೀನಾದ ದಬ್ಬಾಳಿಕೆಗೆ ಫಿಲಿಫ್ಪೀನ್ಸ್ ಮಣಿಯಲ್ಲ: ಫರ್ಡಿನಾಂಡ್



**ಮನಿಲಾ:** ದಕ್ಷಿಣ ಚೀನಾ ಸಮುದ್ರದಲ್ಲಿ ಚೀನಿ ಪಡೆಗಳು , ಫಿಲಿಪ್ಪಿನ್ಸ್‌ನ ಯೋಧರನ್ನು ಗಾಯಗೊಳಿಸಿದ ಹಾಗೂ ಅವರ ನೌಕೆಗಳನ್ನು ಹಾನಿಗೊಳಿಸಿದ ಘಟನೆಯನ್ನು ಫಿಲಿಪ್ಪೀನ್ಸ್ ಅಧ್ಯಕ್ಷ ಫರ್ಡಿನಾಂಡ್ ಮಾರ್ಕೊಸ್ ತೀವ್ರವಾಗಿ ಖಂಡಿಸಿದ್ದಾರೆ.

ತನ್ನನ್ನು ಮೌನವಾಗಿಸಲು ಬೀಜಿಂಗ್ ನಡೆಸುತ್ತಿರುವ ಪ್ರಯತ್ನಗಳಿಗೆ ಫಿಲಿಪ್ಪೀನ್ಸ್ ಮಣಿಯಲಾರದು ಎಂದು ಅವರು ಹೇಳಿದ್ದಾರೆ. ದಕ್ಷಿಣ ಚೀನಾ ಸಮುದ್ರ ಪ್ರದೇಶದಲ್ಲಿ ನೌಕಾಯಾನಕ್ಕೆ ಸಂಬಂಧಿಸಿದಂತೆ ಚೀನಾ ಹಾಗೂ ಫಿಲಿಪ್ಪೀನ್ಸ್ ನಡುವೆ ದೀರ್ಘ ಸಮಯದಿಂದ ಗಡಿವಿವಾದಗಳು ಹೊಗೆಯಾಡುತ್ತಲೇ ಇವೆ. ಇತ್ತೀಚಿನ ತಿಂಗಳುಗಳಲ್ಲಿ ದಕ್ಷಿಣ ಚೀನಾದ ವಿವಾದಿತ ಅಖಾತ ಪ್ರದೇಶಗಳಲ್ಲಿ ಎರಡೂ ದೇಶಗಳ ಸೇನಾ ನೌಕೆಗಳ ನಡುವೆ ಹಲವು ಬಾರಿ ಸಂಘರ್ಷಗಳು ನಡೆದಿದ್ದವು.

ಶನಿವಾರ ಸ್ಪಾರ್ಟ್ಲಿ ದ್ವೀಪಸ್ತೋಮ ಪ್ರದೇಶದಲ್ಲಿ ಲಂಗರುಹಾಕಿದ್ದ ಫಿಲಿಪ್ಪೀನ್ಸ್ ನೌಕಾಪಡೆಯ ಹಡಗಿಗೆ ಸೈನಿಕರನ್ನು ರವಾನಿಸಲು ಆಗಮಿಸುತ್ತಿದ್ದ ಫಿಲಿಪ್ಪೀನ್ಸ್ ನೌಕೆಯ ಮೇಲೆ ಚೀನಿ ಪಡೆಗಳು ಸೆಕೆಂಡ್ ಥಾಮಸ್ ಶೋಲ್ ದ್ವೀಪ ಸಮೀಪ ಆಕ್ರಮಣ ನಡೆಸಿದ್ದವು. ಈ ಘಟನೆಯನ್ನು ಹಿನ್ನೆಲೆಯಲ್ಲಿ ಫಿಲಿಪ್ಪೀನ್ಸ್ ಮನಿಲಾದಲ್ಲಿರುವ, ಚೀನಾ ರಾಯಭಾರಿಯನ್ನು ಕರೆಸಿಕೊಂಡು ತನ್ನ ಪ್ರತಿಭಟನೆಯನ್ನು ವ್ಯಕ್ತಪಡಿಸಿತ್ತು.

## ಲೋಕಸಭಾ ಚುನಾವಣೆಗೆ ಸ್ಪರ್ಧಿಸಲ್ಲ: ಹಣಕಾಸು ಸಚಿವೆ



**ದೆಹಲಿ:** ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ನನ್ನ ಬಳಿ ಹಣವಿಲ್ಲ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು 2024ರ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸುವುದಿಲ್ಲ ಎಂದಿದ್ದಾರೆ. ವರದಿಗಳ ಪ್ರಕಾರ, ಚುನಾವಣೆಯಲ್ಲಿ ಸ್ಪರ್ಧಿಸಲು ಭಾರಿ ಮೊತ್ತವನ್ನು ಉಲ್ಲೇಖಿಸಿ ಆಂಧ್ರಪ್ರದೇಶ ಅಥವಾ ತಮಿಳುನಾಡಿನಿಂದ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲು ಬಿಜೆಪಿ ಅಧ್ಯಕ್ಷ ಜೆ.ಪಿ ನಡ್ಡಾ ಅವರ ಪ್ರಸ್ತಾಪವನ್ನು ಅವರು ನಿರಾಕರಿಸಿದ್ದಾರೆ ಎನ್ನಲಾಗಿದೆ. ಚುನಾವಣಾ ಪ್ರಚಾರ ಮತ್ತು ಚುನಾವಣೆಗೆ ಸ್ಪರ್ಧಿಸಲು ಅಗತ್ಯವಾದ 'ಹಣ' ತನ್ನ ಬಳಿ ಇಲ್ಲ ಎಂದು ಸೀತಾರಾಮನ್ ಬಿಜೆಪಿ ಅಧ್ಯಕ್ಷರಿಗೆ ತಿಳಿಸಿದ್ದಾರೆ ಎಂದು ವರದಿಗಳು ತಿಳಿಸಿವೆ. ಒಂದು ವಾರ ಅಥವಾ ಹತ್ತು ದಿನಗಳ ಕಾಲ ಯೋಚಿಸಿದ ನಂತರ, ನಾನು 'ಬಹುಶಃ ಇಲ್ಲ' ಎಂದು ಹೇಳಿದೆ. ಚುನಾವಣೆಯಲ್ಲಿ ಸ್ಪರ್ಧಿಸಲು ನನ್ನ ಬಳಿ ಅಷ್ಟೊಂದು ಹಣವಿಲ್ಲ. ಅದು ಆಂಧ್ರಪ್ರದೇಶವೇ ಆಗಿರಲಿ ಅಥವಾ ತಮಿಳುನಾಡು ಆಗಿರಲಿ ನನಗೂ ಸಮಸ್ಯೆ ಇದೆ. ಇದು ಅವರು ಬಳಸುವ ಇತರ ಗೆಲುವಿನ ಮಾನದಂಡಗಳ ಪ್ರಶ್ನೆಯೂ ಆಗಿರುತ್ತದೆ ಎಂದು ಹಣಕಾಸು ಸಚಿವರು ಶೃಂಗಸಭೆ 2024 ರಲ್ಲಿ ಹೇಳಿದರು. ಇನ್ನು ನಿರ್ಮಲಾ ಸೀತಾರಾಮನ್ ಅವರ ಈ ಹೇಳಿಕೆಗೆ ಡಿಎಂಕೆ ಪಕ್ಷ ಆಕ್ಷೇಪ ವ್ಯಕ್ತಪಡಿಸಿದೆ.

## ಕೇಜ್ರಿವಾಲ್ ಮತ್ತೆ 7 ದಿನ ಇಡಿ ಕಸ್ಟಡಿಗೆ

**ನವದೆಹಲಿ:** ದೆಹಲಿ ಅಬಕಾರಿ ನೀತಿ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಸಿಎಂ ಅರವಿಂದ್ ಕೇಜ್ರಿವಾಲ್ ಅವರ ಕಸ್ಟಡಿ ಅವಧಿಯನ್ನ ಮತ್ತೆ ಏಳು ದಿನಗಳವರೆಗೆ ವಿಸ್ತರಿಸುವಂತೆ ಜಾರಿ ನಿರ್ದೇಶನಾಲಯ (ಇಡಿ) ಇಂದು ರೂಸ್ ಅವೆನ್ಯೂ ನ್ಯಾಯಾಲಯದಲ್ಲಿ ಕೋರಿದೆ. ಆದರೆ ನ್ಯಾಯಾಲಯ ನಾಲ್ಕು ದಿನ ಇಡಿ ಕಸ್ಟಡಿಗೆ ನೀಡಿ ಆದೇಶಿಸಿದೆ.ಕೇಜ್ರಿವಾಲ್ ಅವರನ್ನ ಇತರ ಕೆಲವು ಜನರೊಂದಿಗೆ ಎದುರಿಸಲು ಅವರ ಹೆಚ್ಚಿನ ಕಸ್ಟಡಿ ವಿಚಾರಣೆಯ ಅಗತ್ಯವಿದೆ ಎಂದು ಇಡಿ ರಿಮಾಂಡ್ ಅರ್ಜಿಯನ್ನ ಸಲ್ಲಿಸಿತು. ಇನ್ನು ಎಎಪಿ ಗೋವಾ ಅಭ್ಯರ್ಥಿಗಳ ಹೇಳಿಕೆಗಳನ್ನ ದಾಖಲಿಸಲಾಗಿದೆ ಎಂದು ಇಡಿ ತಿಳಿಸಿತ್ತು.



# ಅನಕೊಂಡ ಅನಾ ಜೂಲಿಯಾ ಸಾವು



**ಬ್ರೆಸಿಲಿಯಾ:** ಇತ್ತೀಚೆಗಷ್ಟೇ ಪತ್ತೆಯಾಗಿ ಭಾರೀ ಸುದ್ದಿಯಾಗಿದ್ದ ಜಗತ್ತಿನ ಅತಿದೊಡ್ಡ ಅನಕೊಂಡ ಸಾವನ್ನಪ್ಪಿದೆ. ಅನಾ ಜೂಲಿಯಾ ಎಂದು ನಾಮಕರಣ ಮಾಡಲಾಗಿದ್ದ ಬೃಹತ್ ಗಾತ್ರದ ಹಾವು ಬೇಟೆಗಾರರ ಗುಂಡು ತಗುಲಿ ಮೃತಪಟ್ಟಿರಬಹುದೆಂದು ಶಂಕೆ ವ್ಯಕ್ತ ಪಡಿಸಲಾಗಿದೆ.

ಬ್ರೆಜಿಲ್ನ ದಕ್ಷಿಣ ಭಾಗದ ಬೊನಿಟೊ ಅರಣ್ಯ ಪ್ರದೇಶ ಡಿಸ್ಕವರಿ ಚಾನೆಲ್ ಚಿತ್ರೀಕರಣದ ವೇಳೆ ಡಚ್ ಜೀವಶಾಸ್ತ್ರಜ್ಞ ಫ್ರೀಕ್ ವೋಂಕ್ ಅವರು ಇತ್ತೀಚೆಗಷ್ಟೇ ಬೃಹದಾಕಾರದ ಹಾವನ್ನು ಪತ್ತೆ ಹಚ್ಚಿದ್ದರು. ಹಾವು 26 ಅಡಿ ಉದ್ದ, 440 ಪೌಂಡ್ ತೂಕವಿತ್ತು. ಅನಾ ಜೂಲಿಯಾ ಎಂದು ನಾಮಕರಣ ಮಾಡಲಾಗಿತ್ತು, ಫೋಟೋಗಳು ಮತ್ತು ಸುದ್ದಿ ವಿಶ್ವದಾದ್ಯಂತ ವೈರಲ್ ಆಗಿತ್ತು. ಹಾವು ಸತ್ತು ಬಿದ್ದಿದ್ದು, ಅದರ ಫೋಟೋಗಳನ್ನು ವೋಂಕ್ ಹಂಚಿಕೊಂಡು, ಬೇಸರ ವ್ಯಕ್ತ ಪಡಿಸಿದ್ದಾರೆ. ಸಾವಿಗೆ ನಿಖರ ಕಾರಣ ಏನು ಎಂಬುದನ್ನು ತನಿಖೆ ಮಾಡಲಾಗುತ್ತಿದೆ. ಗುಂಡು ತಗುಲಿ ಗಾಯಗೊಂಡು ಮೃತಪಟ್ಟಿರುವ ಶಂಕೆಯನ್ನು ವ್ಯಕ್ತಪಡಿಸಲಾಗಿದೆ.

# ನೊಬೆಲ್ ಪ್ರಶಸ್ತಿ ವಿಜೇತ ಡೇನಿಯಲ್ ಕಾಹ್ನೆಮನ್ ನಿಧನ



**ಅಮೆರಿಕ:** ನಡವಳಿಕೆಯ ಅರ್ಥಶಾಸ್ತ್ರದಲ್ಲಿ ಸಿದ್ಧಾಂತದ ಪ್ರವರ್ತಕರಾಗಿದ್ದ ನೊಬೆಲ್ ಪ್ರಶಸ್ತಿ ವಿಜೇತ ಡೇನಿಯಲ್ ಕಾಹ್ನೆಮನ್ ತಮ್ಮ 90 ನೇ ವಯಸ್ಸಿನಲ್ಲಿ ನಿಧನರಾಗಿದ್ದಾರೆ.

ಥಿಂಕಿಂಗ್, ಫಾಸ್ಟ್ ಅಂಡ್ ಸ್ಲೋ ಎಂಬ ಹೆಚ್ಚು ಮಾರಾಟವಾದ ಪುಸ್ತಕವನ್ನು ಬರೆದ ಕಾಹ್ನೆಮನ್, ಜನರ ನಡವಳಿಕೆಯು ತರ್ಕಬದ್ಧ ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಬೇರೂರಿದೆ ಎಂಬ ಕಲ್ಪನೆಯ ವಿರುದ್ಧ ವಾದಿಸಿದರು – ಬದಲಿಗೆ ಅದು ಹೆಚ್ಚಾಗಿ ಪ್ರವೃತ್ತಿಯನ್ನು ಆಧರಿಸಿದೆ. ಇಸ್ರೇಲಿ–ಅಮೆರಿಕನ್ ಶಿಕ್ಷಣತಜ್ಞ ಕಾಹ್ನೆಮನ್ ಅವರು ಸಾಯುವವರೆಗೂ ಕೆಲಸ ಮಾಡಿದ ಪ್ರಿನ್ಸ್‌ಟನ್ ವಿಶ್ವವಿದ್ಯಾಲಯವು ತನ್ನ ವೆಬ್‌ಸೈಟ್‌ನಲ್ಲಿ ಹೇಳಿಕೆಯಲ್ಲಿ ಅವರ ನಿಧನವನ್ನು ದೃಢಪಡಿಸಿದೆ.

2002 ರಲ್ಲಿ, ಕಾಹ್ನೆಮನ್ ಅವರಿಗೆ ಮನೋವಿಜ್ಞಾನ ಮತ್ತು ಅರ್ಥಶಾಸ್ತ್ರಕ್ಷೇತ್ರಗಳಲ್ಲಿನ ಸಂಶೋಧನೆಯನ್ನು ಗುರುತಿಸಿ ಆರ್ಥಿಕ ವಿಜ್ಞಾನದಲ್ಲಿ ನೊಬೆಲ್ ಸ್ಮಾರಕ ಪ್ರಶಸ್ತಿ ನೀಡಲಾಯಿತು. ಅವರ ಅತ್ಯಂತ ಜನಪ್ರಿಯ ಸಿದ್ಧಾಂತವು ಜನರು ಸಂಪೂರ್ಣವಾಗಿ ತರ್ಕಬದ್ಧ ಮತ್ತು ಸ್ವಹಿತಾಸಕ್ತಿಯುಳ್ಳವರು ಎಂಬ ಸಾಂಪ್ರದಾಯಿಕ ಆರ್ಥಿಕ ವಿಧಾನಗಳನ್ನು ವಿರೋಧಿಸಿತು.

# ನೀರವ್ ಮೋದಿ ಐಷಾರಾಮಿ ಅಪಾರ್ಟ್‌ಮೆಂಟ್ ಮಾರಾಟಕ್ಕೆ ಗ್ರೀನ್ ಸಿಗ್ನಲ್





**ದೆಹಲಿ:** ವಜ್ರದ ವ್ಯಾಪಾರಿ ನೀರವ್ ಮೋದಿಗೆ ಸೇರಿದ ಲಂಡನ್ನ ಐಷಾರಾಮಿ ಅಪಾರ್ಟ್ಮೆಂಟ್ ಮಾರಾಟಕ್ಕೆ ಲಂಡನ್ ಹೈಕೋರ್ಟ್ ಅನುಮತಿ ನೀಡಿದೆ. ಈ ಅಪಾರ್ಟ್ಮೆಂಟನ್ನು 5.25 ಮಿಲಿಯನ್ ಪೌಂಡ್ಗೆ ಮಾರಾಟ ಮಾಡಬಹುದು ಎಂದು ಹೈಕೋರ್ಟ್ ತಿಳಿಸಿದೆ. ವಿಚಾರಣೆಗೆ ಆಗ್ನೇಯ ಲಂಡನ್ನ ಥೇಮ್ಸೈಡ್ ಜೈಲಿನಿಂದ ದೇಶಭ್ರಷ್ಟ ವಜ್ರದ ವ್ಯಾಪಾರಿ ನೀರವ್ ಹಾಜರಾಗಿದ್ದು, ವಿಚಾರಣೆ ಕೈಗೆತ್ತಿಕೊಂಡ ನ್ಯಾಯಾಧೀಶ ಮಾಸ್ಟರ್ ಜೇಮ್ಸ್ ಬ್ರೈಟ್ವೆಲ್, ಆಸ್ತಿಯನ್ನು 5.25 ಮಿಲಿಯನ್ ಅಥವಾ ಅದಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡಲು ಅನುಮತಿಸುವುದು ಸಮಂಜಸವಾದ ನಿರ್ಧಾರ ಎಂದರು. ಇದೇ ಸಂದರ್ಭ ಮಾರಾಟದಿಂದ ಬರುವ ಆದಾಯವನ್ನು ಸುರಕ್ಷಿತ ಖಾತೆಯಲ್ಲಿ ಇರಿಸುವಂತೆ ಜಾರಿ ನಿರ್ದೇಶನಾಲಯ (ಇಡಿ) ಮಾಡಿದ ಮನವಿಗಳನ್ನು ಕೂಡಾ ಅವರು ಸ್ವೀಕರಿಸಿದರು.

# ಪ್ರತಿದಿನ 1 ಶತಕೋಟಿ ಟನ್ ಪೋಲಾಗುತ್ತಿದೆ ಆಹಾರ



**ಪ್ಯಾರಿಸ್:** ಪ್ರಪಂಚದಾದ್ಯಂತ ಸುಮಾರು 800 ಮಿಲಿಯನ್ ಜನರು ಹಸಿವಿನಿಂದ ಬಳಲುತ್ತಿದ್ದರೆ ಪ್ರತಿ ದಿನ ಒಂದು ಶತಕೋಟಿ ಟನ್ ಗಿಂತಲೂ ಹೆಚ್ಚು ಆಹಾರ ಪ್ರತಿ ದಿನ ಪೋಲಾಗುತ್ತದೆ. ಇದನ್ನು ವಿಶ್ವಸಂಸ್ಥೆಯು ಆಹಾರ ತ್ಯಾಜ್ಯದ ಜಾಗತಿಕ ದುರಂತ ಎಂದು ಕರೆದಿದೆ.

ಇತ್ತೀಚಿನ ಅಂಕಿ ಅಂಶಗಳ ಪ್ರಕಾರ ಸುಮಾರು 800 ಮಿಲಿಯನ್ ಜನರು ಹಸಿವಿನಿಂದ ಬಳಲುತ್ತಿರುವ ಈ ಸಂದರ್ಭದಲ್ಲಿ 1 ಟ್ರಿಲಿಯನ್ ಡಾಲರ್ ಗಿಂತಲೂ ಹೆಚ್ಚು ಮೌಲ್ಯದ ಆಹಾರ ಮನೆ ಮತ್ತು ಆಹಾರ ಮಾರುಕಟ್ಟೆಯಲ್ಲಿ ತ್ಯಾಜ್ಯ ತೊಟ್ಟಿಗೆ ಎಸೆಯಲಾಗುತ್ತಿದೆ ಎಂದು ಯುಎನ್ ನ ಇತ್ತೀಚಿನ ಆಹಾರ ತ್ಯಾಜ್ಯ ಸೂಚ್ಯಂಕ ವರದಿ ಹೇಳಿದೆ. 2022 ರಲ್ಲಿ 1 ಶತಕೋಟಿ ಟನ್ನಗಳಿಗಿಂತ ಹೆಚ್ಚು ಆಹಾರ ಮಾರುಕಟ್ಟೆಯಲ್ಲಿ ಲಭ್ಯವಿರುವ ಎಲ್ಲಾ ಉತ್ಪನ್ನಗಳಲ್ಲಿ ಐದನೇ ಒಂದು ಭಾಗದಷ್ಟು ವ್ಯರ್ಥವಾಯಿತು. ಆಹಾರ ತ್ಯಾಜ್ಯವು ಜಾಗತಿಕ ದುರಂತವಾಗಿದೆ. ವಿಶ್ವದಾದ್ಯಂತ ಆಹಾರ ವ್ಯರ್ಥವಾಗುವುದರಿಂದ ಲಕ್ಷಾಂತರ ಜನರು ಇಂದು ಹಸಿವಿನಿಂದ ಬಳಲುತ್ತಿದ್ದಾರೆ ಎಂದು ಯುಎನ್ ಪರಿಸರ ಕಾರ್ಯಕ್ರಮದ ಕಾರ್ಯನಿರ್ವಾಹಕ ನಿರ್ದೇಶಕ ಇಂಗರ್ ಆಂಡರ್ಸನ್ ತಿಳಿಸಿದ್ದಾರೆ.

ಆಹಾರ ತ್ಯಾಜ್ಯವು ಹೆಚ್ಚಿನ ಪ್ರಮಾಣದ ಇಂಗಾಲದ ಡೈ ಆಕ್ಸೈಡ್ ಅನ್ನು ಉತ್ಪಾದಿಸುತ್ತದೆ. ಇದು ಸುಮಾರು ಸಾಮಾನ್ಯ ಹೊರಸೂಸುವಿಕೆಗಿಂತ ಐದು ಪಟ್ಟು ಹೆಚ್ಚಾಗಿದೆ. ಇದರಿಂದ ಮಣ್ಣು, ಗಾಳಿ, ಸಸ್ಯಗಳ ಮೇಲೂ ಪರಿಣಾಮ ಉಂಟುಮಾಡುತ್ತದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

## ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಡಲಿಲ್ಲ
# ರಕ್ಷಿತ್ ಶೆಟ್ಟಿ

ಈ ಹಿಂದೆ ರಕ್ಷಿತ್ ಶೆಟ್ಟಿ ತಮ್ಮ ಅಭಿಮಾನಿಗಳಿಗೆ ಇನ್ ಡೈರೆಕ್ಟ್ ಆಗಿ ರಿಚರ್ಡ್ ಆಂಟನಿ ಕುರಿತು ಅಪ್ ಡೇಟ್ ವೊಂದನ್ನು ನೀಡಿದ್ದರು. ರಿಚರ್ಡ್ ಆಂಟನಿ ಯಾವಾಗಿಂದ ಶುರು ಎಂದು ಕೇಳಲಾದ ಪ್ರಶ್ನೆಗೆ ತಮ್ಮ ಉಳಿದವರು ಕಂಡಂತೆ ಸಿನಿಮಾ ರಿಲೀಸ್ ಡೇಟ್ ಹೇಳಿದ್ದರು. ಹಾಗಾಗಿ ಮಾರ್ಚ್ 28ರ ಡೇಟ್ ಗಾಗಿ ಅಭಿಮಾನಿಗಳು ಕಾಯುತ್ತಿದ್ದರು. ಆದರೆ, ಇಂದು ಆ ಕುರಿತು ಹೇಳದೇ ನಿರಾಸೆ ಮೂಡಿಸಿದ್ದಾರೆ ರಕ್ಷಿತ್ ಶೆಟ್ಟಿ.

ಇವತ್ತು ರಿಚರ್ಡ್ ಆಂಟನಿ ಕುರಿತಂತೆ ಒಂದಷ್ಟು ಮಾಹಿತಿಯನ್ನು ರಕ್ಷಿಕ್ ಹೇಳಲಿದ್ದಾರೆ ಎಂದೇ ನಂಬಲಾಗಿತ್ತು. ಆದರೆ, ಇಂದಿನ ದಿನಕ್ಕಿಂತ ಇನ್ನೊಂದು ವಿಶೇ? ದಿನಾಂಕವನ್ನು ಗೊತ್ತು ಮಾಡಿದ್ದೇವೆ. ಅಂದು ರಿಚರ್ಡ್ ಆಂಟನಿ ಬಗ್ಗೆ ಮಾಹಿತಿ ನೀಡುವೆ ಎಂದು ರಕ್ಷಿತ್ ಬರೆದುಕೊಂಡಿದ್ದಾರೆ. ಉಳಿದವರೆ ಕಂಡಂತೆ ಸಿನಿಮಾವನ್ನೂ ಅವರು ನೆನಪಿಸಿಕೊಂಡಿದ್ದಾರೆ.



ಈ ಹಿಂದೆ ಹೊಂಬಾಳೆ ಸಂಸ್ಥೆಯ ಆಪ್ತರು ಕೂಡ ಪಬ್ಲಿಕ್ ಟಿವಿ ಡಿಜಿಟಲ್ ಜೊತೆ ಮಾತಾಡ್ತಾ ಒಂದಷ್ಟು ಮಾಹಿತಿಯನ್ನು ಹಂಚಿಕೊಂಡಿದ್ದರು. ಮಾರ್ಚ್ ಕೊನೆಯ ವಾರದ ಅಥವಾ ಏಪ್ರಿಲ್ ಮೊದಲ ವಾರದಲ್ಲಿ ಚಿತ್ರಕ್ಕೆ ಮುಹೂರ್ತ ಮಾಡಲಾಗುತ್ತಿದೆ ಎನ್ನುವ ಮಾಹಿತಿ ಹೊಂಬಾಳೆ ಫಿಲ್ಮ್ಸ್ ಅಂಗಳದಿಂದಲೇ ಬಂದಿತ್ತು. ಈ ಚಿತ್ರವನ್ನು ಅದ್ದೂರಿಯಾಗಿ ತಯಾರಿಸುವುದಕ್ಕಾಗಿ ಸರ್ವ ರೀತಿಯಲ್ಲೂ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಹೇಳಲಾಗಿತ್ತು. ಚುನಾವಣೆ ಕಾರಣದಿಂದಾಗಿ ಮುಂದೂಡುತ್ತಾರಾ ಅಥವಾ ಏಪ್ರಿಲ್ ನಲ್ಲಿ ಏನಾದರೂ ಮಾಹಿತಿ ನೀಡ್ತಾರಾ ಕಾದು ನೋಡಬೇಕು.

ಹಲವು ತಿಂಗಳ ಹಿಂದೆಯೇ ಈ ಚಿತ್ರವನ್ನು ಹೊಂಬಾಳೆ ಫಿಲ್ಮ್ಸ್ ಘೋಷಣೆ ಮಾಡಿತ್ತು.ರಕ್ಷಿತ್ ಶೆಟ್ಟಿ ನಟನೆಯಲ್ಲೇ ಬ್ಯುಸಿಯಾಗಿದ್ದರಿಂದ ಮುಹೂರ್ತಕ್ಕೆ ತಡವಾಗಿತ್ತು. ಸಪ್ತ ಸಾಗರದಾಚೆ ಶೂಟಿಂಗ್ ಮತ್ತು ಬಿಡುಗಡೆಯ ಎಲ್ಲ ಕೆಲಸಗಳನ್ನು ಮುಗಿಸಿ, ಸ್ಕಿಪ್ಟ್ ನಲ್ಲಿ ತೊಡಗಿದ್ದರು ರಕ್ಷಿತ್ ಶೆಟ್ಟಿ, ಈಗ ಸ್ಕಿಪ್ಟ್ ಕೆಲಸ ಕೂಡ ಬಹುತೇಕ ಮುಗಿದಿದ್ದು, ಶೀಘ್ರದಲ್ಲೇ ಶೂಟಿಂಗ್ ಕೂಡ ಶುರುವಾಗಲಿದೆಯಂತೆ.



ಸಹಜ ಅಭಿನಯ, ಸರಳ ಸೌಂದರ್ಯದಿಂದಲೇ ಸ್ಯಾಂಡಲ್ ವುಡ್ ನ್ಯೂ ಕ್ರಶ್ ಎನಿಸಿಕೊಂಡಿರುವ ಸಂಜನಾ ಆನಂದ್ ಈಗ ಮುಧೋಳ್ ಬಳಗ ಸೇರಿಕೊಂಡಿದ್ದಾರೆ. ಕೆಮಿಸ್ಟ್ರಿ ಆಫ್ ಕರಿಯಪ್ಪ ಸಿನಿಮಾ ಮೂಲಕ ಚಿತ್ರರಂಗಕ್ಕೆ ಪರಿಚಯವಾದ ಸಂಜನಾ ಕಡಿಮೆ ಅವಧಿಯಲ್ಲಿ ಸ್ಟಾರ್ ಹೀರೋ ಜೊತೆ ತೆರೆಹಂಚಿಕೊಳ್ಳುವ ಅವಕಾಶಗಿಟ್ಟಿಸಿಕೊಂಡರು. ದುನಿಯಾ ವಿಜಯ್ ಸಾರಥ್ಯದ ಸಲಗ ಮೂಲಕ ಸೆನ್ಸೇ?ನ್ ಸೃಷ್ಟಿಸಿದ್ದ ಈ ಬ್ಯೂಟಿ ಟಾಲಿವುಡ್ ಕೂಡ ಪ್ರವೇಶಿಸಿದ್ದಾರೆ. ಕನ್ನಡದ ಜೊತೆಗೆ ತೆಲುಗು ಅಂಗಳದಲ್ಲಿಯೂ ಬ್ಯುಸಿಯಾಗಿರುವ ಸಂಜನಾ ಆನಂದ್ ಈಗ

## ಕ್ರೇಜಿಸ್ಟಾರ್ ಪುತ್ರನ ಚಿತ್ರಕ್ಕೆ ಸಂಜನಾ ಆನಂದ್ ನಾಯಕಿ

ಕ್ರೇಜಿಸ್ಟಾರ್ ರವಿಚಂದ್ರನ್ ಪುತ್ರ ವಿಕ್ರಮ್ ಜೊತೆ ರೋಮ್ಯಾನ್ಸ್ ಮಾಡಲು ಒಕೆ ಎಂದಿದ್ದಾರೆ. 'ತ್ರಿವಿಕ್ರಮ' ಚಿತ್ರದ ಮೂಲಕ ಸ್ಯಾಂಡಲ್‌ವುಡ್‌ಗೆ ಬಂದ ಕ್ರೇಜಿಸ್ಟಾರ್ ರವಿಚಂದ್ರನ್ ಪುತ್ರ ವಿಕ್ರಮ್ ಈಗ ಎರಡನೇ ಸಿನಿಮಾದಲ್ಲಿ ಬ್ಯುಸಿ ಇದ್ದಾರೆ. ಮುಧೋಳ್ ಮೂಲಕ ಸಖತ್ ಮಾಸ್ ಅವತಾರ ತಾಳಿರುವ ವಿಕ್ಕಿಗೆ ನಾಯಕಿಯಾಗಿ ರಾಯಲ್ ಹುಡುಗಿ ನಟಿಸುತ್ತಿದ್ದಾರೆ.ಈ ಚಿತ್ರ ಸೆಟ್ಟೇರಿದಾಗಿನಿಂದಲೂ ಸಂಜನಾ ನಾಯಕಿ ಎಂಬ ವಿಷ್ಯ ಹರಿದಾಡಿತ್ತು. ಆದ್ರೆ ಚಿತ್ರತಂಡ ಮಾತ್ರ ಗುಟ್ಟುಬಿಟ್ಟುಕೊಟ್ಟಿರಲಿಲ್ಲ. ಸಲಗ ಸುಂದರಿ ಹುಟ್ಟುಹಬ್ಬದ ವಿಶೇಷವಾಗಿ ಇಂದು ಚಿತ್ರತಂಡ ಸಮಾಚಾರವನ್ನು ಅಧಿಕೃತಗೊಳಿಸಿದೆ.

ವಿಕ್ರಮ್ ಮುಧೋಳ್ ಸಿನಿಮಾದ ನಾಯಕಿಯಾಗಿರುವ ಸಂಜನಾ ಸ್ಪೆಷಲ್ ರೋಲ್ ಪ್ಲೇ ಮಾಡಿದ್ದಾರೆ. ಇಲ್ಲಿವರೆಗೂ ಅವರು ನಟಿಸಿದ ವಿಭಿನ್ನ ಲುಕ್ ನಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಅಂದಹಾಗೇ ತಮಿಳು, ತೆಲುಗು ಚಿತ್ರರಂಗದಲ್ಲಿ ಸಹ ನಿರ್ದೇಶಕನಾಗಿ, ಸಿನಿಮಾ ಬರಹಗಾರನಾಗಿ ಗುರುತಿಸಿಕೊಂಡಿರುವ ಕಾರ್ತಿಕ್ ರಾಜನ್ ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಸಂಜನಾ ಆನಂದ್ ಮುಧೋಳ್ ಸಿನಿಮಾ ಜೊತೆಗೆ ದಿನಕರ್ ತೂಗುದೀಪ ನಿರ್ದೇಶನದ ರಾಯಲ್ ಹಾಗೂ ತೆಲುಗಿನ ಫುಲ್ ಬಾಟೆಲ್ ಎಂಬ ಚಿತ್ರಗಳ ಬಿಡುಗಡೆಗೆ ಎದುರು ನೋಡುತ್ತಿದ್ದಾರೆ. ಧನ್ವೀರ್ ಗೌಡ ನಟಿಸುತ್ತಿರುವ ಹಯಗ್ರೀವ್ ಗೂ ನಾಯಕಿಯಾಗಿರುವ ರಾಯಲ್ ಕ್ವೀನ್ ಸದ್ಯ ಸಿಕ್ಕಾಪಟ್ಟೆ ಬ್ಯುಸಿಯಾಗಿದ್ದಾರೆ.



ಸಿನಿ ಕಾರ್ನರ್

# 'ಮಹಾನಟಿ' ಶೋಗೆ ಇವರೇ ನೋಡಿ ಜಡ್ಜಸ್

ತನ್ನ ವಿಭಿನ್ನ ರಿಯಾಲಿಟಿ ಶೋಗಳ ಮೂಲಕ ಸಾಕ?ಟ್ಟು ಯುವ ಪ್ರತಿಭೆಗಳನ್ನ ಕರುನಾಡಿಗೆ ಪರಿಚಯಿಸಿರುವ ಜೀ ಕನ್ನಡ ವಾಹಿನಿ, ಈ ಬಾರಿ ಮತ್ತೊಂದು ಹೊಸ ರಿಯಾಲಿಟಿ ಶೋ ಮೂಲಕ ಕರುನಾಡಿನ ಯುವ ನಟಿಯರನ್ನ ಹುಡುಕುವ ಕೆಲಸ ಶುರುಮಾಡಿದೆ. ಜೀ ವಾಹಿನಿಯ ಜನಪ್ರಿಯ ರಿಯಾಲಿಟಿ ಶೋಗಳಾದ ಡ್ರಾಮಾ ಜೂನಿಯರ್ಸ್,ಕಾಮಿಡಿ ಕಿಲಾಡಿಗಳು, ಡಿಕೆಡಿ, ಭರ್ಜರಿ ಬ್ಯಾಚುಲರ್ಸ್ ಮತ್ತು ಸರಿಗಮಪ ಮೂಲಕ ಈಗಾಗಲೆ ಸಾಕ?ಟ್ಟು ನಟನಟಿಯರು, ಗಾಯಕ ಗಾಯಕಿಯರು ಹಾಗು ಕೊರಿಯೋಗ್ರಾಫರ್‌ಗಳನ್ನ ಕರುನಾಡಿಗೆ ಕೊಟ್ಟಿರುವ ಜೀ ಕನ್ನಡ ವಾಹಿನಿ, ಇದೀಗ ಮಹಾನಟಿ ಎಂಬ ಹೊಚ್ಚ ಹೊಸ ರಿಯಾಲಿಟಿ ಶೋ ಮೂಲಕ ನಿಮ್ಮೂರಿನಲ್ಲಿರುವ ನಟಿಯಾಗುವ ಕನಸು ಹೊತ್ತಿರುವ, ಅವಕಾಶ ವಂಚಿತ ಪ್ರತಿಭೆಗಳಿಗೆ ವೇದಿಕೆ ಒದಗಿಸಲು ಈ ಕಾರ್ಯಕ್ರಮವನ್ನ ಹೆಣೆದ್ದಿದ್ದು,ಕನ್ನಡ ಚಿತ್ರರಂಗಕ್ಕೆ ಯುವ ನಾಯಕ ನಟಿಯರನ್ನ ನೀಡುವ ಕೆಲಸವನ್ನ ಈ ರಿಯಾಲಿಟಿ ಶೋ ಮಾಡಲಿದೆ. ಕರುನಾಡಿನ ಧೀಮಂತ ನಟಿಯರ ಸಾಲಿಗೆ ಸೇರಲು ಬಯಸುವ ಎಲ್ಲಾ ಯುವ ನಟಿಯರಿಗೆ ವೇದಿಕೆ ಕಲ್ಪಿಸಿಕೊಡುವ ಈ ಮಹಾನಟಿ ಕಾರ್ಯಕ್ರಮವು ,ನಿಮ್ಮ ಕನಸನ್ನ ನನಸು ಮಾಡುವ ನಾಡಿನ 31 ಜಿಲ್ಲೆಗಳನ್ನ ಸಂಚರಿಸಿ, ಪ್ರತಿಭೆಗಳನ್ನ ಅಳೆದು ತೂಗಿ,ವೇದಿಕೆ ಕಲ್ಪಿಸಿ ಕೊಡಲು ಹೊರಟಿರುವ ಈ ಹೊಸ ರಿಯಾಲಿಟಿ ಶೋನ ಆಡಿಷನ್ ಕೊನೆಯ ಹಂತ ತಲುಪಿದೆ. ನಟಿಯಾಗುವ ಕನಸು ಹೊತ್ತ ಅದೆಷ್ಟೋ ಯುವ ನಟಿಯರಿಗೆ, ಸರಿಯಾದ ವೇದಿಕೆ ಸಿಗದೆ ಅವರ ಕನಸುಗಳು ಕರುಗುವ ಹೊತ್ತಿನಲ್ಲಿ, ಅದನ್ನ ಪೋಷಿಸಿ ಬೆಳೆಸಲು ಮಾಡುತ್ತಿರುವ ಈ ಹೊಸ ಪ್ರಯತ್ನವೇ ಮಹಾನಟಿ. ಇಂತಹ ಹೊಸ ಪ್ರಯೋಗದ ಈ ಮಹಾನಟಿ ರಿಯಾಲಿಟಿ ಶೋನಲ್ಲಿ ಜಡ್ಜಸ್ಗಳು ಯಾರು ಎಂಬ ಕುತೂಹಲ ಎಲ್ಲರಲ್ಲು ಈಗ ಮನೆಮಾಡಿದ್ದು, ಈ ಬಾರಿ ಮೂರು ಹೊಸ ಜಡ್ಜಸ್ಗಳು ವೇದಿಕೆಯನ್ನ ಅಲಂಕರಿಸಲ್ಲಿದ್ದು, ಅವರಲ್ಲಿ ಸ್ಯಾಂಡಲ್ ವುಡ್ಡಿನ ಖ್ಯಾತ ನಿರ್ದೇಶಕ,ನಟ ರಮೇಶ್ ಅರವಿಂದ್, ಖ್ಯಾತ ನಾಯಕ ನಟಿ ಪ್ರೇಮ, ಕಾಟೇರದಂತಹ ಯಶಸ್ವಿ ಚಿತ್ರಕೊಟ್ಟ ನಿರ್ದೇಶಕ ತರುಣ್ ಸುಧೀರ್ ಮತ್ತು ಯುವ ನಾಯಕ ನಟಿ ನಿಶ್ವಿಕಾ ನಾಯ್ಡು ಈ ರಿಯಾಲಟಿ ಶೋನ ಜಡ್ಜಸ್ಗಳಾಗಿ



ಕಾರ್ಯನಿರ್ವಹಿಸಲ್ಲಿದ್ದಾರೆ. ಆದರೇ ಆ ನಾಲ್ಕು ಜನಗಳಲ್ಲಿ ಒಬ್ಬರು ಹೊಸದಾಗಿ ಬರುವ ನಟಿಯರಿಗೆ ಅಭಿನಯದ ಮಜಲುಗಳನ್ನ ಕಲಿಸುವ ಮೆಂಟರ್ ಆಗಿ ಕಾರ್ಯನಿರ್ವಹಿಸಲ್ಲಿದ್ದಾರೆ ಎಂದು ವಾಹಿನಿ ತಿಳಿಸಿದೆ. ಪ್ರತಿ ಬಾರಿ ತನ್ನ ಕಾರ್ಯಕ್ರಮದಲ್ಲಿ ವಿಭಿನ್ನ ಪ್ರಯೋಗಗಳನ್ನ ಮಾಡುವ ಜೀ ಕನ್ನಡ ವಾಹಿನಿ ಈ ಬಾರಿ ಮಹಾನಟಿಯ ರಿಯಾಲಿಟಿ ಶೋ ಮೂಲಕ ಮನೋರಂಜನೆಯಲ್ಲಿ ಹೊಸತನವನ್ನ ತರಲು ತಯಾರಿ ಮಾಡಿಕೊಂಡಿದ್ದು, ಇದೇ ಮಾರ್ಚ್ 30ನೇ ತಾರೀಖು ಶನಿವಾರ ತನ್ನ ಮೊದಲ ಸಂಚಿಕೆ ಪ್ರಸಾರ ಮಾಡಲ್ಲಿದ್ದು,ಇನ್ನು ಮುಂದೆ ಈ ಕಾರ್ಯಕ್ರಮವು ಪ್ರತಿ ಶನಿವಾರ ಮತ್ತು ಭಾನುವಾರ ಸಂಜೆ 7.30ಕ್ಕೆ ಪ್ರಸಾರವಾಗಲಿದೆ. ಈ ನಡುವೆ ಹೊಂಬಾಳೆ ಮತ್ತು ರಕ್ಷಿತ್ ನಡುವೆ ಬಿರುಕು ಉಂಟಾಗಿದ್ದು, ಬೇರೊಂದು ಸಂಸ್ಥೆಯು ರಿಚರ್ಡ್ ಆಂಟನಿ ಚಿತ್ರವನ್ನು ನಿರ್ಮಾಣ ಮಾಡಲಿದೆ ಎನ್ನುವ ಸುದ್ದಿಯೂ ಹರಿದಾಡಿತ್ತು. ಈ ಕುರಿತು ಹೊಂಬಾಳೆ ಫಿಲ್ಮ್ಸ್ ಆಪ್ತರೇ ಹೇಳುವಂತೆ, 'ಸಿನಿಮಾ ಮುಹೂರ್ತಕ್ಕೆ ಹೊಂಬಾಳೆಯೇ ತಯಾರಿ ಮಾಡಿಕೊಳ್ಳುತ್ತಿದೆ ಅಂದ ಮೇಲೆ ಈ ಪ್ರಶ್ನೆಯೇ ಅಪ್ರಸ್ತುತ' ಎನ್ನುತ್ತಾರೆ.

# ಪರಾಗ್ ಬೆಂಕಿ ಆಟಕ್ಕೆ ಡೆಲ್ಲಿ ಭಸ್ಮ ರಾಯಲ್ಸ್‌ಗೆ 12 ರನ್‌ಗಳ ಗೆಲುವು

ರಿಯಾನ್ ಪರಾಗ್ ಅವರ ಸ್ಫೋಟಕ ಅರ್ಧಶತಕ ಮತ್ತು ಬೌಲರ್‌ಗಳ ನೆರವಿನಿಂದ ರಾಜಸ್ಥಾನ ರಾಯಲ್ಸ್ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ 12 ರನ್ ಗಳ ಜಯ ಸಾಧಿಸಿದೆ. ಗೆಲ್ಲಲು 186 ರನ್‌ಗಳ ಗುರಿಯನ್ನು ಪಡೆದ ಡೆಲ್ಲಿ 20 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 173 ರನ್‌ಗಳಿಸಿ ಸೋಲನ್ನು ಒಪ್ಪಿಕೊಂಡಿತು. ಸತತ ಎರಡು ಪಂದ್ಯಗಳನ್ನು ಗೆದ್ದ ರಾಜಸ್ಥಾನ 4 ಸಂಪಾದಿಸಿ ಅಂಕಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲೇ ಮುಂದುವರಿದಿದೆ.

ಕೊನೆಯ 18 ಎಸೆತಗಳಲ್ಲಿ ಡೆಲ್ಲಿ ತಂಡಕ್ಕೆ 41 ರನ್‌ಗಳ ಅಗತ್ಯವಿತ್ತು. 18ನೇ ಓವರ್‌ನಲ್ಲಿ ಅವೇಶ್ ಖಾನ್ 9 ರನ್, 19ನೇ ಓವರ್‌ನಲ್ಲಿ ಸಂದೀಪ್ ಶರ್ಮಾ 15 ರನ್ ಕೊಟ್ಟರೆ ಕೊನೆಯ ಓವರ್‌ನಲ್ಲಿ ಅವೇಶ್ ಖಾನ್ ಕೇವಲ 4 ರನ್ ನೀಡಿದ್ದರಿಂದ ರಾಜಸ್ಥಾನ ಗೆಲುವು ಸಾಧಿಸಿತು.

ಡೆಲ್ಲಿ ಕ್ಯಾಪಿಟಲ್ಸ್ ಆರಂಭ ಉತ್ತಮವಾಗಿತ್ತು. ಮಿಚೆಲ್ ಮಾ?ರ್ 23 ರನ್ (12 ಎಸೆತ, 5 ಬೌಂಡರಿ) ಹೊಡೆದು ಔಟಾದರು. ನಂತರ ರಿಕಿ ಭುಯಿ ಸೊನ್ನೆ ಸುತ್ತಿದರು. ನಾಯಕ ರಿಷಭ್ ಪಂತ್ 28 ರನ್ (26 ಎಸೆತ, 2 ಬೌಂಡರಿ, 1 ಸಿಕ್ಸರ್) ಹೊಡೆದರೆ, ಆರಂಭಿಕ ಆಟಗಾರ ಡೇವಿಡ್ ವಾರ್ನರ್ 49 ರನ್(34 ಎಸೆತ, 5 ಬೌಂಡರಿ, 3 ಸಿಕ್ಸರ್) ಸಿಡಿಸಿ ವಿಕೆಟ್ ಒಪ್ಪಿಸಿದರು. ಮಧ್ಯಮ ಕ್ರಮಾಂಕದಲ್ಲಿ ಟ್ರಿಸ್ಟಾನ್ ಸ್ಟಬ್ಸ್ ಮತ್ತು ಅಕ್ಷರ್ ಪಟೇಲ್ ಮುರಿಯದ 6ನೇ ವಿಕೆಟಿಗೆ 27 ಎಸೆತದಲ್ಲಿ 51 ರನ್ ಜೊತೆಯಾಟವಾಡಿದರೂ ತಂಡಕ್ಕೆ ಜಯ ದಕ್ಕಲಿಲ್ಲ. ಟ್ರಿಸ್ಟಾನ್ ಸ್ಟಬ್ಸ್ ಔಟಾಗದೇ 44 ರನ್ (23 ಎಸೆತ, 2 ಬೌಂಡರಿ, 3 ಸಿಕ್ಸರ್) ಹೊಡೆದರೆ



ಅಕ್ಷರ್ ಪಟೇಲ್ ಔಟಾಗದೇ 15 ರನ್ (13 ಎಸೆತ, 1 ಬೌಂಡರಿ) ಹೊಡೆದರು.

ಆರಂಭದಲ್ಲೇ ಕುಸಿತ: ರಾಜಸ್ಥಾನ 36 ರನ್ ಗಳಿಸುವಷ್ಟರಲ್ಲಿ ಪ್ರಮುಖ 3 ವಿಕೆಟ್ ಕಳೆದುಕೊಂಡಿತ್ತು. ಯಶಸ್ವಿ ಜೈಸ್ವಾಲ್ 5 ರನ್, ಜೋಸ್ ಬಟ್ಲರ್ 11 ರನ್, ನಾಯಕ ಸಂಜು ಸ್ಯಾಮ್ಸನ್ 15 ರನ್ ಗಳಿಸಿ ಔಟಾಗಿದ್ದರು.

ಈ ಹಂತದಲ್ಲಿ ಬೌಲರ್ ಅಶ್ವಿನ್ ಸ್ಫೋಟಕ ಬ್ಯಾಟ್ ಮಾಡಿ 19 ಎಸೆತಗಳಲ್ಲಿ 29 ರನ್ (3 ಸಿಕ್ಸರ್) ಸಿಡಿಸಿ ಚೇತರಿಕೆ ನೀಡಿದರು. ವಿಕೆಟ್ ಉರುಳುತ್ತಿದ್ದರೂ ರಿಯನ್ ಪರಾಗ್ ಸಿಡಿಲಬ್ಬರದ ಬ್ಯಾಟ್ ಬೀಸಿದ ಪರಿಣಾಮ ರಾಜಸ್ಥಾನ 5 ವಿಕೆಟ್ ನಷ್ಟಕ್ಕೆ 185 ರನ್ ಗಳಿಸಿತು.

34 ಎಸೆತದಲ್ಲಿ ಅರ್ಧಶತಕ ಹೊಡೆದ ಪರಾಗ್ ಅಂತಿಮವಾಗಿ 45 ಎಸೆತದಲ್ಲಿ ಔಟಾಗದೇ 84 ರನ್ (7 ಬೌಂಡರಿ, 6 ಸಿಕ್ಸರ್) ಹೊಡೆದರೆ ಧ್ರುವ್ ಜರೇಲ್ 20 ರನ್(12 ಎಸೆತ, 3 ಬೌಂಡರಿ) ಹೇಟ್ಮೆಯರ್ ಔಟಾಗದೇ 14 ರನ್ (7 ಎಸೆತ, 1 ಬೌಂಡರಿ, 1ಸಿಕ್ಸರ್) ಚಚ್ಚಿದರು.

ಅಶ್ವಿನ್ ಮತ್ತು ಪರಾಗ್ 37 ಎಸೆತಗಳಲ್ಲಿ 54 ರನ್ ಜೊತೆಯಾಟವಾಡಿದರೆ, ಪರಾಗ್ ಮತ್ತು ಜರೇಲ್ 23 ಎಸೆತಗಳಲ್ಲಿ 52 ರನ್ ಹೊಡೆದರು. ಅಂತಿಮವಾಗಿ ಹೇಟ್ಮೆಯರ್ ಮತ್ತು ಜರೇಲ್ ಮುರಿಯದ 6ನೇ ವಿಕೆಟಿಗೆ ಕೇವಲ 16 ಎಸೆತಗಳಲ್ಲಿ 43 ರನ್ ಜೊತೆಯಾಟವಾಡಿದ ಪರಿಣಾಮ ತಂಡದ ಮೊತ್ತ 180ರ ಗಡಿ ದಾಟಿತು.

## ಇಂದು ಆರ್‌ಸಿಬಿ / ಕೆಕೆಆರ್ ನಡುವೆ ಹೈವೋಲ್ಟೇಜ್ ಕದನ

ತವರು ಮೈದಾನ ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಇಂದು ಕೋಲ್ಕತಾ ನೈಟ್ ರೈಡರ್ಸ್ ತಂಡವನ್ನು ಎದುರಿಸಲು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಸಜ್ಜಾಗಿದೆ. 17ನೇ ಆವೃತ್ತಿಯ ಐಪಿಎಲ್‌ನಲ್ಲಿ ಆರ್‌ಸಿಬಿಗೆ ಇದು 3ನೇ ಪಂದ್ಯವಾಗಿದ್ದು, ತವರಿನಲ್ಲಿ ನಡೆಯುತ್ತಿರುವ 2ನೇ ಪಂದ್ಯವಾಗಿದೆ. ಇನ್ನೂ ಕೆಕೆಆರ್‌ಗೆ ಆವೃತ್ತಿಯ 2ನೇ ಪಂದ್ಯವಾಗಿದೆ. ಇತ್ತಂಡಗಳು ಈವರೆಗೆ ಒಟ್ಟು 32 ಪಂದ್ಯಗಳಲ್ಲಿ ಮುಖಾಮುಖಿಯಾಗಿದ್ದು, ಆರ್‌ಸಿಬಿ 14 ರಲ್ಲಿ ಗೆಲುವು ಸಾಧಿಸಿದ್ದರೆ, ಕೋಲ್ಕತ್ತಾ 18 ಪಂದ್ಯಗಳಲ್ಲಿ ಜಯಗಳಿಸಿದೆ. ಕೆಕೆಆರ್ ವಿರುದ್ಧ ಬೆಂಗಳೂರು ತಂಡ ಗರಿ?ಠ ರನ್ 213 ಆಗಿದ್ದರೆ, ಬೆಂಗಳೂರು ತಂಡದ ವಿರುದ್ಧ ಕೆಕೆಆರ್ ಗಳಿಸಿರುವ ಗರಿ?ಠ ರನ್ 222 ರನ್ ಆಗಿದೆ. ಟಾಪ್-4ನಲ್ಲಿ ಕೋಲ್ಕತ್ತಾ: ಶ್ರೇಯಸ್ ಅಯ್ಯರ್ ನಾಯಕತ್ವದ ಕೆಕೆಆರ್ ಪಡೆ, ತನ್ನ ತವರು ಮೈದಾನದಲ್ಲಿ ಆಡಿದ ಮೊದಲ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ ಜಯ ಸಾಧಿಸಿತ್ತು. ಅತ್ತ ಆರ್‌ಸಿಬಿ ತಂಡವು ಆಡಿರುವ 2 ಪಂದ್ಯಗಳಲ್ಲಿ, ಪಂಜಾಬ್ ವಿರುದ್ಧದ ಕೊನೆಯ ಪಂದ್ಯ ಗೆದ್ದು 2 ಅಂಕ ಸಂಪಾದಿಸಿದೆ. ತಂಡವು ಸದ್ಯ ಅಂಕಪಟ್ಟಿಯಲ್ಲಿ 6ನೇ ಸ್ಥಾನದಲ್ಲಿದ್ದರೆ, ಕೋಲ್ಕತಾ 1 ಪಂದ್ಯದಿಂದ 2 ಅಂಕ ಗಳಿಸಿ



4ನೇ ಸ್ಥಾನದಲ್ಲಿದೆ. ಬೆಂಗಳೂರು ಮೈದಾನವು ಚಿಕ್ಕ ಬೌಂಡರಿಗಳನ್ನು ಹೊಂದಿರುವುದರಿಂದ ಇದು ಬ್ಯಾಟಿಂಗ್ ಸ್ನೇಹಿ ಪಿಚ್ ಆಗಿದೆ. ಈ ಪಂದ್ಯದಲ್ಲಿ ಉಭಯ ತಂಡಗಳಲ್ಲೂ ಪವರ್ ಹಿಟ್ಟರ್‌ಗಳಿದ್ದಾರೆ. ಹೀಗಾಗಿ ಬ್ಯಾಟರ್‌ಗಳಿಗೆ ಪಿಚ್ ಸ್ವರ್ಗವಾಗಿದ್ದು, ರನ್ ಹೊಳೆ ಹರಿಯುವ ಸಾಧ್ಯತೆಗಳಿವೆ.

ಐಪಿಎಲ್ ಕ್ರಿಕೆಟ್ ಇತಿಹಾಸದಲ್ಲೇ ಅತ್ಯಧಿಕ ಬೆಲೆಗೆ ಬಿಕರಿಯಾಗಿರುವ ಮಿಚೆಲ್ ಸ್ಟಾರ್ಕ್ ಅವರ ಮೇಲೆ ಎಲ್ಲರ ಕಣ್ಣು ನೆಟ್ಟಿದೆ. ಭಾರೀ ನಿರೀಕ್ಷೆಯೊಂದಿಗೆ ಕಣಕ್ಕಿಳಿದಿದ್ದ ಮಿಚೆಲ್ ಸ್ಟಾರ್ಕ್ ಮೊದಲ ಪಂದ್ಯದಲ್ಲಿ ಒಂದೇ ಒಂದು ವಿಕೆಟ್ ಪಡೆಯದೇ 4 ಓವರ್ ಗಳಲ್ಲಿ 53 ರನ್ ಚಚ್ಚಿಸಿಕೊಂಡು, ಟೀಕೆಗೆ ಗುರಿಯಾಗಿದ್ದರು. ಹಾಗಾಗಿ ಈ ಪಂದ್ಯದಲ್ಲಾದರೂ ಆರ್‌ಸಿಬಿ ಕಲಿಗಳನ್ನು ಕಟ್ಟಿಹಾಕುತ್ತಾರಾ ಅನ್ನೋದನ್ನ ಕಾದುನೋಡಬೇಕಿದೆ. 17ನೇ ಆವೃತ್ತಿಯಲ್ಲಿ ಮತ್ತೆ ತವರು ತಂಡಕ್ಕೆ ಮೆಂಟರ್ ಆಗಿ ಮರಳಿರುವ ಕೆಕೆಆರ್ ತಂಡದ ಮಾಜಿ ಆಟಗಾರ ಗೌತಮ್ ಗಂಭೀರ್ ಹಾಗೂ ಕೊಹ್ಲಿ ಮತ್ತೆ ಮುಖಾಮುಖಿಯಾಗುತ್ತಿದ್ದಾರೆ. ಕಳೆದ ಆವೃತ್ತಿಯಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡದ ಕೋಚ್ ಆಗಿದ್ದ ಗಂಭೀರ್ ಹಾಗೂ ಆರ್‌ಸಿಬಿ ಆಟಗಾರ ಕೊಹ್ಲಿ ನಡುವೆ ಮಾತಿನ ಚಕಮಕಿ ನಡೆದು, ದೊಡ್ಡಮಟ್ಟದಲ್ಲಿ ಸದ್ದು ಮಾಡಿತ್ತು.

# ಧರ್ಮ ಸಂಕಟಕ್ಕೆ ಸಿಲುಕಿದ ಬಿಜೆಪಿ ಸಂಸದ ಶ್ರೀನಿವಾಸ್ ಪ್ರಸಾದ್

**ಮೈಸೂರು:** ಮೈಸೂರು-ಕೊಡಗು, ಚಾಮರಾಜನಗರ ಲೋಕಸಭಾ ಕ್ಷೇತ್ರವನ್ನ ಸಿಎಂ ಸಿದ್ದರಾಮಯ್ಯ ಗಂಭೀರವಾಗಿ ಪರಿಗಣಿಸಿದ್ದಾರೆ. ಶತಾಯಗತಾಯ 2 ಕ್ಷೇತ್ರಗಳನ್ನ ಕೈ ತೆಕ್ಕೆಗೆ ತೆಗೆದುಕೊಳ್ಳಲು ಸಾಕ?ಟ್ಟು ತಂತ್ರ ರೂಪಿಸಿದ್ದಾರೆ. ಹೀಗಾಗಿ ರೆಸಾರ್ಟ್‌ನಲ್ಲಿ ಕೂತು ಅನೇಕರಿಗೆ ಗಾಳ ಹಾಕಿ ತನ್ನ ಕಡೆ ಸೆಳೆಯುವಲ್ಲಿ ಯಶಸ್ವಿಯಾಗಿದ್ದಾರೆ. ಮತ್ತೊಂದೆಡೆ ಬಿಜೆಪಿ ಸಂಸದ ಶ್ರೀನಿವಾಸ್ ಪ್ರಸಾದ್ ಬೆಂಬಲ ಪಡೆಯಲು ಸಿಎಂ ಮುಂದಾಗಿದ್ದು ರಣತಂತ್ರ ಹೆಣೆಯುತ್ತಿದ್ದಾರೆ. ಆದರೆ ಬಿಜೆಪಿಯನ್ನೂ ಬಿಡಲಾಗದೆ, ಕಾಂಗ್ರೆಸ್‌ಗೂ ಹೋಗಲಾಗದೆ ಶ್ರೀನಿವಾಸ್ ಪ್ರಸಾದ್ ಧರ್ಮ ಸಂಕಟಕ್ಕೆ ಸಿಲುಕಿದ್ದಾರೆ.

ಬಿಜೆಪಿ ಸಂಸದ ಶ್ರೀನಿವಾಸ್ ಪ್ರಸಾದ್ ರಾಜಕೀಯ ನಿವೃತ್ತಿ ಘೋಷಿಸಿದ್ದು, ಯಾವ ಪಕ್ಷದ ಪರವು ಪ್ರಚಾರ ಮಾಡಲ್ಲ ಎಂದಿದ್ದಾರೆ. ಆದ್ರೆ, ಶತಾಯಗತಾಯ ಪ್ರಸಾದ್ ಬೆಂಬಲ ಪಡೆಯಲು ಸಿಎಂ ಸಿದ್ದರಾಮಯ್ಯ ತಂತ್ರ ಹೆಣೆಯುತ್ತಿದ್ದಾರೆ. ಇತ್ತ ಬಿಜೆಪಿಯನ್ನು ಬಿಡಲಾಗದೆ, ಅತ್ತ ಕಾಂಗ್ರೆಸ್‌ಗು ಹೋಗಲಾಗದೆ ಚಾಮರಾಜನಗರ ಸಂಸದ ವಿ.ಶ್ರೀನಿವಾಸ್ ಪ್ರಸಾದ್ ಕುಟುಂಬ ಹಾಗೂ ಬೆಂಬಲಿಗರು ಧರ್ಮ ಸಂಕಟದಲ್ಲಿ ಸಿಕ್ಕಿ ಹಾಕಿಕೊಂಡಿದ್ದಾರೆ.

ಸಂಸದ ಶ್ರೀನಿವಾಸ್ ಪ್ರಸಾದ್ ಅಳಿಯ ಡಾ.ಮೋಹನ್ ಬಿಜೆಪಿಯಿಂದ ಚಾಮರಾಜನಗರ ಟಿಕೆಟ್ ಆಕಾಂಕ್ಷಿಯಾಗಿದ್ದರು. ಮತ್ತೊಂದೆಡೆ ಮತ್ತೊಬ್ಬ ಅಳಿಯ, ನಂಜನಗೂಡು ಮಾಜಿ ಶಾಸಕ ಹರ್ಷವರ್ಧನ್ ಅವರು ಬಿಜೆಪಿಯಿಂದ ಶಾಸಕರಾಗಿದ್ದರು. ಸದ್ಯ ಓರ್ವ ಅಳಿಯನಿಗೆ ಟಿಕೆಟ್ ಕೈತಪ್ಪಿದ ಬೇಸರದಲ್ಲಿ ಅನ್ಯಾಯ ಆಯ್ತು ಅಂತ ಕಾಂಗ್ರೆಸ್ ಬೆಂಬಲಿಸಿದರೆ ಮತ್ತೊಬ್ಬ ಅಳಿಯನ



ಭವಿ?ಉ ಏನು ಅನ್ನೋ ಚಿಂತೆ ಕಾಡುತ್ತಿದೆ. ಇಲ್ಲ ಒಂದೇ ಕುಟುಂಬ ಎರಡು ಪಕ್ಷದಲ್ಲಿ ಇರಬೇಕಾದ ಪರಿಸ್ಥಿತಿ ಎದುರಾಗಿದೆ.

ಒಂದು ವೇಳೆ ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್ ನಿಂದ ಶ್ರೀನಿವಾಸ್ ಪ್ರಸಾದ್ ಅಳಿಯ ಡಾ.ಮೋಹನ್ ಟಿಕೆಟ್ ಪಡೆದರೆ ಹ?ವರ್ಧನ್ ದಾರಿ ಏನು ಅನ್ನೋ ಪ್ರಶ್ನೆ ಎದ್ದಿದೆ. ಈಗಾಗಲೇ ದರ್ಶನ್ ಧ್ರುವನಾರಾಯಣ್ ಕಾಂಗ್ರೆಸ್ ಪಕ್ಷದಿಂದ ನಂಜನಗೂಡಿನಿಂದ ಆಯ್ಕೆ ಆಗಿದ್ದಾರೆ. ಹೀಗಾಗಿ ಶ್ರೀನಿವಾಸ್ ಪ್ರಸಾದ್ ಕುಟುಂಬ ಹಾಗೂ ಬೆಂಬಲಿಗರು ಧರ್ಮ ಸಂಕಟದಲ್ಲಿ ಸಿಲುಕಿದ್ದಾರೆ. ಈಗಾಗಲೇ ರಾಜಕೀಯ ನಿವೃತ್ತಿ ಪಡೆದಿರುವ ಶ್ರೀನಿವಾಸ್ ಪ್ರಸಾದ್ ಸದ್ಯ ಗೊಂದಲದಲ್ಲಿದ್ದಾರೆ.

ಚಾಮರಾಜನಗರ ಕ್ಷೇತ್ರವನ್ನ ಗೆಲ್ಲಲು ಸಿಎಂ ಸಿದ್ದರಾಮಯ್ಯ ರಣತಂತ್ರ ರೂಪಿಸಿದ್ದಾರೆ. ಕಾಂಗ್ರೆಸ್ ಭದ್ರಕೋಟೆಯಾಗಿದ್ದ ಚಾಮರಾಜನಗರ ಕಳೆದ ಬಾರಿ ಕೈ ತಪ್ಪಿತ್ತು. ಮತ್ತೆ ಕೈ ತೆಕ್ಕೆ ತೆಗೆದಕೊಳ್ಳಲು ಸಿಎಂ ಚಿತ್ತ ನೆಟ್ಟಿದ್ದಾರೆ. ಅದಕ್ಕಾಗಿ ಖುದ್ದು ಸಿದ್ದರಾಮಯ್ಯ ಶ್ರೀನಿವಾಸನ್ ಪ್ರಸಾದ್ ಅವರಿಗೆ ಫೋನ್ ಮೂಲಕ ಒಂದು ಸುತ್ತು ಮಾತುಕತೆ ನಡೆಸಿದ್ದಾರೆ. ಆರೋಗ್ಯ ವಿಚಾರಿಸುವ ನೆಪದಲ್ಲಿ ಮಾತುಕತೆ ಆರಂಭಿಸಿದ್ದಾರೆ. ಮೈಸೂರು ಚಾ.ನಗರ ಭಾಗದಲ್ಲಿ ಹೆಚ್ಚು ಪ್ರಭಾವ ಹೊಂದಿರುವ ಶ್ರೀನಿವಾಸ್ ಪ್ರಸಾದ್ ಅವರನ್ನು ಭೇಟಿಯಾಗುವಂತೆ ಸುನೀಲ್ ಬೋಸ್‌ಗೆ ತಿಳಿಸಲಾಗಿದ್ದು ಸುನೀಲ್ ಭೇಟಿ ಮಾಡಿ ಆಶೀರ್ವಾದ ಪಡೆದಿದ್ದಾರೆ. ಸುನೀಲ್ ಬೋಸ್ ಚಾಮರಾಜನಗರ ಲೋಕಸಭಾ ಕ್ಷೇತ್ರದ ಅಭ್ಯರ್ಥಿ. ಆದರೆ ಇನ್ನು ಘೋಷಣೆಯಾಗಿಲ್ಲ.

# ಹಾಸನ ಮೈತ್ರಿ ಅಭ್ಯರ್ಥಿಯಾಗಿ ಪ್ರಜ್ವಲ್ ರೇವಣ್ಣ ನಾಮಪತ್ರ ಸಲ್ಲಿಕೆ

**ಹಾಸನ:** ಲೋಕಸಭಾ ಚುನಾವಣೆಗೆ ನಾಮಪತ್ರ ಸಲ್ಲಿಕೆ ಕಾರ್ಯ ಆರಂಭಗೊಂಡಿದ್ದು, ಹಾಸನ ಮೈತ್ರಿ ಅಭ್ಯರ್ಥಿಯಾಗಿ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಸಾಂಕೇತಿಕವಾಗಿ ನಾಮಪತ್ರ ಸಲ್ಲಿಸಿದ್ದಾರೆ. ಜಿಲ್ಲಾ ಚುನಾವಣಾಧಿಕಾರಿ ಸಿ.ಸತ್ಯಭಾಮಗೆ ಪ್ರಜ್ವಲ್ ನಾಮಪತ್ರ ಸಲ್ಲಿಕೆ ಮಾಡಿದ್ದು, ಶಾಸಕರಾದ ಹೆಚ್‌ಡಿ ರೇವಣ್ಣ, ಎ.ಮಂಜು, ಹೆಚ್‌ಪಿ ಸ್ವರೂಪ್ ಪ್ರಕಾಶ್, ಸಿಎನ್ ಬಾಲಕೃಷ್ಣ ಉಪಸ್ಥಿತರಿದ್ದರು. ಇದಕ್ಕೂ ಮೊದಲು ಪ್ರಜ್ವಲ್ ರೇವಣ್ಣ ದೇವರ ಮೊರೆ ಹೋಗಿದ್ದು, ಹಾಸನ ಜಿಲ್ಲೆ ಹೊಳೆನರಸೀಪುರ ತಾಲೂಕಿನ ಮಾವಿನಕೆರೆಯಲ್ಲಿರುವ ಶ್ರೀ




ರಂಗನಾಥಸ್ವಾಮಿ ದೇವಾಲಯದಲ್ಲಿ ನಾಮಪತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಪ್ರಜ್ವಲ್ ರೇವಣ್ಣಗೆ ಶಾಸಕ ಹೆಚ್‌ಪಿ ಸ್ವರೂಪ್ ಪ್ರಕಾಶ್ ಸಾಥ್ ನೀಡಿದ್ದಾರೆ. ನಾಮಪತ್ರ ಸಲ್ಲಿಕೆಗೂ ಮುನ್ನ ಹುಟ್ಟೂರು ಹರದನಹಳ್ಳಿಯಲ್ಲಿರುವ ಮಾಜಿ ಪ್ರಧಾನಿ ಹೆಚ್‌ಡಿ ದೇವೇಗೌಡರ ಆಶೀರ್ವಾದ ಪಡೆದಿದ್ದು, ಸೂಚಕರಾಗಿ ನಾಮಪತ್ರಕ್ಕೆ ಸಹಿ ಮಾಡಿ ಹೆಚ್‌ಡಿಡಿ ಮೊಮ್ಮಗನಿಗೆ ಹಾರೈಸಿದ್ದಾರೆ. ಬಳಿಕ ಶಾಸಕರಾದ ಎ.ಮಂಜು, ಸಿಎನ್ ಬಾಲಕೃಷ್ಣ ಅವರ ಕಾಲಿಗೆ ಬಿದ್ದು ಪ್ರಜ್ವಲ್ ಆಶೀರ್ವಾದ ಪಡೆದುಕೊಂಡಿದ್ದಾರೆ. ಮಗನ ನಾಮಪತ್ರ ಸಲ್ಲಿಕೆ ಹಿನ್ನೆಲೆ ಮಾಜಿ ಸಚಿವ ಹೆಚ್‌ಡಿ ರೇವಣ್ಣ ದೇವರಿಗೆ ಪೂಜೆ ಸಲ್ಲಿಸಿ ಬರಿಗಾಲಿನಲ್ಲೇ ಚುನಾವಣಾಧಿಕಾರಿಗಳ ಕಾರ್ಯಾಲಯಕ್ಕೆ ತೆರಳಿ ಮಗನ ನಾಮಪತ್ರ ಸಲ್ಲಿಕೆ ಕಾರ್ಯದಲ್ಲಿ ಭಾಗಿಯಾಗಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com